ಸಂಪುಟ: 14 Volume | ಸಂಚಿಕೆ: 93 Issue | ಪುಟಗಳು 08 Pages | ಗುರುವಾರ 16 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಹಣಕ್ಕೆ ಕೈ, ಕಾಲುಗಳಿದ್ದಂತೆ ಉಪಯೋಗಿಸಿ, ಇಲ್ಲವೇ ಕಳೆದುಕೊಳ್ಳಿ.

–ಹೆನ್ರಿ ಫೋರ್ಡ್

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ



ಸಿಎಂ ಡಿ.ಕೆ. ಶಿವಕುಮಾರ್ ಅವರು ಇಂದು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

## ಹಣ ಸಂಗ್ರಹಿಸಿ ವಂಚನೆ: ಇಬ್ಬರು ಮಹಿಳೆಯರ ಬಂಧನ

**ಬಾಗಲಕೋಟೆ:** ಮಹಿಳೆಯರಿಂದ ಹಣ ಸಂಗ್ರಹಿಸಿ ವಾಪಸ್ ನೀಡದೆ ವಂಚಿಸಿರುವ ಪ್ರಕರಣ ದಾಖಲಾಗಿರುವ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆಯ ಬೀಳಗಿ ಪಟ್ಟಣದ ಶ್ರೀದುರ್ಗಾದೇವಿ ಮಹಿಳಾ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷೆ ಹಾಗೂ ಕಾರ್ಯದರ್ಶಿಯನ್ನು ಪೊಲೀಸರು ಬಂಧಿಸಿದ್ದಾರೆ. ಸಂಸ್ಥೆಯ ಅಧ್ಯಕ್ಷೆ ವಿದ್ಯಾ ಹಳ್ಳೂರು, ಕಾರ್ಯದರ್ಶಿ ರಚನಾ ಬಂಟನೂರು ಬಂಧಿತ ಆರೋಪಿಗಳು. ಮಹಿಳೆಯರಿಂದ ಸಂಗ್ರಹಿಸಿದ್ದ 43.40 ಲಕ್ಷ ರೂ.ಗಳ ವಂಚನೆ ನಡೆದಿರುವುದು ಪೊಲೀಸ್ ತನಿಖೆಯಲ್ಲಿ ಕಂಡು ಬಂದಿದೆ. ಸಂಸ್ಥೆ ಹಣ ಪಡೆದು ವಂಚಿಸುತ್ತಿದೆ ಎಂದು ದೂರಿ ಸೋಮವಾರ ಮಹಿಳೆಯರು ಸಂಸ್ಥೆಗೆ ಮುತ್ತಿಗೆ ಹಾಕಿದ್ದರು.ನಂತರ ಪ್ರಕರಣ ದಾಖಲಿಸಿದ್ದರು. ದೂರು ಆಧರಿಸಿ ಮಂಗಳವಾರ ದಾಳಿ ಕೈಗೊಂಡಿರುವ ಪೊಲೀಸರು 200ಕ್ಕೂ ಅಧಿಕ ರಿಜಿಸ್ಟರ್, ರಶೀದಿ ಪುಸ್ತಕ, ಕಂಪ್ಯೂಟರಗಳನ್ನು ವಶಪಡಿಸಿಕೊಂಡು ಪರಿಶೀಲಿಸಿದ್ದಾರೆ. ಒಟ್ಟು 9 ಜನರ ಮೇಲೆ ದೂರು ದಾಖಲಿಸಿದ್ದು, ಇಬ್ಬರನ್ನು ವಶಕ್ಕೆ ಪಡೆಯಲಾಗಿದೆ ಎಂದು ಎಸ್ಪಿ ಸಿದ್ಧಾರ್ಥ ಗೋಯಲ್ ತಿಳಿಸಿದ್ದಾರೆ.

## ಟಾಟಾ ಮೋಟಾರ್ಸ್ ನಿಂದ ಕೌಶಲ ಯೋಜನೆಯ ಮೂಲಕ ಉದ್ಯೋಗ

**ಬೆಂಗಳೂರು:** ಪ್ರತಿಷ್ಠಿತ ಟಾಟಾ ಮೋಟಾರ್ಸ್ ಸಂಸ್ಥೆಯು ವಿಶ್ವ ಯುವ ಕೌಶಲ ದಿನದ ಸಂದರ್ಭದಲ್ಲಿ, ಭಾರತೀಯ ಯುವ ಪೀಳಿಗೆಯ ಸಾಧನೆ ಮತ್ತು ಆಕಾಂಕ್ಷೆಗಳಿಗೆ ರೆಕ್ಕೆ ನೀಡುವ ತನ್ನ ಹೆಮ್ಮೆಯ ಕೌಶಲ್ಯ ಯೋಜನೆಯು ಭರ್ಜರಿ ಯಶಸ್ಸನ್ನು ಗಳಿಸಿರುವುದಾಗಿ ಘೋಷಿಸಿದೆ. ಶಿಕ್ಷಣ ಮತ್ತು



ಉದ್ಯೋಗಾವಕಾಶಗಳ ನಡುವಿನ ಅಂತರವನ್ನು ಕಡಿಮೆ ಮಾಡುವ ಉದ್ದೇಶದಿಂದ ರೂಪಿಸಲಾದ ಕೌಶಲ್ಯ ಯೋಜನೆಯು ಉದ್ಯಮ ರಂಗದ ನೇರ ನೇತೃತ್ವದಲ್ಲಿ ದೇಶದಲ್ಲಿ ನಡೆಯುತ್ತಿರುವ ಅತಿ ದೊಡ್ಡ ಕೌಶಲಾಭಿವೃದ್ಧಿ ಯೋಜನೆಗಳಲ್ಲಿ ಒಂದಾಗಿ ಹೊರಹೊಮ್ಮಿದೆ. ಕೌಶಲ್ಯ ಯೋಜನೆಯಲ್ಲಿ ಇದುವರೆಗೆ 23,000ಕ್ಕೂ ಹೆಚ್ಚು ಯುವಜನತೆ ಹೆಸರು ನೋಂದಾಯಿಸಿಕೊಂಡಿದ್ದಾರೆ. ಅಲ್ಲದೆ, ಈ ತರಬೇತಿ ಮುಗಿಸಿದ 5,000ಕ್ಕೂ ಹೆಚ್ಚು ಪದವೀಧರರಿಗೆ ನೂರಕ್ಕೆ ನೂರರಷ್ಟು ಉದ್ಯೋಗಾವಕಾಶಗಳನ್ನು ಕಲ್ಪಿಸಿಕೊಡಲಾಗಿದ್ದು, ಇದರಲ್ಲಿ 50ಕ್ಕೂ ಹೆಚ್ಚು ಅಂತರರಾಷ್ಟ್ರೀಯ ಉದ್ಯೋಗಾವಕಾಶಗಳು ಸೇರಿವೆ. ಇದು ಉದ್ಯಮ ರಂಗದಲ್ಲಿ ನುರಿತ ಉದ್ಯೋಗಿಗಳಿಗೆ ಇರುವ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸಲು ಪ್ರಮುಖವಾಗಿ ನೆರವಾಗುತ್ತಿದೆ.



ಹುಮ್ನಾಬಾದ್ ಪಟ್ಟಣದಲ್ಲಿ ಬುಧವಾರ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ಅರಿವು ಮೂಡಿಸಲು ನಗರ ಸಭೆ ಹುಮ್ನಾಬಾದ್ ವತಿಯಿಂದ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಸದರಿ ಕಾರ್ಯಕ್ರಮದಲ್ಲಿ ಎಲೆಕ್ಷನ್ RO ಶ್ರೀ ಲಕ್ಷ್ಮೀಕಾಂತ್ ರೆಡ್ಡಿ,. ನಗರ ಸಭೆ ಪೌರಾಯುಕ್ತರು ಶ್ರೀಮತಿ ವನಿತಾ ಬಾಯಿ. ತಾಲೂಕು ಪಂಚಾಯತ್ EO ಶ್ರೀಮತಿ ದೀಪಿಕಾ ನಾಯ್ಕರ್. ತಾಲೂಕು ಮಟ್ಟದ ಅಧಿಕಾರಿಗಳು. ನಗರ ಸಭೆ ಅಧಿಕಾರಿ ಗಳು. ಶಾಲಾ ವಿದ್ಯಾರ್ಥಿಗಳು SIR ಜಾಥಾ ಕಾರ್ಯಕ್ರಮ ಯಶಸ್ವಿ ಗೊಳಿಸಿದರು.

## ಕರ್ತವ್ಯ ಲೋಪ: ಅಧಿಕಾರಿಗಳ ಅಮಾನತು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕೇಂದ್ರ ಕಾರಾಗೃಹದಿಂದ ಮೂರು ಖೈದಿಗಳು ತಪ್ಪಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ, ನಿರ್ಲಕ್ಷ್ಯ ಮತ್ತು ಕರ್ತವ್ಯ ಲೋಪಕ್ಕೆ ಸಂಬಂಧಿಸಿದ ಜೈಲಾಧಿಕಾರಿ ಮತ್ತು ಸಿಬ್ಬಂದಿಯನ್ನು ಅಮಾನತುಗೊಳಿಸಲಾಗಿದೆ ಹಾಗೂ ತಪ್ಪಿಸಿಕೊಂಡ ಖೈದಿಗಳನ್ನು ಸೆರೆಗಾಗಿ ಪರಿಣಾಮಕಾರಿ ಕ್ರಮಗಳನ್ನು ಅನುಸರಿಸಲು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿತ್ತು, ಪರಿಣಾಮವಾಗಿ ಓರ್ವ ಖೈದಿಯನ್ನು ಸೆರೆ ಹಿಡಿಯಲಾಗಿದೆ ಎಂದು ಟ್ವೀಟ್ ಮಾಡಿದ್ದಾರೆ.



ನಾನು ಗೃಹ ಸಚಿವನಾಗಿ ಜವಾಬ್ದಾರಿ ವಹಿಸಿಕೊಂಡ ಮೇಲೆ ಗೃಹ ಇಲಾಖೆಯ ಪ್ರತಿ ವಿಭಾಗಗಳ ಪರಿಶೀಲನಾ ಸಭೆ ನಡೆಸಿ, ಆ ಎಲ್ಲಾ ವಿಭಾಗಗಳ ಬಲವರ್ಧನೆಗೆ, ಉನ್ನತಿಕರಣಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಕಾರಾಗೃಹಗಳ ಸ್ಥಿತಿಗತಿಗಳ ಪರಿಶೀಲನೆ ಮತ್ತು ಬಂಧಿಖಾನೆ ಸಿಬ್ಬಂದಿಗಳ ಕಾರ್ಯಕ್ಷಮತೆಯ ಪರಿಶೀಲನೆ ನಡೆಸಲಿದ್ದೇನೆ. ಜೈಲುಗಳ ಸುಧಾರಣೆ, ಭದ್ರತಾ ವ್ಯವಸ್ಥೆಯ ಉನ್ನತಿಕರಣ ಮತ್ತು ಅಕ್ರಮಗಳಿಗೆ ಕಡಿವಾಣದಂತಹ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಬದ್ಧವಾಗಿದೆ ಎಂದಿದ್ದಾರೆ.

ಟೀಕೆಗಳಿಗೆ ಬಾಯ್ತೆರೆದು ಕುಳಿತಿರುವ ಬಿಜೆಪಿ ನಾಯಕರು ಒಮ್ಮೆ ತಮ್ಮ ಅವಧಿಯಲ್ಲಿ ರಾಜ್ಯದ ಜೈಲುಗಳ ಸ್ಥಿತಿ ಹೇಗಿತ್ತು ಎಂಬುದನ್ನು ಅವಲೋಕನ ಮಾಡಿಕೊಂಡರೆ ಒಳಿತು. 2010ರಲ್ಲಿ ಇದೇ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೊಪ್ಪಳ ಜಿಲ್ಲಾ ಕಾರಾಗೃಹದಿಂದ 8 ಖೈದಿಗಳು ಪರಾರಿಯಾಗಿದ್ದರು. ರಾಜ್ಯದ ಇತಿಹಾಸದಲ್ಲೇ ಇದು ದೊಡ್ಡ ಪ್ರಕರಣ ಎಂದು ಪರಿಗಣಿಸಬಹುದು. ಇದು ಅಂದಿನ ಗೃಹಸಚಿವರ ವೈಫಲ್ಯವೆಂದು ಬಿಜೆಪಿ ಹೇಳುತ್ತದೆಯೇ? ಎಂದು ವಾಗ್ದಾಳಿ ನಡೆಸಿದರು.

# ಜನರೇ ಸರ್ಕಾರದ ಧ್ವನಿ

### ಅಪಾರ್ಟ್ ಮೆಂಟ್ ಸಂಘಗಳ ಪ್ರತಿನಿಧಿಗಳ ಜತೆ ಸಿಎಂ ಸಂವಾದ | ಆಸ್ತಿಯ ಸಂಪೂರ್ಣ ಹಕ್ಕು ಮಾಲೀಕರಿಗೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಜನರೇ ಸರ್ಕಾರದ ದನಿಯಾಗಿದ್ದು, ಆಸ್ತಿ ಮಾಲೀಕರ ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಅರಿವಿದ್ದು, ಆಸ್ತಿಯ ಸಂಪೂರ್ಣ ಹಕ್ಕು ಮಾಲೀಕರಿಗಿರಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಕರ್ನಾಟಕ ಅಪಾರ್ಟ್ಮೆಂಟ್ (ಮಾಲೀಕತ್ವ ಮತ್ತು ನಿರ್ವಹಣೆ) 2026 ಕುರಿತು ಅಪಾರ್ಟ್ ಮೆಂಟ್ ಸಂಘಗಳ ಪ್ರತಿನಿಧಿಗಳೊಂದಿಗೆ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿ, ಆಸ್ತಿ ಕೊಳ್ಳುವಾಗ ಅದರ ಸಾಧಕ ಬಾಧಕಗಳನ್ನು ಮಾಲೀಕರೇ ನೋಡಿಕೊಳ್ಳುವಂತಾಗಬೇಕು. ಮಾಲೀಕರಾದ ಮೇಲೆ ಒಪ್ಪಂದ, ನೋಂದಣಿ, ಒಳಗೆ ಹೋದ ನಂತರ ಬೇರೆ ಬೇರೆ ರೀತಿಯಲ್ಲಿ ತಲೆದೋರುವ ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಸಂಪೂರ್ಣ ಅರಿವಿದೆ ಎಂದಿದ್ದಾರೆ.

**ವಿಶ್ವವೇ ಬೆಂಗಳೂರಿನತ್ತ:** ಜನರಿಗೆ ಸಹಾಯ ಮಾಡಬೇಕೆನ್ನುವುದು ನಮ್ಮ ಉದ್ದೇಶವಾಗಿದ್ದು, ಜನರು ಕಷ್ಟಪಟ್ಟು ತಲೆಯ ಮೇಲೆ ಸೂರು ಕಟ್ಟಿಕೊಂಡಿದ್ದಾರೆ. ಅದು ಸುಲಭದ ಮಾತಲ್ಲ ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿಕೆಶಿವಕುಮಾರ್ ಮಾಹಿತಿ ನೀಡಿದ್ದಾರೆ.

**ರಾಜ್ಯದಲ್ಲಿ ಇ ಖಾತಾ ಕ್ರಾಂತಿ:** ಸರ್ಕಾರ ರಾಜ್ಯದಲ್ಲಿ ಇ ಖಾತಾ ವನ್ನು ಮನೆ ಬಾಗಿಲಿಗೆ ಕೊಡುವ ವ್ಯವಸ್ಥೆಯನ್ನು ಕಲ್ಪಿಸಿ ಕ್ರಾಂತಿಯನ್ನೇ ಉಂಟುಮಾಡಿದೆ. ಬೆಂಗಳೂರಿನ 40 ಲಕ್ಷ ಆಸ್ತಿಗಳಲ್ಲಿ 26 ಲಕ್ಷ ಆಸ್ತಿಗಳಿಗೆ ಇ ಖಾತಾ ಮಾಡಿ ಕೊಡಲಾಗಿದೆ. ಇಡೀ ದೇಶದಲ್ಲಿ ಇಂಥ ಮತ್ತೊಂದು ವ್ಯವಸ್ಥೆ ಇಲ್ಲ ಎಂದಿದ್ದಾರೆ.



### ಕುಡಿವ ನೀರಿಗೆ ಸೂಕ್ತ ಕ್ರಮ

ಅಪಾರ್ಟ್ಮೆಂಟ್ ಗಲ್ಲಿ STP, ಕುಡಿಯುವ ನೀರು ವ್ಯವಸ್ಥೆ ಕಲ್ಪಿಸಲು ಸರ್ಕಾರ ಸುಧಾರಣೆಗಳನ್ನು ತಂದಿದೆ. ಅಂತರ್ಜಲ ವೃದ್ಧಿ, ಕಾವೇರಿ 5 ನೇ ಹಂತಗಳ ಮೂಲಕ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ಕೆಲವು ಡೆವೆಲಪರ್ ಗಳು ಸಮಸ್ಯೆಗಳನ್ನು ಸೃಷ್ಟಿಸುತ್ತಾರೆ. ಅವರೊಂದಿಗೂ ಮಾತನಾಡಿ ದಾಖಲಾತಿಗಳ ವರ್ಗಾವಣೆ ಸರಾಗವಾಗಿ ಆಗಬೇಕೆಂದು ಸೂಚಿಸಲಾಗುವುದು ಎಂದಿದ್ದಾರೆ ಸಿಎಂ.

### ಅಧಿಕಾರ ವಿಕೇಂದ್ರೀಕರಣ

ಅಧಿಕಾರ ವಿಕೇಂದ್ರೀಕರಣ ನಮ್ಮ ಸರ್ಕಾರದ ಉದ್ದೇಶವಾಗಿದೆ. ಈಸ್ ಆಫ್ ಬಿಸಿನೆಸ್ ಗಾಗಿ ನಗರದಲ್ಲಿ ಐದು ಕಾರ್ಪೊರೇಷನ್‌ಗಳನ್ನು ರಚಿಸಲಾಗಿದ್ದು, ವಿಮಾನ ನಿಲ್ದಾಣ, ಎಲೆಕ್ಟ್ರಾನಿಕ್ ಸಿಟಿ ಬಳಿ, ಅಕ್ಕಪಕ್ಕದ ಅಪಾರ್ಟ್ ಮೆಂಟ್ ಗಳ ಸಮಸ್ಯೆಗಳನ್ನೂ ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ಬದ್ಧವಾಗಿದೆ. ಅಧಿಕಾರ ವಿಕೇಂದ್ರೀಕರಣ ನಮ್ಮ ಸರ್ಕಾರದ ಉದ್ದೇಶ.

### ವಿದೇಶಿ ಹೂಡಿಕೆದಾರರು

ದಾವೋಸ್ ಗೆ ಭೇಟಿ ನೀಡಿದ ಸಂದರ್ಭದಲ್ಲಿ ಎಲ್ಲಾ ಹೂಡಿಕೆದಾರರು ಬೆಂಗಳೂರು ನಗರದಲ್ಲಿ ಹೂಡಿಕೆ ಮಾಡಲು ಆಸಕ್ತಿ ವ್ಯಕ್ತಪಡಿಸಿದ್ದಾರೆ. ಬಗ್ಗೆ ತಿಳಿಸಿದ ಮುಖ್ಯಮಂತ್ರಿಗಳು ಮುಂಬೈ ಹಾಗೂ ಇತರೆ ನಗರಗಳಲ್ಲಿ ಹೂಡಿಕೆ ಮಾಡುವುದು ದುಬಾರಿಯಾಗಿರುವುದರಿಂದ ವಿದೇಶಿ ಹೂಡಿಕೆದಾರರು ಬೆಂಗಳೂರಿನತ್ತ ಆಕರ್ಷಿತರಾಗಿದ್ದರು ಎಂದು ತಿಳಿಸಿದ್ದಾರೆ.

### ಸಮಸ್ಯೆ ಪರಿಹಾರಕ್ಕೆ ಬದ್ಧ

ಬೆಂಗಳೂರಿನಲ್ಲಿ ಬಹಳ ವರ್ಷಗಳಿಂದ ಅಸ್ತಿತ್ವದಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರಬದ್ಧವಾಗಿದೆ. ನಗರದಲ್ಲಿ 1.35 ಕೋಟಿ ವಾಹನಗಳಿದ್ದು ಗುಂಡಿಗಳನ್ನು ಮುಚ್ಚಲೆಂದೇ 4000 ಕೋಟಿ ವೆಚ್ಚಮಾಡಲಾಗಿದೆ. ಬಡವರೂ ಮನೆ ಕಟ್ಟಲು ಅಗತ್ಯ ನೆರವು ಒದಗಿಸಲು ಸರ್ಕಾರ ಬದ್ಧ. ವಿಚಾರದಲ್ಲಿ ಸಮಸ್ಯೆಗಳಿದ್ದು, ಪರಿಹಾರಕ್ಕೂ ಈ ಸಿದ್ಧ ಎಂದಿದ್ದಾರೆ.

## ಮಗುವಿನ ಹೊಟ್ಟೆಯಿಂದ ಕಾಯಿನ್ ಬ್ಯಾಟರಿ ಯಶಸ್ವಿಯಾಗಿ ಹೊರತೆಗೆದ ವೈದ್ಯರ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ನಗರದ ಹೊರವಲಯದಲ್ಲಿರುವ ಜೈನ್ ಮಿಷನ್ ಆಸ್ಪತ್ರೆಯ ವೈದ್ಯರ ತಂಡವು ಒಂದು ವರ್ಷದ ಮಗುವಿನ ಹೊಟ್ಟೆಯಲ್ಲಿ ಸಿಲುಕಿದ್ದ ಕಾಯಿನ್ ಬ್ಯಾಟರಿಯನ್ನು ಯಶಸ್ವಿಯಾಗಿ ಹೊರತೆಗೆದು ಜೀವ ಉಳಿಸುವ ಸಾಧನೆ ಮಾಡಿದೆ.ಆಸ್ಪತ್ರೆಯ ವೈದ್ಯರು ಮತ್ತು ಸಿಬ್ಬಂದಿಯ ಸಮಯೋಚಿತ ಚಿಕಿತ್ಸೆ ಹಾಗೂ ಪರಿಣತಿಗೆ ಸಾರ್ವಜನಿಕರಿಂದ ವ್ಯಾಪಕ ಪ್ರಶಂಸೆ ವ್ಯಕ್ತವಾಗುತ್ತಿದೆ.

ದೇವನಹಳ್ಳಿ ನಿವಾಸಿಯಾದ ಒಂದು ವರ್ಷದ ಅನ್ವಿಕಾ ಎಂಬ ಹೆಣ್ಣುಮಗು ಮನೆಯಲ್ಲಿ ಆಟವಾಡುತ್ತಿದ್ದ ವೇಳೆ ಆಕಸ್ಮಿಕವಾಗಿ ಗಡಿಯಾರಗಳಲ್ಲಿ ಬಳಸುವ ಕಾಯಿನ್ ಬ್ಯಾಟರಿಯನ್ನು ನುಂಗಿತ್ತು ತಕ್ಷಣವೇ ಪೋಷಕರು ಮಗುವನ್ನು ಜೈನ್ ಮಿಷನ್ ಆಸ್ಪತ್ರೆಗೆ ದಾಖಲಿಸಿದರು. ಪರಿಶೀಲನೆ ವೇಳೆ ಬ್ಯಾಟರಿ ಮಗುವಿನ ಹೊಟ್ಟೆಯಲ್ಲಿರುವುದು ದೃಢಪಟ್ಟಿತು.ಈ ಸಂಕೀರ್ಣ ಪ್ರಕರಣವನ್ನು ವೈದ್ಯರು ಸವಾಲಾಗಿ ಸ್ವೀಕರಿಸಿ,ತುರ್ತು ಚಿಕಿತ್ಸೆಯಡಿ ಎಂಡೋಸ್ಕೋಪಿ ಹಾಗೂ ಸಿಡೇಷನ್ ನೆರವಿನಿಂದ ಯಾವುದೇ ತೊಂದರೆಯಾಗದಂತೆ ಸುರಕ್ಷಿತವಾಗಿ ಬ್ಯಾಟರಿಯನ್ನು ಹೊರತೆಗೆದರು ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

ಕೇವಲ 7 ಕೆ.ಜಿ. ತೂಕವಿದ್ದ ಈ ಒಂದು ವರ್ಷದ ಮಗುವಿನ ತುರ್ತು ಪ್ರಕರಣವನ್ನು ವೈದ್ಯರು ಅತ್ಯಂತ ನಿಖರತೆ ಮತ್ತು ಪರಿಣತಿಯಿಂದ ಯಶಸ್ವಿಯಾಗಿ ನಿರ್ವಹಿಸಿದರು.ಈ ಮೂಲಕ ಜೈನ್ ಮಿಷನ್ ಆಸ್ಪತ್ರೆ ತನ್ನ ಉನ್ನತ ವೈದ್ಯಕೀಯ ಸೇವಾ ಗುಣಮಟ್ಟ ಹಾಗೂ ವೃತ್ತಿಪರ ಸಾಮರ್ಥ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.

ಈ ಕುರಿತು ಆಸ್ಪತ್ರೆಯ ಆಡಳಿತ ಮಂಡಳಿ ಮಾತನಾಡಿ, ವೈದ್ಯರ ತಂಡದ ಸಮರ್ಪಣೆ ಹಾಗೂ ತ್ವರಿತ ಕಾರ್ಯಾಚರಣೆಯಿಂದ ಮಗುವಿನ ಜೀವ ಉಳಿಸಲು ಸಾಧ್ಯವಾಗಿದೆ.ನಮ್ಮ ವೈದ್ಯರು ಮತ್ತು ಸಿಬ್ಬಂದಿಯ ಬಗ್ಗೆ ಹೆಮ್ಮೆ ಇದೆ ಎಂದು ತಿಳಿಸಿತು.ಈ ಯಶಸ್ವಿ ಚಿಕಿತ್ಸೆಯಲ್ಲಿ ಡಾ.ಕಾರ್ತಿಕ್, ಡಾ.ವಿಜಯ್ ಎನ್. ಹಾಗೂ ಶಸ್ತ್ರಚಿಕಿತ್ಸಾ ಕೊಠಡಿ (OT)ಯ ಸಂಪೂರ್ಣ ಸಿಬ್ಬಂದಿ ತಂಡ ಮಹತ್ವದ ಪಾತ್ರವಹಿಸಿದ್ದು,ಆಸ್ಪತ್ರೆಯ ಆಡಳಿತ ಮಂಡಳಿ ಅವರ ಸೇವೆಯನ್ನು ಅಭಿನಂದಿಸಿದೆ.

## ಎಸ್ಐಆರ್ ಯಶಸ್ವಿಗೆ ಬೇಕು ಎಲ್ಲರ ಸಹಕಾರ



• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಯಶಸ್ವಿಗೆ ಪ್ರತಿಯೊಬ್ಬ ಸಾರ್ವಜನಿಕರು, ರಾಜಕೀಯ ಪಕ್ಷಗಳು ಮತ್ತು ಅಧಿಕಾರಿಗಳ ಸಹಕಾರ ಅಗತ್ಯ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದ್ದಾರೆ.

ತಾಲೂಕಿನ ಹುಡಗಿ ಗ್ರಾಮದ ಐತಿಹಾಸಿಕ ಹನುಮಾನ ಮಂದಿರದಲ್ಲಿ ಎಸ್ಐಆರ್ ಕುರಿತು ಆಯೋಜಿಸಿದ್ದ ಜನಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಫ್ಸರಮಿಯ, ಗ್ರಾಮೀಣ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಓಂಕಾರ ತುಂಬಾ, ಪ್ರಮುಖರಾದ ಮಹೇಶ ಅಗಡಿ, ಕಂಟೆಪ್ಪ ದಾನ, ಕರಬಸಪ್ಪ ಮಲಶಟ್ಟಿ, ಪ್ರಭು ಮಾಳನಾಯಕ, ಶೇಖರ ಜೀರಗಿ, ಗುರುಪ್ರಸಾದ ಮುಗಳಿ, ಅನಿಲ ಕನಶಟ್ಟಿ, ಜೀಲಾನಿ, ಪ್ರದೀಪ, ಜಾಕ್ಸನ್, ರಾಜಶೇಖರ, ಮಾಣಿಕ, ಶಂಕರ, ಸುಮೀತ, ಮೋಹನ್, ರಾಜಕುಮಾರ ಸೇರಿ ಅನೇಕರಿದ್ದರು.

18 ವರ್ಷ ತುಂಬಿದ ಪ್ರತಿಯೊಬ್ಬ ಅರ್ಹ ನಾಗರಿಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಹೆಸರು, ವಿಳಾಸ ಅಥವಾ ವಯಸ್ಸಿನಲ್ಲಿ ಏನಾದರೂ ತಪ್ಪುಗಳಿದ್ದರೆ ಅದನ್ನು ಸರಿಪಡಿಸಲು ಅರ್ಜಿ ಸಲ್ಲಿಸಬೇಕು.

–ರಾಜಶೇಖರ ಪಾಟೀಲ್
ಮಾಜಿ ಸಚಿವ

## ಶಿಕ್ಷಣಕ್ಕೆ ಬಸವರಾಜ ಪಾಟೀಲ್ ಅನನ್ಯ ಕೊಡುಗೆ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಶಿಕ್ಷಣ ಕ್ಷೇತ್ರಕ್ಕೆ ಮಾಜಿ ಸಚಿವ ದಿ. ಬಸವರಾಜ ಪಾಟೀಲ್ ಅವರ ಕೊಡುಗೆ ಅನನ್ಯವಾಗಿದೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದ್ದಾರೆ.

ಇಲ್ಲಿನ ಸಿಂಧನಕೇರಾ ಕ್ರಾಸ್ ಹತ್ತಿರದ ಶಕುಂತಲಾ ಪಾಟೀಲ್ ವಸತಿ ಸಹಿತ ಶಾಲೆಯಲ್ಲಿ ಬುಧವಾರ ನಡೆದ ದಿ. ಶಕುಂತಲಾ ಪಾಟೀಲ್ ಅವರ ಜನ್ಮದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನಮ್ಮ ತಂದೆ–ತಾಯಿಯವರ ಮಾರ್ಗದರ್ಶನದಂತೆ ನಮ್ಮ ಪರಿವಾರದ ಸದಸ್ಯರು ಜನ ಸೇವೆಯಲ್ಲಿ ತೊಡಗಿಕೊಂಡಿದ್ದಾರೆ ಎಂದು ವಿವರಿಸಿದ್ದಾರೆ.

ದಿ. ಶಕುಂತಲಾ ಪಾಟೀಲ್ ಅವರ ಜನ್ಮದಿನ ಕಾರ್ಯಕ್ರಮ ನಿಮಿತ್ತ ಹುಮನಾಬಾದ ಹಾಗೂ ಚಿಟಗುಪ್ಪ ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸೇರಿ ಮಾಣಿಕ ನಗರ ಗ್ರಾಮದ ಅಂಧ ಮಕ್ಕಳ ಶಾಲೆಯ ಮಕ್ಕಳಿಗೆ ಶಕುಂತಲಾ ಪಾಟೀಲ್ ವಸತಿ ಶಾಲೆ ವತಿಯಿಂದ ಹಣ್ಣು ಹಂಪಲು ವಿತರಿಸಲಾಯಿತು.

ರಾಜರಾಜೇಶ್ವರ ದೇವಸ್ಥಾನದ ಅಧ್ಯಕ್ಷೆ ಪ್ರೇಮಾ ಪಾಟೀಲ್, ವಿದ್ಯಾ ಪಾಟೀಲ್, ಶಕುಂತಲಾ ಪಾಟೀಲ್ ಶಾಲೆ ಪ್ರಾಂಶುಪಾಲ ಮಂಜುನಾಥ, ಸಂತೋಷ ಮುಸ್ತಾಪೂರೆ, ಓಂಪ್ರಕಾಶ ಘಂಟೆ ಸೇರಿ ಅನೇಕರಿದ್ದರು.



### ಶೈಕ್ಷಣಿಕ ರಂಗದಲ್ಲಿ ಶಿಕ್ಷಣ ಕ್ರಾಂತಿ

ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ನಮ್ಮ ತಾಯಿ ಶಕುಂತಲಾ ಪಾಟೀಲ್ ಅವರ ಹೆಸರಿನಲ್ಲಿ ವಸತಿ ಸಹಿತ ಶಾಲೆಯನ್ನು ಆರಂಭಿಸಿ ಶೈಕ್ಷಣಿಕ ಕ್ರಾಂತಿಯನ್ನೆ ಮಾಡಿದ್ದಾರೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಸ್ಮರಿಸಿದ್ದಾರೆ.

## ಬಿಡದಿ ಟೌನ್‌ಶಿಪ್ ನಮ್ಮ ಯೋಜನೆಯಲ್ಲ; ರಾಜಕೀಯ ಸಂಚುಗಳಿಂದ ರೈತರ ಬದುಕು ಹಾಳು ಮಾಡಲಾಗುತ್ತಿದೆ: ಸಿಎಂ ಡಿ.ಕೆ. ಶಿವಕುಮಾರ್

## ರೈತರ ಹಿತರಕ್ಷಣೆಗೆ ರೈತ ಸಂರಕ್ಷಣಾ ನೂತನ ಸಮಿತಿ ರಚನೆ: ಜಕ್ಕಲಿ



**ಕುಕನೂರು :** ಯಲಬುರ್ಗಾ–ಕುಕನೂರು ವಿಧಾನಸಭಾ ಕ್ಷೇತ್ರದ ರೈತರ ಹಿತರಕ್ಷಣೆಗಾಗಿ ರೈತ ಸಂರಕ್ಷಣಾ ಸಮಿತಿ ರಚಿಸಿ, ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಪಟ್ಟಣದ ಎಪಿಎಂಸಿ ಆವರಣದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಸಮಿತಿಯನ್ನು ಅಧಿಕೃತವಾಗಿ ಘೋಷಿಸಲಾಯಿತು.

ಸಮಿತಿಯ ಅಧ್ಯಕ್ಷ ಮಲ್ಲಿಕಾರ್ಜುನ್ ಜಕ್ಕಲಿ ಮಾತನಾಡಿ, ರೈತರ ಜಮೀನಿಗೆ ನ್ಯಾಯಯುತ ಬೆಲೆ ದೊರಕಿಸುವುದು, ನೀರಾವರಿ ಸೌಲಭ್ಯಕ್ಕಾಗಿ ಹೋರಾಟ ನಡೆಸುವುದು ಹಾಗೂ ರೈತರ ಹಕ್ಕುಗಳ ರಕ್ಷಣೆಗೆ ಸಮಿತಿ ಬದ್ಧವಾಗಿದೆ ಎಂದು ಹೇಳಿದರು.

ವಿಂಡ್ ಮಿಲ್, ಸೋಲಾರ್ ಪವರ್ ಮತ್ತು ಪವರ್ ಗ್ರಿಡ್ ಸೇರಿದಂತೆ ವಿವಿಧ ಖಾಸಗಿ ಕಂಪನಿಗಳಿಗೆ ಜಮೀನು ನೀಡುವ ರೈತರು ಎಚ್ಚರಿಕೆ ವಹಿಸಬೇಕು. ಪರಿಹಾರ ಮೊತ್ತದಲ್ಲಿ ತಾರತಮ್ಯ ಕಂಡುಬಂದರೆ ಸಮಿತಿಯನ್ನು ಸಂಪರ್ಕಿಸಬೇಕು. ರೈತರಿಗೆ ನ್ಯಾಯಯುತ ಪರಿಹಾರ ದೊರಕಿಸಲು ಅಗತ್ಯ ಕಾನೂನು ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ರೈತರ ಮಕ್ಕಳಿಗೆ ವಸತಿ ಶಾಲೆ ಮಂಜೂರು ಮಾಡಿಸುವುದು, ಯಲಬುರ್ಗಾ–ಕುಕನೂರು ಭಾಗದ ಶಾಶ್ವತ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಒತ್ತಾಯಿಸುವುದು ಹಾಗೂ ಕೆರೆ ತುಂಬಿಸುವ ಯೋಜನೆಗಳಿಗೆ ಇರುವ ಕಾನೂನು ತೊಡಕುಗಳನ್ನು ನಿವಾರಿಸಲು ಸರ್ಕಾರದ ಗಮನ ಸೆಳೆಯಲಾಗುವುದು ಎಂದರು.

ಮಳೆ ಆಧಾರಿತ ಪ್ರದೇಶವಾಗಿರುವ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ರೈತರಿಗೆ ಬೆಂಬಲ ಬೆಲೆ, ಅಗತ್ಯ ಸೌಲಭ್ಯಗಳು ಹಾಗೂ ಸರ್ಕಾರದ ಯೋಜನೆಗಳ ಪ್ರಯೋಜನಗಳು ತಲುಪುವಂತೆ ಸಂಬಂಧಿತ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸಲಾಗುವುದು ಎಂದು ಹೇಳಿದರು. ಇದೇ ವೇಳೆ ಸಮಿತಿಯ ನೂತನ ಪದಾಧಿಕಾರಿಗಳ ಆಯ್ಕೆ ನಡೆಯಿತು. ಗೌರವಾಧ್ಯಕ್ಷರಾಗಿ ರೇವಣಪ್ಪ ಸಂಗಟಿ, ಅಧ್ಯಕ್ಷರಾಗಿ ಮಲ್ಲಿಕಾರ್ಜುನ್ ಜಕ್ಕಲಿ, ಉಪಾಧ್ಯಕ್ಷರಾಗಿ ಮುತ್ತಣ್ಣ ವಾಲ್ಮೀಕಿ, ಎಂ.ಎಫ್. ನದಾಫ್, ಶಿವಲಿಂಗಪ್ಪ ಕವಲೂರ, ಕಳಕನಗೌಡ ಪಾಟೀಲ್ ಹಾಗೂ ಸಂತೋಷ ಬೆಣಕಲ್, ಪ್ರಧಾನ ಕಾರ್ಯದರ್ಶಿಗಳಾಗಿ ಹಂಪಯ್ಯ ಸ್ವಾಮಿ ಹಿರೇಮಠ, ಮರಿಸ್ವಾಮಿ ಪೂಜಾರ್, ಹೇಮರೆಡ್ಡಿ ರಡ್ಡೇರ್ ಮತ್ತು ಮಲ್ಲಪ್ಪ ಕರಡಿ, ಖಜಾಂಚಿಯಾಗಿ ರೆಹಮಾನ್‌ಸಾಬ್ ಮಕ್ಕಪ್ಪನವರ, ಸಹ ಕಾರ್ಯದರ್ಶಿಗಳಾಗಿ ಶಂಕರಗೌಡ ಮಾಲಿ ಪಾಟೀಲ್, ಸಂತೋಷ ಮೆಣಸಿನಕಾಯಿ, ಭೀಮಣ್ಣ ನಡುವಲಮನಿ, ಕಳಕಪ್ಪ ಕುರಿ ಹಾಗೂ ಮಲ್ಲೇಶಗೌಡ ಮಾಲಿ ಪಾಟೀಲ್, ಕಾನೂನು ಸಲಹೆಗಾರರಾಗಿ ಆನಂದ ಉಳ್ಳಾಗಡ್ಡಿ, ಬಸವರಾಜ್ ಜಂಗಲಿ ಹಾಗೂ ದೇವಿಂದ್ರಪ್ಪ ತೊಂಡಿಹಾಳ ಅವರನ್ನು ಆಯ್ಕೆ ಮಾಡಲಾಯಿತು.

## ಬೆಂಗಳೂರು–ಮುಂಬೈ ವಂದೇ ಭಾರತ್ ರೈಲು ಮಾರ್ಗ ಬದಲಿಸದಂತೆ ಒತ್ತಾಯ



**ಬೀದರ್:** ಬೆಂಗಳೂರು–ಮುಂಬೈ ನಡುವಿನ ವಂದೇ ಭಾರತ್ ಸ್ಲೀಪರ್ ರೈಲನ್ನು ಕಲಬುರಗಿ ಮಾರ್ಗವಾಗಿ ಸಂಚರಿಸುವಂತೆ ಕೇಂದ್ರ ಸರ್ಕಾರ ಅಧಿಕೃತವಾಗಿ ಘೋಷಿಸಿದ್ದರೂ, ಇದೀಗ ಆ ಮಾರ್ಗವನ್ನು ಹುಬ್ಬಳ್ಳಿ–ಬೆಳಗಾವಿ ಕಡೆಗೆ ಬದಲಾಯಿಸಲು ನಡೆಯುತ್ತಿರುವ ಯತ್ನವನ್ನು ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿಯ ಸದಸ್ಯ ಹಾಗೂ ಟೀಮ್ ಯುವಾ ಸಂಘಟನೆಯ ಸಂಚಾಲಕ ವಿನಯ್ ಕುಮಾರ್ ಮಾಳಗೆ ತೀವ್ರವಾಗಿ ಖಂಡಿಸಿದ್ದಾರೆ.

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಏಪ್ರಿಲ್ 27, 2026ರಂದು ಕಲಬುರಗಿ ಮಾರ್ಗವಾಗಿ ಬೆಂಗಳೂರು–ಮುಂಬೈ ವಂದೇ ಭಾರತ್ ಸ್ಲೀಪರ್ ರೈಲು ಸಂಚರಿಸಲಿದೆ ಎಂದು ಅಧಿಕೃತವಾಗಿ ಘೋಷಿಸಿದ್ದರು. ಆದರೆ, ಕೆಲವೇ ತಿಂಗಳಲ್ಲಿ ಬೆಳಗಾವಿ ಸಂಸದ ಜಗದೀಶ್ ಶೆಟ್ಟರ್ ಅವರು ಈ ಮಾರ್ಗವನ್ನು ಹುಬ್ಬಳ್ಳಿ–ಬೆಳಗಾವಿ ಕಡೆಗೆ ಬದಲಾಯಿಸಲು ಒತ್ತಡ ಹೇರುತ್ತಿರುವುದು ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಮಾಡುತ್ತಿರುವ ದೊಡ್ಡ ಅನ್ಯಾಯವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಬಿಜೆಪಿ ನಾಯಕರು ನಿರಂತರವಾಗಿ ಅಡ್ಡಿಯಾಗುತ್ತಿದ್ದಾರೆ ಎಂದು ಆರೋಪಿಸಿದ ಮಾಳಗೆ, ಈ ಹಿಂದೆ ರಾಯಚೂರಿಗೆ ಮಂಜೂರಾಗಬೇಕಿದ್ದ ಐಐಟಿ ಹಾಗೂ ಏಮ್ಸ್ ಸಂಸ್ಥೆಗಳನ್ನು ಹುಬ್ಬಳ್ಳಿ–ಧಾರವಾಡಕ್ಕೆ ಸ್ಥಳಾಂತರಿಸುವ ಮೂಲಕ ಈ ಭಾಗದ ಯುವಕರಿಗೆ ಅನ್ಯಾಯ ಮಾಡಲಾಗಿದೆ ಎಂದು ಟೀಕಿಸಿದರು.

ಬೀದರ್ ಜಿಲ್ಲೆಯಲ್ಲಿಯೂ ಹೆಚ್‌ಎಎಲ್ ಹೆಲಿಕಾಪ್ಟರ್ ತಯಾರಿಕಾ ಘಟಕ, ಬಿಎಸ್‌ಎಫ್ ತರಬೇತಿ ಕೇಂದ್ರ ಹಾಗೂ ರಾಷ್ಟ್ರೀಯ ಹೂಡಿಕೆ ಮತ್ತು ಉತ್ಪಾದನಾ ವಲಯ (ಎನ್‌ಐಎಂಜೆಡ್) ಯೋಜನೆಗಳು ಬಿಜೆಪಿ ನಾಯಕರ ನಿರ್ಲಕ್ಷ್ಯದಿಂದ ಕೈತಪ್ಪಿವೆ ಎಂದು ಅವರು ದೂರಿದರು.

ಬೆಂಗಳೂರು–ಮುಂಬೈ ವಂದೇ ಭಾರತ್ ಸ್ಲೀಪರ್ ರೈಲು ಯಾವುದೇ ಕಾರಣಕ್ಕೂ ಕಲಬುರಗಿ ಮಾರ್ಗದಿಂದ ಬದಲಾಗಬಾರದು. ಕಲ್ಯಾಣ ಕರ್ನಾಟಕದ ಎಲ್ಲ ಸಂಸದರು, ಶಾಸಕರು ಹಾಗೂ ಪಕ್ಷಾತೀತ ನಾಯಕರು ಒಗ್ಗಟ್ಟಿನಿಂದ ಈ ಪ್ರಸ್ತಾವನೆಯನ್ನು ವಿರೋಧಿಸಿ, ಕೇಂದ್ರ ರೈಲ್ವೆ ಸಚಿವರನ್ನು ಭೇಟಿ ಮಾಡಿ ಕಲಬುರಗಿ ಮಾರ್ಗವನ್ನೇ ಅಂತಿಮಗೊಳಿಸುವಂತೆ ಒತ್ತಾಯಿಸಬೇಕು ಎಂದು ಅವರು ಆಗ್ರಹಿಸಿದರು.

ಒಂದು ವೇಳೆ ಕೇಂದ್ರ ಸರ್ಕಾರ ರಾಜಕೀಯ ಒತ್ತಡಕ್ಕೆ ಮಣಿದು ರೈಲು ಮಾರ್ಗ ಬದಲಾಯಿಸಿದರೆ, ಕಲ್ಯಾಣ ಕರ್ನಾಟಕ ಭಾಗದಾದ್ಯಂತ ಸಾರ್ವಜನಿಕರು, ಯುವಕರು ಹಾಗೂ ವಿವಿಧ ಸಂಘಟನೆಗಳನ್ನು ಒಗ್ಗೂಡಿಸಿ ಉಗ್ರ ಹೋರಾಟ ಮತ್ತು ಪ್ರತಿಭಟನೆಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ವಿನಯ್ ಕುಮಾರ್ ಮಾಳಗೆ ಎಚ್ಚರಿಕೆ ನೀಡಿದ್ದಾರೆ.

# ಉತ್ತಮ ಸಮಾಜ ಕಟ್ಟಲು ಪುಸ್ತಕ ಓದು ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಪುಸ್ತಕಗಳ ಓದಿನಿಂದ ಬೌದ್ಧಿಕ ಪ್ರಬುದ್ಧತೆ ಬೆಳೆಯುತ್ತದೆ. ಉತ್ತಮ ವ್ಯಕ್ತಿತ್ವ ನಿರ್ಮಾಣಕ್ಕೆ ಪುಸ್ತಕಗಳು ಸಹಕಾರಿಯಾಗಿವೆ ಎಂದು ವಚನಾಮೃತ ಕನ್ನಡ ಸಂಘದ ಅಧ್ಯಕ್ಷ ಪ್ರೊ.ಸಿದ್ರಾಮಪ್ಪಾ ಮಾಸಿಮಾಡೆ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಜಾಗೃತ ಸಮಿತಿ ಬೀದರ್ ಸಹಯೋಗದಲ್ಲಿ ಬೀದರ್‌ನ ಗುಮ್ಮೆ ಬಡಾವಣೆಯ ಸಾಹಿತಿ ಶಿಲ್ಪಾ ಮಹೇಶ ಮಜಗೆ ಅವರ ನಿವಾಸದಲ್ಲಿ ಮಂಗಳವಾರ ಸಂಜೆ ಆಯೋಜಿಸಿದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

"ಪುಸ್ತಕಗಳು ಕಲೆ, ಸಾಹಿತ್ಯ, ಸಂಸ್ಕೃತಿ ಸೇರಿ ಇಡೀ ಜಗತ್ತಿನ ಜ್ಞಾನ ನೀಡುತ್ತವೆ. ಪರಸ್ಪರ ಸಂಬಂಧ ಬೆಳೆಸುತ್ತವೆ. ಉತ್ತಮ ಸಮಾಜ ಕಟ್ಟಲು ಕೃತಿ ಓದುವುದು ಅಗತ್ಯ. ಮನೆಗೊಂದು ಗ್ರಂಥಾಲಯ ಕಾರ್ಯಕ್ರಮ ಎಲ್ಲರಿಗೂ ಪ್ರೇರಣೆಯಾಗಿ ಮನೆ–ಮನೆಗಳಲ್ಲಿ ಪತ್ರಿಕೆ, ಪುಸ್ತಕಗಳನ್ನು ಓದುವವರ ಸಂಖ್ಯೆ ಅಧಿಕವಾಗಬೇಕಿದೆ" ಎಂದರು.

ಹಿರಿಯ ಸಾಹಿತಿ ಭಾರತಿ ವಸ್ತ್ರದ್ ಅವರು ವಿಶೇಷ ಉಪನ್ಯಾಸ ನೀಡಿ, "ಆಧುನಿಕತೆಯ ಭರಾಟೆಯಲ್ಲಿ ನಾವು ಓದಿನ ಅಭಿರುಚಿ ಕಳೆದುಕೊಳ್ಳುತ್ತಿದ್ದೇವೆ. ಮನೆಯಲ್ಲಿ ಪುಸ್ತಕ



ಸಂಗ್ರಹಣೆಗೆ ಸ್ಥಳ ಮೀಸಲಿಡಬೇಕೆಂಬ ಆಸಕ್ತಿ ಸಹ ತೋರುತ್ತಿಲ್ಲ. ಆದರೆ, ಪುಸ್ತಕ ಓದಿನಿಂದ ಜಗತ್ತಿನ ಜ್ಞಾನ ಕಲಿಯಲು ಸಾಧ್ಯ. ಮನೆಯಲ್ಲಿ ಪುಸ್ತಕ ಗ್ರಂಥಾಲಯವಿದ್ದರೆ ಸಾಹಿತ್ಯ, ಸಂಸ್ಕೃತಿಯ ವಾತಾವರಣ ನಿರ್ಮಾಣವಾಗುತ್ತದೆ ಎಂಬುದು ತಿಳಿಯಬೇಕಿದೆ. ಓದಿನ ಹವ್ಯಾಸವು ಮನಸ್ಸಿನ ಏಕಾಗ್ರತೆ, ನೆಮ್ಮದಿ, ಜ್ಞಾನ ವೃದ್ಧಿಸುತ್ತದೆ. ಎಲ್ಲೆಡೆ ಮನೆಗೊಂದು ಪುಸ್ತಕಾಲಯ ಆಗಬೇಕು" ಎಂದು ಅಭಿಪ್ರಾಯಪಟ್ಟರು.

ಮನೆಗೊಂದು ಗ್ರಂಥಾಲಯ ಜಿಲ್ಲಾ ಜಾಗೃತ ಸಮಿತಿ ಸಂಚಾಲಕ ಬಾಲಾಜಿ ಕುಂಬಾರ ಪ್ರಾಸ್ತಾವಿಕ ಮಾತನಾಡಿ, "ಪುಸ್ತಕಗಳು ನಮ್ಮ ಉತ್ತಮ ಸ್ನೇಹಿತರಿದ್ದಂತೆ. ಎಲ್ಲರ ಮನೆಯಲ್ಲಿ ದೇವರ ಕೋಣೆ ಇರುವಂತೆ ಮನೆಯಲ್ಲಿ ಗ್ರಂಥಾಲಯ ನಿರ್ಮಾಣಕ್ಕೆ ಜಾಗ ಮೀಸಲಿಡಬೇಕು. ಪ್ರತಿಯೊಬ್ಬರು ಓದಿನ ಅಭಿರುಚಿ ಬೆಳೆಸಿಕೊಂಡರೆ ಸಮಾಜದಲ್ಲಿ ಮಾನವೀಯ ಮೌಲ್ಯಗಳು ಉಳಿಯುತ್ತವೆ. ಮನೆ–ಮನೆಗಳಲ್ಲಿ ಪುಸ್ತಕ ಓದುವ ಸಂಸ್ಕೃತಿ ಹೆಚ್ಚಿಸುವುದು ಕನ್ನಡ ಪುಸ್ತಕ ಪ್ರಾಧಿಕಾರದ ಮುಖ್ಯ ಉದ್ದೇಶವಾಗಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಗ್ರಂಥಾಲಯಗಳ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ" ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಸಾಹಿತಿ ಶಿಲ್ಪಾ ಮಹೇಶ ಮಜಗೆ ಹಾಗೂ ಹಿರಿಯ ಸಾಹಿತಿ ರಘುಶಂಖ ಭಾತಂಬ್ರಾ ಅವರು ಪುಸ್ತಕಗಳ ಮಹತ್ವದ ಕುರಿತು ಮಾತನಾಡಿದರು. ಇದೇ ಸಂದರ್ಭದಲ್ಲಿ ಶಿಲ್ಪಾ ಮಜಗೆ ಅವರ ಮನೆಯಲ್ಲಿ ಸ್ಥಾಪಿಸಿದ ಪುಸ್ತಕ ಕುಂಜ ನೂತನ ಗ್ರಂಥಾಲಯ ಕೋಣೆಯನ್ನು ಉದ್ಘಾಟಿಸಲಾಯಿತು.

ಕಾರ್ಯಕ್ರಮದಲ್ಲಿ ಮನೆಗೊಂದು ಗ್ರಂಥಾಲಯ ಜಿಲ್ಲಾ ಜಾಗೃತ ಸಮಿತಿ ಸದಸ್ಯರಾದ ಜಯದೇವಿ ಯದಲಾಪುರೆ, ಲಕ್ಷ್ಮಣ ಮೇತ್ರೆ ಸೇರಿದಂತೆ ಸಾಹಿತ್ಯಾಸಕ್ತರಾದ ಶಂಭುಲಿಂಗ ವಾಲ್ದೊಡ್ಡಿ, ಮಹೇಶ ಮಜಗೆ, ಹಂಸಕವಿ, ಶೈಲಜಾ ಹುಡಗೆ, ಕೀರ್ತಿಲತಾ ಹೊಸಳ್ಳಿ, ಮಹೇಶ್ವರಿ ಹೇಡೆ, ಸಿದ್ದಮ್ಮ ಹಳಕಾಯಿ, ನಾಗಯ್ಯ ಸ್ವಾಮಿ, ಜಗದೇವಿ ತಿಬಶೆಟ್ಟಿ, ಆರ್. ಎಸ್. ಬಿರಾದರ್, ಬಸವರಾಜ ಸಿಂದಬಂದಗೆ, ದಿನೇಶ ಕೊಂಡಾ ಸೇರಿ ಅನೇಕರು ಉಪಸ್ಥಿತರಿದ್ದರು. ಲಕ್ಷ್ಮಿ ಬಿರಾದರ್ ಸ್ವಾಗತಿಸಿದರು. ಸ್ವರೂಪರಾಣಿ ನಾಗೂರೆ ನಿರೂಪಿಸಿದರು. ಆಶಾ ಕೋಟೆ ವಂದಿಸಿದರು.

# ಮತದಾರರ ಪಟ್ಟಿ ಪರಿಷ್ಕರಣೆ: ವಿವಿಧೆಡೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಯಾದ್ಯಂತ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (SIR) ಕಾರ್ಯವು ಅತ್ಯಂತ ಚುರುಕಿನಿಂದ ಸಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾ ಶರ್ಮಾ ಅವರು ನಗರದ ವಿವಿಧ ಬಡಾವಣೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬುಧವಾರ ನಗರದ ಗಣೇಶ ನಗರ, ಬಸವ ನಗರ, ಕುಂಬಾರವಾಡ, ಫಯಾಜ್‌ಪೂರ ದರ್ಗಾ ಸೇರಿದಂತೆ ಪ್ರಮುಖ ಬಡಾವಣೆಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಮನೆ ಮನೆಗೆ ಭೇಟಿ ನೀಡಿ ಸಾರ್ವಜನಿಕರಿಗೆ ನೀಡಿರುವ ಮತದಾರರ ಪಟ್ಟಿ ಪರಿಷ್ಕರಣೆ ಎನುಮರೇಷನ್ ಅರ್ಜಿ ನಮೂನೆಗಳನ್ನು



ಸೂಕ್ತವಾಗಿ ಭರ್ತಿ ಮಾಡಿ ತಕ್ಷಣವೇ ಬಿಎಲ್‌ಒ (BLO)ಗಳಿಗೆ ಸಲ್ಲಿಸಬೇಕು. ಜಿಲ್ಲೆಯಲ್ಲಿ ಯಾವುದೇ ಒಬ್ಬ ಅರ್ಹ ವ್ಯಕ್ತಿಯೂ ಮತದಾರರ ಪಟ್ಟಿಯಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಈ ವಿಶೇಷ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಹೇಳಿದರು.

ಮನೆ ಮನೆ ಸಮೀಕ್ಷೆ ಕಾರ್ಯದಲ್ಲಿ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡಬಾರದು, ಸಾರ್ವಜನಿಕರಿಂದ ಬರುವ ಅರ್ಜಿಗಳನ್ನು ನಿಖರವಾಗಿ ಮತ್ತು ಜವಾಬ್ದಾರಿಯುತವಾಗಿ ಪರಿಶೀಲಿಸಿ, ನಿಗದಿತ ಅವಧಿಯೊಳಗೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ಸ್ಥಳದಲ್ಲಿದ್ದ ಚುನಾವಣಾ ಅಧಿಕಾರಿಗಳು ಹಾಗೂ ಬಿಎಲ್‌ಒಗಳಿಗೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಮಹಮ್ಮದ್ ಶಕೀಲ್, ಬೀದರ ತಹಶಿಲ್ದಾರ, ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಂಗೀತ–ಸಂಸ್ಕೃತಿಯ ಸೊಬಗು ಅನಾವರಣ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಸಂಗೀತ, ಸಾಹಿತ್ಯ ಹಾಗೂ ಜಾನಪದ ಸಂಸ್ಕೃತಿಯ ಶ್ರೀಮಂತ ಪರಂಪರೆಯನ್ನು ಅನಾವರಣಗೊಳಿಸುವ ಉದ್ದೇಶದಿಂದ ಅನುರಾಧಾ ಪೌಢವಾಲ ಮಹಿಳಾ ಕಲಾ, ಜಾನಪದ ಸಾಹಿತ್ಯ ಸಾಂಸ್ಕೃತಿಕ ಸಂಘ, ಜನತಾ ಕಾಲೋನಿ, ಭಾಲ್ಕಿ ವತಿಯಿಂದ ಕುಂಭೇಶ್ವರ ಮಂದಿರದಲ್ಲಿ ಆಯೋಜಿಸಿದ್ದ ಒಂದು ದಿನದ ಸಾಂಸ್ಕೃತಿಕ ಕಾರ್ಯಕ್ರಮ ಕಲಾಭಿಮಾನಿಗಳ ಮನಗೆದ್ದು ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಸಂಗೀತ ಸೇವಕರಾದ ಕೇಶವರಾವ ಸೂರ್ಯವಂಶಿ ವಹಿಸಿದ್ದರು. ನಿವೃತ್ತ ಉಪನ್ಯಾಸಕರಾದ ಶೇಷೇರಾವ ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಿ, ಸಂಗೀತ ಮತ್ತು ಸಾಹಿತ್ಯವು ಸಮಾಜದಲ್ಲಿ ಸಂಸ್ಕಾರ, ಸೌಹಾರ್ದತೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಶಕ್ತಿಯಾಗಿದೆ. ಇಂತಹ ಕಾರ್ಯಕ್ರಮಗಳು ಯುವ




ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವುದರೊಂದಿಗೆ ಕಲಾ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಸಂಗಪ್ಪಾ ವಿ. ಡೊಂಗಾಪುರೆ ಹಾಗೂ ವಿಶೇಷ ಅತಿಥಿಯಾಗಿ ಇಂದುಮತಿ ಗುಂಡಪ್ಪಾ ಸಂಗಮಕರ್ ಭಾಗವಹಿಸಿ, ಸಂಘದ ಸಾಂಸ್ಕೃತಿಕ ಚಟುವಟಿಕೆಗಳನ್ನು ಶ್ಲಾಘಿಸಿ ಶುಭ ಹಾರೈಸಿದರು. ಕಾರ್ಯಕ್ರಮದಲ್ಲಿ ಸುಗಮ ಸಂಗೀತ ಗಾಯಕರು ಗಿರಿ ಮಹಾರಾಜ ಹಾಗೂ ಕೇಶವರಾವ ಸೂರ್ಯವಂಶಿ ಅವರ ಸುಮಧುರ ಗಾಯನ ಪ್ರೇಕ್ಷಕರ ಮನಸೂರೆಗೊಂಡಿತು. ಹಾರ್ಮೋನಿಯಂನಲ್ಲಿ ಹಣಮಂತರಾವ ಚಿದ್ರಿ ಮತ್ತು ಸಂಗಪ್ಪಾ ವೀರಶೆಟ್ಟಿ ಡೊಂಗಾಪುರೆ ಅವರ ಸಂಗೀತ ಸಹಕಾರ, ತಬಲಾದಲ್ಲಿ ಸಂಕೇತ ಹಾಗೂ ಮನೋಹರ ಭಾತ್ರಂಬ್ರಾ ಅವರ ಮನಮೋಹಕ ವಾದನ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.

ಆರಂಭದಲ್ಲಿ ಲಕ್ಷ್ಮಿ ಅಶೋಕ ಮುಂಗಡೆ ಅತಿಥಿಗಳನ್ನು ಸ್ವಾಗತಿಸಿದರು. ಚಂದ್ರಕಲಾ ಧನರಾಜ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರೆ, ಸರಸ್ವತಿ ಹೂಲಸೂರೆ ವಂದನಾರ್ಪಣೆ ಸಲ್ಲಿಸಿದರು.

ಸಂಗೀತ, ಸಾಹಿತ್ಯ ಮತ್ತು ಜಾನಪದ ಸಂಸ್ಕೃತಿಯ ಸಂಗಮವಾಗಿ ನಡೆದ ಈ ಕಾರ್ಯಕ್ರಮದಲ್ಲಿ ಸ್ಥಳೀಯ ಕಲಾಭಿಮಾನಿಗಳು, ಮಹಿಳೆಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಲಾವಿದರನ್ನು ಹುರಿದುಂಬಿಸಿದರು. ಕಾರ್ಯಕ್ರಮವು ಸಾಂಸ್ಕೃತಿಕ ವೈಭವವನ್ನು ಅನಾವರಣಗೊಳಿಸುವುದರೊಂದಿಗೆ ಕಲಾಸಕ್ತರಿಗೆ ಸ್ಮರಣೀಯ ಅನುಭವವನ್ನು ನೀಡಿತು.

# 19ರಂದು ಅದ್ದೂರಿ ಶ್ರೀ ಜಗನ್ನಾಥ ರಥಯಾತ್ರಾ ಮಹೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ನಗರದ ಶ್ರೀ ಜಗನ್ನಾಥ ದೇವಸ್ಥಾನ (ಶ್ರೀ ಕೃಷ್ಣ ಚೈತನ್ಯ ಟ್ರಸ್ಟ್) ವತಿಯಿಂದ ಇದೇ ಬರುವ ಜುಲೈ 19 2026 ರ ಭಾನುವಾರದಂದು 'ಶ್ರೀ ಜಗನ್ನಾಥ ರಥಯಾತ್ರಾ ಮಹೋತ್ಸವ'ವನ್ನು ಅತ್ಯಂತ ಭಕ್ತಿ ಹಾಗೂ ಸಡಗರದಿಂದ ಆಯೋಜಿಸಲಾಗಿದೆ. "ಜಗತ್ ಕೆ ನಾಥ್ ಶ್ರೀ ಜಗನ್ನಾಥ್" ಎಂಬ ಘೋಷಣೆಯೊಂದಿಗೆ ಜರುಗುವ ಈ ಮಹೋತ್ಸವದಲ್ಲಿ ಸಾವಿರಾರು ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದು ಶ್ರೀ ಕೃಷ್ಣ ಚೈತನ್ಯ ಟ್ರಸ್ಟ್ ನ ಕಾರ್ಯಕಾರಿ ಸಮಿತಿ ಸದಸ್ಯರಾದ ರಾಮಕೃಷ್ಣ ಸಾಳೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ರಥಯಾತ್ರೆಯು ಜುಲೈ 19ರ ಭಾನುವಾರ ಬೆಳಿಗ್ಗೆ 11.30 ಗಂಟೆಗೆ ನಗರದ ರಾಂಪುರೆ ಕಾಲೋನಿಯಲ್ಲಿರುವ 'ಶ್ರೀ ಲಕ್ಷ್ಮಿ ಸತ್ಯನಾರಾಯಣ ದೇವಸ್ಥಾನ'ದಿಂದ ವಿಜೃಂಭಣೆಯಿಂದ ಪ್ರಾರಂಭವಾಗಲಿದೆ. ರಥಯಾತ್ರೆ ಪ್ರಾರಂಭವಾಗುವುದಕ್ಕಿಂತ ಮುಂಚೆಗೆ ಲಕ್ಷ್ಮೀ ನಾರಾಯಣ ದೇವಸ್ಥಾನದಲ್ಲಿ ಪೂಜೆ, ಅರ್ಚನೆ, ಪ್ರಾರ್ಥನೆ, ಗೋಪೂಜೆ, ಮಹಾಪ್ರಸಾದ ಇತ್ಯಾದಿ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ. ಈ ಭವ್ಯ ರಥಯಾತ್ರೆಯು ನಗರದ ಪ್ರಮುಖ ವೃತ್ತಗಳಾದ: ಬೊಮ್ಮಗೊಂಡೇಶ್ವರ ವೃತ್ತ, ಬಸವೇಶ್ವರ ವೃತ್ತ, ಭಗತ್ ಸಿಂಗ್ ವೃತ್ತ, ಅಂಬೇಡ್ಕರ್ ವೃತ್ತ, ಜಾನವಾಡ ರಸ್ತೆ ಮಾರ್ಗವಾಗಿ ಸಾಗಿ, ಅಂತಿಮವಾಗಿ ಚಿಕ್‌ಪೇಟ್–ಹೈದರಾಬಾದ್ ರಿಂಗ್ ರೋಡ್‌ನ ಮಾಮನ್‌ಕೇರಿಯಲ್ಲಿರುವ (ಜ್ಞಾನ ಸುಧಾ ಶಾಲೆ ಹತ್ತಿರ) 'ಶ್ರೀ ಜಗನ್ನಾಥ ದೇವಸ್ಥಾನ' (ನೀಲಾಚಲ್ ಧಾಮ್) ತಲುಪಲಿದೆ. ರಥಯಾತ್ರೆ ಸಂದರ್ಭದಲ್ಲಿ ಸಹಸ್ರಾರು ಶ್ರದ್ಧಾಳುಗಳು ರಥಯಾತ್ರೆಗೆ ಪುಷ್ಪಾರ್ಚನೆ ಮಾಡುವರು. ಮಹಾಪ್ರಸಾದ, ಜಲಪಾನ ಇತ್ಯಾದಿಗಳ



ವ್ಯವಸ್ಥೆ ಮಾಡುವರು. ಬೆಳಿಗ್ಗೆ 11.30 ಗಂಟೆಗೆ ಪ್ರಾರಂಭವಾಗಿ ಸಾಯಂಕಾಲ 7.00 ವರೆಗೆ ಈ ರಥಯಾತ್ರೆ ಮೆರವಣಿಗೆ ಜರುಗುವುದು ಜಗನ್ನಾಥ ಮಂದಿರದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ಶ್ರೀ ರಾಮನವಮಿ ಮಹೋತ್ಸವ, ಶ್ರೀ ನರಸಿಂಹ ಸ್ವಾಮಿ ಮಹೋತ್ಸವ, ರಥಯಾತ್ರಾ ಮಹೋತ್ಸವ, ಶ್ರೀ ಕೃಷ್ಣ ಜನ್ಮಾಷ್ಟಮಿ ಮಹೋತ್ಸವ, ರಾಧಾ ಅಷ್ಟಮಿ ಮಹೋತ್ಸವ, ಗೋವರ್ಧನ ಪೂಜಾ ಮಹೋತ್ಸವ, ದಾಮೋದರ ಪೂಜಾ ಮಹೋತ್ಸವ, ಗೌರ ಪೂರ್ಣಿಮಾ ಮಹೋತ್ಸವ, ಗೋವು ಪೂಜಾ ಮಹೋತ್ಸವ ಹೀಗೆ ಒಂಬತ್ತು ಮಹೋತ್ಸವಗಳು ಜರುಗಲಿವೆ. ಹಾಗೆ ಮಹಾಶಿವರಾತ್ರಿ ಮಹೋತ್ಸವ ಸಹ ಈ ಸಂದರ್ಭದಲ್ಲಿ ಜರುಗುವುದು. ಈ ಭವ್ಯ ರಥಯಾತ್ರೆಯಲ್ಲಿ ನೆರೆಯ ತೆಲಂಗಾಣ, ಮಹಾರಾಷ್ಟ್ರ, ಆಂಧ್ರ ಪ್ರದೇಶದಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಪಾಲ್ಗೊಂಡು ರಥಯಾತ್ರೆಯ ಶೋಭೆ ಹೆಚ್ಚಿಸುವರು. ಆದ್ದರಿಂದ ಸ್ಥಳೀಯ ಹಾಗೂ ಬೀದರ್ ಜಿಲ್ಲೆಯ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಭಗವಾನ ಜಗನ್ನಾಥನ ರಥವನ್ನು ಎಳೆಯುವ ಮೂಲಕ ಸ್ವಾಮಿಯ ಅಪಾರ ಕೃಪೆಗೆ ಪಾತ್ರರಾಗಬೇಕೆಂದು ಸಾಳೆ ತಿಳಿಸಿದರು.

ರೋಟ್ರಿ ಕ್ಲಬ್ ನ್ಯು ಸೆಂಚೂರಿಯ ವಿರಶೆಟ್ಟಿ ಮಣಿಗೆ ಈ ಸಂದರ್ಭದಲ್ಲಿ ಮಾತನಾಡಿ, ದೇವಸ್ಥಾನದಲ್ಲಿ ನಿರಂತರವಾಗಿ ಆರತಿ ಸೇವೆ, ಶೃಂಗಾರ ಸೇವೆ ಹಾಗೂ ಭೋಗ ಸೇವೆಗಳು ನಡೆಯುತ್ತಿರುತ್ತವೆ. ಪ್ರತಿ ಭಾನುವಾರ ಸುಮಾರು 600 ಜನರಿಗೆ 'ಅನ್ನದಾನ ಸೇವೆ' ಹಮ್ಮಿಕೊಳ್ಳಲಾಗುತ್ತಿದೆ. ಇದಲ್ಲದೆ, ಪ್ರತಿ ಭಾನುವಾರ ಸಂಜೆ 7.00 ಗಂಟೆಗೆ ದೇವಸ್ಥಾನದ ಆವರಣದಲ್ಲಿ 'ಭಗವದ್ಗೀತಾ ಮತ್ತು ಭಾಗವತ ಸತ್ಸಂಗ' ಕಾರ್ಯಕ್ರಮ ಆಯೋಜಿಸಲಾಗುತ್ತದೆ ಎಂದವರು ತಿಳಿಸಿದರು.

ಮಂದಿರದ ಪ್ರಮುಖರಲ್ಲೊಬ್ಬರಾದ ರಾಜಕುಮಾರ ಅಳ್ಳೆ ಮಾತನಾಡಿ, ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಈ ಸತ್ಕಾರ್ಯಕ್ಕೆ, 'ಶ್ರೀ ಜಗನ್ನಾಥ ನಿತ್ಯ ಸೇವೆ'ಯ ಮೂಲಕ ಆರ್ಥಿಕ ನೆರವು ನೀಡಲು ಇಚ್ಛಿಸುವ ದಾನಿಗಳು 'ಶ್ರೀ ಕೃಷ್ಣ ಚೈತನ್ಯ ಟ್ರಸ್ಟ್'ಗೆ ತಮ್ಮ ಕೈಲಾದ ದೇಣಿಗೆ ನೀಡಿ ಸಹಕರಿಸಬಹುದು. ಹೆಚ್ಚಿನ ಮಾಹಿತಿಗಾಗಿ: 9381111690, 9901703583, 9448349880, 9448771617 ಸಂಪರ್ಕಿಸಬಹುದಾಗಿದೆ ಎಂದರು.

ಉದ್ಯಮಿ ಸೋಮಶೇಖರ ಪಾಟೀಲ್ ಗಾದಗಿ ಮಾತನಾಡಿದರು. ಬಿಜೆಪಿ ಹಿರಿಯ ಮುಖಂಡರು ಹಾಗೂ ಸ್ಥಳೀಯ ನಾಯಕರಾದ ಈಶ್ವರಸಿಂಗ್ ಠಾಕೂರ್, ಟ್ರಸ್ಟ್ ಪ್ರಮುಖರಾದ ಶಿವರಾಮ ಜೋಶಿ, ಅಭಿಷಕ ಆನಂದೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

ಪೂರಿ ಜಗನ್ನಾಥದಲ್ಲಿ ಇರುವ ಹಾಗೆ ಬೀದರ್ ನಲ್ಲೂ ಸಹ ಇದೇ ಮಾದರಿಯಲ್ಲಿ ಜಗನ್ನಾಥ ರಥಯಾತ್ರೆ ಜರುಗಲಿದೆ. ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಈ ತಿಂಗಳ 16ರಂದು ಪ್ರತಿ ವರ್ಷದಂತೆ ಈ ವರ್ಷ ಸಹ ಜಗನ್ನಾಥ ಪುರಿಯಲ್ಲಿ ಮೂರು ರಥಯಾತ್ರೆಗಳು ಜರುಗುತ್ತವೆ. ಒಂದು ಜಗನ್ನಾಥ ರಥಯಾತ್ರೆ, ಇನ್ನೊಂದು ಬಲಭದ್ರನ ರಥಯಾತ್ರೆ ಹಾಗೂ ಮತ್ತೊಂದು ಸುಭದ್ರ ತಾಯಿಯ ರಥ ಯಾತ್ರೆಗಳು ಜರುಗುತ್ತವೆ. ಜಗನ್ನಾಥ ರಥಯಾತ್ರೆಯ ಕುದುರೆಗಳು ಬಿಳಿ ಬಣ್ಣದಾಗಿದ್ದು, ಬಲಬದ್ರನ ರಥಯಾತ್ರೆಯ ಕುದುರೆಗಳು ಕಪ್ಪು ಬಣ್ಣದಾಗಿರುತ್ತವೆ. ಸುಭದ್ರ ತಾಯಿಯ ರಥಯಾತ್ರೆಯ ಕುದುರೆಗಳು ಕೆಂಪು ಬಣ್ಣದಾಗಿರುತ್ತವೆ. ಈ ರಥಯಾತ್ರೆಬೇಕಾಗುವ ಕಟ್ಟಿಗೆಯನ್ನು ಅಲ್ಲಿಯ ಆದಿವಾಸಿಗಳು ಬಸಂತ ಪಂಚಮಿ ದಿನದಂದು ಅರಣ್ಯಕ್ಕೆ ಹೋಗಿ ಹೊಸ ಕಟ್ಟಿಗೆಗಳನ್ನು ತಂದು ಕೊಡುವ ಸಂಪ್ರದಾಯ ಇದೆ. ಹಾಗೆ ಅಕ್ಷಯ ತೃತೀಯ ದಿವಸದಂದು ರಥಯಾತ್ರೆಯನ್ನು ನಿರ್ಮಿಸಲು ಪ್ರಾರಂಭಿಸಲಾಗುತ್ತದೆ. ರಥಯಾತ್ರೆಗೆ ಎಳೆಯಲ್ಲೂ ಬಳಿಸುವ ಹಗ್ಗವು ಹಿಂದೆ ಸಮುದ್ರ ಮಂಥನದಲ್ಲಿ ವಾಸುಕಿ ನಾಗ ಸರ್ಪವು ಹೋಲುವ ರೀತಿಯಲ್ಲಿ ಹಗ್ಗ ಬಳಿಸಲಾಗುತ್ತದೆ. ಈ ಮೂರು ರಥಯಾತ್ರೆಗಳನ್ನು ವಿಸರ್ಜಿಸಲಾಗುತ್ತದೆ. ಅವುಗಳಿಗೆ ಬಳಿಸಲಾದ ಕಟ್ಟಿಗೆಯಿಂದ ಆಗಮಿಸುವ ಲಕ್ಷಾವಧಿ ಭಕ್ತರಿಗೆ ಮಹಾಪ್ರಸಾದ ತಯಾರಿಸುವ ಕಾರ್ಯ ನಿರಂತರವಾಗಿ ಜರುಗುತ್ತಬರುತ್ತಿದೆ ಎಂದು ವಿವರಿಸಿದರು.

–ಈಶ್ವರಸಿಂಗ್ ಠಾಕುರ್
ಬಿಜೆಪಿ ಹಿರಿಯ ಮುಖಂಡರು ಹಾಗೂ ಸ್ಥಳೀಯ ನಾಯಕರು

# ಖಡ್ಗಕ್ಕಿಂತ ಹರಿತವಾದದು ಲೇಖನಿ



• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ಶಿಕ್ಷಣದಿಂದ ಉನ್ನತ ಸ್ಥಾನಮಾನದೊಂದಿಗೆ ಪ್ರಗತಿ ಸಾಧಿಸಲು ಸಾಧ್ಯವಾಗಿ,ಶಿಕ್ಷಣದಿಂದ ಶ್ರೇಷ್ಠ ವ್ಯಕ್ತಿಯಾಗಿ,ನಾಗರೀಕನಾಗಿ ಹೊರಹೊಮ್ಮಲು ಸಾಧ್ಯಾವಾಗುತ್ತದೆ ಎಂದು ಕೊಪ್ಪಳ ವಿಶ್ವವಿಧ್ಯಾಲಯದ ಸಿಂಡಿಕೇಟ ಸದಸ್ಯ ಡಾ.ಶಿವರಾಜ ಗುರಿಕಾರ ಅವರು ಮಣ್ಣೆತ್ತಿನಾಮವಾಸ್ಯೆಯ ಚತುರ್ದಶಿ ಅಂಗವಾಗಿ ದಮ್ಮೂರು ಗ್ರಾಮದ ಶ್ರೀ ಭೀಮಾಂಬಿಕಾ ದೇವಿಯ ಮಠದಲ್ಲಿ 388 ನೇ ಶಿವಾನುಭವ ಗೋಷ್ಠಿಯಲ್ಲಿ " ಖಡ್ಗಕ್ಕಿಂತ ಹರಿತವಾದದು ಲೇಖನಿ " ಚಿಂತನ ಗೋಷ್ಠಿಯಲ್ಲಿ ಮಾತನಾಡಿದರು. ಖಡ್ಗವು ನಮ್ಮ ದೇಹವನ್ನು ಗಾಯಗೋಳಿಸಿದರೆ, ಶಿಕ್ಷಣವು ವ್ಯಕ್ತಿಯ ಮನಸ್ಸನ್ನು ಪರಿವರ್ತನೆ ಮಾಡಿ,ಅಜ್ಞಾನವನ್ನು ಹೊಗಲಾಡಿಸುತ್ತದೆ ಎಂದು ಮಲ್ಲಿಕಾರ್ಜುನ ಶಾಸ್ತ್ರೀ ನಿಟ್ಟಾಲಿ ಅವರು ಮಾತನಾಡಿದರು. ನಮ್ಮ ಜೀವನ ಕತ್ತಲದಿಂದ ಬೇಳಕಿನಡೆ ಬರಲು ಶಿಕ್ಷಣ ಅವಶ್ಯ,ಶಿಕ್ಷಣ ಎಂದರೆ ಹುಲಿಯ ಹಾಲು ಇದ್ದಂತೆ ಶಿಕ್ಷಣದ ರಸದೂಟವನ್ನು ಸವಿದವರು ಹುಲಿಯಂತೆ ಅರ್ಭಟದಿಂದ ಗುಡುಗಿ ಗರ್ಜಿಸಲು ಸಾದ್ಯವಾಗುತ್ತದೆ ಎಂದು ಶ್ರೀ ಭೀಮಾಂಭಿಕಾದೇವಿ ಶಿವಾನುಭವ ಸೇವಾ ಸಮಿತಿ ಅದ್ಯಕ್ಷ ಶರಣಬಸಪ್ಪ ದಾನಕೈ ಅವರು ಅದ್ಯಕ್ಷತೆ ವಹಿಸಿ ಮಾತನಾಡಿದರು. ಮಠದ ಒಡೆಯರಾದ ಹನುಮಂತಪ್ಪಜ್ಜ ಧರ್ಮರ,ಹಾಗು ಶರಣಯ್ಯ ಹಿರೇಮಠ ಸಾನಿಧ್ಯವಹಿಸಿದ್ದರು.ಶ್ರೀ ಮಠವು ನಡೆದು ಬಂದಿರುವ ಬಗ್ಗೆ ಪ್ರಾಸ್ತಾವಿಕವಾಗಿ ಗುರುಮೂರ್ತಿ ಬಡಿಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು.ಭಟಪನಹಳ್ಳಿಯ ಮಾಜಿ ಗ್ರಾಮ ಪಂಚಾಯತಿ ಉಪಾಧ್ಯಕ್ಷ ಶರಣಪ್ಪ ಹಾದಿಮನಿ, ಕೆ.ಎಸ್.ಆರ್.ಟಿ.ಸಿ ನೌಕರ ಮಾರುತಿ ದೇವರಳ್ಳಿ, ನೆರೇಗಲ್ಲ ಗ್ರಾಮದ ಶ್ರೀ ಮತಿ ಅಕ್ಕಮಹಾದೇವಿ ಗುರಿಕಾರ, ಹಿರಿಯರಾದ ಈರಪ್ಪ ರಾವಣಕಿ, ಹಿರೇ ಪರಪ್ಪ ಅಂಗಡಿ, ಭೀಮಣ್ಣ ಜರಕುಂಟಿ ಗಣೇಶಗೌಡ ನಿಡಗುಂದಿ,ರಮೇಶ ಚಿಕ್ಕಗೌಡ್ರ, ಶರಣಗೌಡ ದ್ಯಾಮನಗೌಡ್ರ, ಬಸವರಾಜಮರ ಗಪ್ಪನವರ,ಮಂಜುನಾಥ ಭೂನಕೊಪ್ಪ ಸೇರಿದಂತೆ ಇತರರು ಇದ್ದರು. ಕಳಕಪ್ಪಹಡಪದ,ಯಮನ ೀರಪ್ಪ ಹಳ್ಳಿಕೇರಿ ಸಂಗೀತ ಸೇವೆ ನೀಡಿದರು. ಬಳಿಕ ಅನ್ನ ಸಂತರ್ಪಣೆ ಜರುಗಿತು.

# ಎಸ್.ಐ.ಆರ್ ಪ್ರಗತಿ, ರಾಜಕಿಯ ಪಕ್ಷಗಳೊಂದಿಗೆ ಮಾಹಿತಿ ಹಂಚಿಕೊಂಡ ಜಿಲ್ಲಾ ಚುನಾವಣಾಧಿಕಾರಿ



• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜು.15:ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಇಕ್ರಮ ಶರೀಫ್ ಅವರು ಮಂಗಳವಾರ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಪ್ರಸ್ತುತ ಜಿಲ್ಲೆಯಲ್ಲಿ ನಡೆಯುತ್ತಿರುವ ವಿಸೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದ ಪ್ರಗತಿ ಮಾಹಿತಿಯನ್ನು ಹಂಚಿಕೊಂಡರು.


ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಜಿಲ್ಲೆಯಾದ್ಯಂತ ಇದೂವರೆಗೆ ಬಿ.ಎಲ್.ಓ ಗಳು ಮನೆ-ಮನೆಗೆ ಹೋಗಿ ಒಟ್ಟು 23,71,542 ಮತದಾರರ ಪೈಕಿ 23,35,062 (ಶೇ.98.46) ರಷ್ಟು ಗಣತಿ ನಮೂನೆ ವಿತರಣೆ ಮಾಡಿದ್ದಾರೆ. ಅಲ್ಲದೆ 6,86,812 (ಶೇ.28.96) ಮತದಾರರಿಂದ ಭರ್ತಿ ಮಾಡಿದ ಗಣತಿ ನಮೂನೆ ಪಡೆದು ಮೊಬೈಲ್ ತಂತ್ರಾಂಶದಲ್ಲಿ ಡಿಜಿಟೈಸ್ ಮಾಡಿದ್ದಾರೆ. ಇನ್ನು 5,585 (ಶೇ.0.24) ಮತದಾರರು ಸ್ವಯಂ ಪ್ರೇರಿತವಾಗಿ ಆನ್ ಲೈನ್ ಮೂಲಕ ಗಣತಿ ನಮೂನೆ ಸಲ್ಲಿಸಿದ್ದಾರೆ. ಬಿ.ಎಲ್.ಓ.ಗಳು ಮನೆ-ಮನೆ ಭೇಟಿ ಕೊಟ್ಟಾಗ ಇಲ್ಲಿಯವರೆಗೆ 6,156 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿರುವುದು ಮತ್ತು 6,924 ಜನ ಮತದಾರರು ನಿಧನ ಹೊಂದಿರುವ ಬಗ್ಗೆ ವರದಿಯಾಗಿದೆ ಎಂದು ರಾಜಕೀಯ ಪಕ್ಷಗಳ ಗಮನಕ್ಕೆ ತಂದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 01-10-2026 ಅರ್ಹತಾ ದಿನಾಂಕವನ್ನಾಗಿ ಪರಿಗಣಿಸಿ ಈ ವಿಶೇಷ ಸಮಗ್ರ ಮತದಾರರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಜುಲೈ 29ರ ವರೆಗೆ ಬಿ.ಎಲ್.ಓ.ಗಳು ಮನೆ-ಮನೆಗೆ ಭೇಟಿ ನೀಡಿ ಗಣತಿ ನಮೂನೆ ವಿತರಿಸಿ ಸಂಗ್ರಹಣೆ ಮಾಡಿ ಮೊಬೈಲ್ ತಂತ್ರಾಂಶದಲ್ಲಿ ಡಿಜಿಟೈಸ್ ಮಾಡಲಿದ್ದಾರೆ. ಇದೇ ಅವಧಿಯಲ್ಲಿ ಮತಗಟ್ಟೆಗಳ ರೇಷನಲೈಸೇಷನ್ ಕಾರ್ಯ ಸಹ ನಡೆಯಲಿದೆ. ಆಗಸ್ಟ್ 5ಕ್ಕೆ ಕರಡು ಮತದಾರರ ಪಟ್ಟಿ ಪ್ರಕಟಿಸಿ ಸೆಪ್ಟೆಂಬರ್ 4ರ ವರೆಗೆ ಆಕ್ಷೇಪಣೆ ಆಹ್ವಾನಿಸಿ ಅಕ್ಟೋಬರ್ 3 ರೊಳಗೆ ಆಕ್ಷೇಪಣೆಗಳನ್ನು ವಿಲೇವಾರಿ ಮಾಡಿ ಕೊನೆಗೆ ಅಕ್ಟೋಬರ್ 7ಕ್ಕೆ ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ ಎಂದು ಎಸ್.ಐ.ಆರ್. ಕ್ಯಾಲೆಂಡರ್ ಘಟನಾವಳಿಗಳನ್ನು ವಿವರಿಸಿದರು.

ಎಸ್.ಐ.ಆರ್ ಕಾರ್ಯ ಸುಗಮವಾಗಿ ಕಾರ್ಯನಿರ್ವಹಿಸಲು ಜಿಲ್ಲೆಯ ಎಲ್ಲಾ 2,400 ಮತಗಟ್ಟೆಗಳಿಗೆ ಬಿ.ಎಲ್.ಓ ನೇಮಿಸಿದಲ್ಲದೆ ಮತದಾರರ ನೆರವಿಗೆ 2,400 ವೋಟರ್ ಫೆಸಿಲಿಟೇಷನ್ ಸೆಂಟರ್ ಮತ್ತು ಬಿ.ಎಲ್.ಓ. ಗಳ ಸಹಾಯಕ್ಕೆ 283 ಬಿ.ಎಲ್.ಓ. ಫೆಸಿಲಿಟೇಷನ್ ಸೆಂಟರ್ ಸ್ಥಾಪಿಸಲಾಗಿದೆ ಎಂದು ಡಿ.ಸಿ. ಅವರು, ಎಸ್.ಐ.ಆರ್ ಕಾರ್ಯ ನಿಖರ, ದೋಷರಹಿತವಾಗಿ ಮತ್ತು ಪಾರದರ್ಶಕವಾಗಿ ತಯಾರಿಸಲು ಜಿಲ್ಲೆಯ ಎಲ್ಲ ರಾಜಕೀಯ ಪಕ್ಷಗಳ ಮುಖಂಡರು ಸಹಕಾರ ನೀಡಬೇಕೆಂದು ಮನವಿ ಮಾಡಿಕೊಂಡರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಐ.ಎ.ಎಸ್.ಪ್ರೊಬೇಷನರ್ ಅಧಿಕಾರಿ ಶಿಖರ್ ಮೋಘಾ ಸೇರಿದಂತೆ ವಿವಿಧ ಪಕ್ಷದ ಪ್ರತಿನಿಧಿಗಳು ಭಾಗವಹಿಸಿದ್ದರು.

# ವಿಜಯನಗರ ಜಿಲ್ಲಾ ಬಿಜೆಪಿ ಘಟಕದಿಂದ ಎಸ್ಐಆರ್ ಪ್ರಕ್ರಿಯೆಯ ವೀಕ್ಷಣೆ



• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು

ಪಟ್ಟಣದಲ್ಲಿನ ಎಲ್ಲ 20 ವಾರ್ಡುಗಳಲ್ಲಿ ನಡೆಯುತ್ತಿರುವ ಎಸ್ಐಆರ್ ಪ್ರಕ್ರಿಯೆಯ ವೀಕ್ಷಣೆಯನ್ನು ಭಾರತೀಯ ಜನತಾ ಪಾರ್ಟಿಯ ಜಿಲ್ಲಾ ಘಟಕದ ಮುಖಂಡರುಗಳು ವೀಕ್ಷಣೆ ಮಾಡಿದರು ನಂತರ ಮಾತನಾಡಿದ ಮುಖಂಡರುಗಳು ಪ್ರಧಾನ ಮಂತ್ರಿ ನರೇಂದ್ರ ಮೋದಿ ಮತ್ತು ಅಮಿತ್ ಶಾ ರವರ ಮಹತ್ವಕಾಂಕ್ಷಿ ಎಸ್ಐಆರ್ ಪ್ರಕ್ರಿಯೆಯಲ್ಲಿ ಯಾವುದೇ ಕಾರಣಕ್ಕೂ ಯಾವೊಬ್ಬ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗಡೆ ಹೋಗದಂತೆ ಅಗತ್ಯ ಕ್ರಮ ಕೈಗೊಳ್ಳಲು ಪಕ್ಷವು ನಿಯೋಜಿಸಿದ ಪ್ರತಿಯೊಂದು ವಾರ್ಡುಗಳ ಬಿಎಲ್ಓ2ಗಳಿಗೆ ಸೂಚನೆ ನೀಡಿದರು ಮತ್ತು ವಿಜಯನಗರ ಜಿಲ್ಲೆಯಲ್ಲಿ ಕೊಟ್ಟೂರು ತಾಲೂಕು ಅತಿ ಬೇಗನೆ ಎಸ್ಐಆರ್ ಪ್ರಕ್ರಿಯೆ ಮುಗಿಸಲು ಎಲ್ಲಾ ಬಿಎಲ್ಓ 2 ಗಳು ಕಾರ್ಯಪ್ರವೃತ್ತರಾಗಬೇಕೆಂದು

ತಿಳಿಸಿದರು ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲೆಯ ಬಿಜೆಪಿ ಪಕ್ಷದ ಪ್ರಭಾರಿಗಳಾದ ಚನ್ನಬಸವನಗೌಡ,ಅಯ್ಯಾಳಿ ತಿಮ್ಮಣ್ಣ,ಕೃಷ್ಣ ನಾಯಕ್ ಬಲ್ಲಾಹುಣಸೆ ರಾಮಣ್ಣ, ಪಿಎಚ್ ಕೊಟ್ರೇಶ್, ಜಿಲ್ಲಾ ರೈತ ಮೋರ್ಚಾ ಕಾರ್ಯದರ್ಶಿ ಭರಮನಗೌಡ ಪಾಟೀಲ್, ಜಿಲ್ಲಾ ಯುವ ಘಟಕದ ಉಪಾಧ್ಯಕ್ಷ ವಿಕ್ರಂ ಕೊಟ್ಟೂರು ನಗರ ಘಟಕದ ಅಧ್ಯಕ್ಷ ಅಂಗಡಿ ಪಂಪಾಪತಿ, ಮಂಡಲ ಉಪಾಧ್ಯಕ್ಷ ಕೋನಾಪುರ ಬಸವರಾಜ್, ಮಾಜಿ ತಾಲೂಕು ಪಂಚಾಯಿತಿ ಅಧ್ಯಕ್ಷ ಗುರುಮೂರ್ತಿ,ಸಿದ್ದಯ್ಯ, ಮಲ್ಲಿಕಾರ್ಜುನ್,ಬೆಣಕಲ್ಲು ಪ್ರಕಾಶ್,ನಗರ ಘಟಕದ ಕಾರ್ಯದರ್ಶಿ ಅಭಿಷೇಕ್ ಸೇರಿದಂತೆ ಇನ್ನೂ ಅನೇಕ ಕಾರ್ಯಕರ್ತರು ಪದಾಧಿಕಾರಿಗಳು ಹಾಜರಿದ್ದರು

# ಎಫ್.ಎಸ್.ಟಿ.ಪಿ ಮತ್ತು ಎಸ್.ಟಿ.ಪಿ ಕಾಮಗಾರಿ ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಾಕಿ ಇರುವ ಎಫ್.ಎಸ್.ಟಿ.ಪಿ ಮತ್ತು ಎಸ್.ಟಿ.ಪಿ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಸ್ಥಳೀಯ ಆಡಳಿತದ 24ಥ7 ಕುಡಿಯುವ ನೀರಿನ ಯೋಜನೆ (ಅಮೃತ್ 2.0 ಯೋಜನೆ) ಹಾಗೂ ಒಳಚರಂಡಿ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಅಭಿವೃದ್ಧಿ ಕೆಲಸಗಳಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಯಾವುದೇ ರೀತಿಯ ನಿರ್ಲಕ್ಷ್ಯವಹಿಸದೇ ಕಾಂಗಾರಿ ಅನುಷ್ಠಾನಗೊಳಿಸಬೇಕು. ಅದಲ್ಲದೇ ಕಾಮಗಾರಿಯ ಗುಣಮಟ್ಟವೂ ಕಾಯ್ದುಕೊಳ್ಳಬೇಕು. ಒಂದು ವೇಳೆ ಗುತ್ತಿಗೆದಾರರು ವಿವಿಧ ನೆಪ ಹೇಳುವ ಮೂಲಕ ಕಾಮಗಾರಿ ವಿಳಂಬವಾದಲ್ಲಿ ಅಥವಾ ಕಳಪೆ ಕಾಮಗಾರಿ ಕಂಡು ಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು. ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಪೈಪ್‌ಲೈನ್ ಅಳವಡಿಕೆಗೆ ರಸ್ತೆ ಬದಿಯಲ್ಲಿನ ಪೆಟ್ಟಿ ಅಂಗಡಿಗಳ ಅತಿಕ್ರಮಣದಿಂದ ಅಡ್ಡಿಯಾಗುತ್ತಿರುವುದರಿಂದ ಕಾಮಗಾರಿ ವಿಳಂಬವಾಗುತ್ತಿದೆ. ಅತಿಕ್ರಮಣದಾರರೊಂದಿಗೆ ಸೂಕ್ತ ಸಂವಹನ ನಡೆಸಿ ಜಾಗವನ್ನು ತಕ್ಷಣ ತರೆವುಗೊಳಿಸಿ ಮುಂಬರುವ ಆಗಸ್ಟ್ ಒಳಗೆ ಕಾಮಗಾರಿ ಪೂರ್ಣಗೊಳಿಸಬೇಕು. ಡಿಸೆಂಬರ್ ವೇಳೆಗೆ ಸಂಪೂರ್ಣ ಯೋಜನೆ ಮುಕ್ತಾಯಗೊಳಿಸಬೇಕು. ರಾಷ್ಟ್ರೀಯ ಹಸಿರು ನ್ಯಾಯಾಧೀಕರಣ ಮತ್ತು ಘನತ್ಯಾಜ್ಯ ನಿರ್ವಹಣೆ ನಿಯಮಗಳಿಗೆ ಸಂಬಂಧಿಸಿದಂತೆ ಕೇವಲ ದಾಖಲೆ ಅಥವಾ ಕಾಗದದ ಮೇಲೆ ಪ್ರಗತಿ ತೋರಿಸುವುದನ್ನು ನಿಲ್ಲಿಸಿ. ಪ್ರಾಯೋಗಿಕ ಹಾಗೂ ವಾಸ್ತವಿಕ ಸುಧಾರಣೆ ಕಸ ವಿಲೇವಾರಿ ಮತ್ತು ಹಸಿರು ಪರಿಸರ ನಿರ್ವಹಣೆಯಲ್ಲಿ ಕಾಣಬೇಕು ಎಂದು ತಾಕೀತು ಮಾಡಿದರು.

ಕಾಮಗಾರಿಗಳ ವಿಳಂಬಕ್ಕೆ ವಿವಿಧ ತಾಂತ್ರಿಕ ಕುಂಟುನೆಪ ಹೇಳದೇ, ಸಂಬಂಧಿಸಿದ ಅಧಿಕಾರಿಗಳು ಸಮನ್ವಯತೆಯಿಂದ ಜಂಟಿಯಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ ಅವರು, ನೀರು ಶುದ್ಧೀಕರಣ ಘಟಕ ಮತ್ತು ಓವರ್ ಹೆಡ್ ಟ್ಯಾಂಕ್ ಕಾಮಗಾರಿ ಪೂರ್ಣಗೊಳಿಸಿದ ನಂತರವೇ ಮನೆ ಮನೆಗೆ ನಳ ಸಂಪರ್ಕ ನೀಡುವ ಕೆಲಸವನ್ನು ವಿಸ್ತರಿಸಬೇಕು. ಕಾರ್ಮಿಕರ ನಿರ್ವಹಣೆ ಮತ್ತು ಅಗತ್ಯ ಸಾಮಗ್ರಿಗಳ ಪೂರೈಕೆಯಲ್ಲಿನ ವಿಳಂಬವನ್ನು ಸರಿದೂಗಿಸಲು ಗುತ್ತಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಪರಿಣಿತ ಕಾರ್ಮಿಕರನ್ನು ನಿಯೋಜಿಸಿ ಮೆಕ್ಯಾನಿಕಲ್ ಫಿಟ್ಟಿಂಗ್ ಕೆಲಸ ಚುರುಕುಗೊಳಿಸಬೇಕು. ಇನ್ನು ಯಾವುದೇ ಕಾಲಾವಕಾಶ ನೀಡುವುದಿಲ್ಲ. ಪೈಪ್‌ಲೈನ್ ಮಾರ್ಗ ಬದಲಾವಣೆ ಅಥವಾ ಸಂಪರ್ಕ ಕಲ್ಪಿಸುವಾಗ ಸ್ಥಳೀಯವಾಗಿ ಯಾವುದೇ ಗೊಂದಲಗಳಿದ್ದಲ್ಲಿ ಸಂಬಂಧಪಟ್ಟ ಸಿಬ್ಬಂದಿ ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಬಗೆಹರಿಸಬೇಕು.

ಯುಜಿಡಿ ಯೋಜನೆಯ ಬಾಕಿ ಇರುವ ಮಿಸ್ಸಿಂಗ್ ಲಿಂಕ್ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಮತ್ತು ಮುಂದಿನ ವಾರವೇ ಇದರ ಯೋಜನಾ ಪ್ರಗತಿ ವರದಿಯನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ರಸ್ತೆಗಳನ್ನು ದುರಸ್ತಿಗೊಳಿಸಿ, ಕುಡಿಯುವ ನೀರಿನ ಪೈಪ್‌ಲೈನ್ ಮತ್ತು ಮನೆ ಸಂಪರ್ಕದ ಯೋಜನೆಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.ಇದಕ್ಕೆ ಸಂಬಂಧಿಸಿದ ಅಧಿಕಾರಿ ಪ್ರತಿಕ್ರಿಯಿಸಿ ಅಮೃತ್ 2.0 ಯೋಜನೆಯಡಿ 1 ಲಕ್ಷಕ್ಕಿಂತ ಕಡಿಮೆ ಜನಸಂಖ್ಯೆ ಇರುವ ಪಟ್ಟಣಗಳನ್ನು ಒಳಪಡಿಸಲಾಗುತ್ತಿದ್ದು, ಜಿಲ್ಲಾ ವ್ಯಾಪ್ತಿಯ ಒಟ್ಟು 7 ಪಟ್ಟಣಗಳಲ್ಲಿ ಯೋಜನೆ ಪ್ರಗತಿಯಲ್ಲಿದೆ. ಈ ಪೈಕಿ ಮರಿಯಮ್ಮನಹಳ್ಳಿ ಪಟ್ಟಣದ ಈ ಯೋಜನೆಗೆ 2023 ರಲ್ಲಿ ಕಾರ್ಯಾದೇಶ ನೀಡಲಾಗಿದ್ದು, ಚೆನ್ನೈ ಮೂಲದ ಎಕೋ ಪ್ರೊಡಕ್ಷನ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆ ಕಾಮಗಾರಿ ನಿರ್ವಹಿಸುತ್ತಿದೆ. ಒಟ್ಟು 54 ರಿಂದ 58 ಕಿ.ಮೀ ವ್ಯಾಪ್ತಿಯ ಪೈಪ್‌ಲೈನ್ ಹಾಗೂ ರೈಸಿಂಗ್ ಮೇನ್ ಕಾಮಗಾರಿಗಳು ಬಹುತೇಕ ಪೂರ್ಣಗೊಂಡಿವೆ. ನೀರು ಶುದ್ಧೀಕರಣ ಘಟಕದ ಸಿವಿಲ್ ಕಾಮಗಾರಿಗಳು ಮುಗಿದಿದ್ದು, ಎಲೆಕ್ಟ್ರೋ-ಮೆಕ್ಯಾನಿಕಲ್ ಕೆಲಸ ಪ್ರಗತಿಯಲ್ಲಿದೆ.

ಜಿಲ್ಲೆಯ ಮರಿಯಮ್ಮನಹಳ್ಳಿ ವ್ಯಾಪ್ತಿಯಲ್ಲಿ 10 ಲಕ್ಷ ಲೀಟರ್ ಮತ್ತು ಎರಡು 5 ಲಕ್ಷ ಲೀಟರ್ ಸಾಮರ್ಥ್ಯ 3 ಟ್ಯಾಂಕ್‌ಗಳ ಕಾಮಗಾರಿ ಹಮ್ಮಿಕೊಂಡಿದ್ದು, 2 ಕಾಮಗಾರಿ ಬಹುತೇಕ ಪೂರ್ಣಗೊಂಡಿವೆ. ಆದರೆ 10 ಲಕ್ಷ ಲೀಟರ್ ಸಾಮರ್ಥ್ಯದ ಟ್ಯಾಂಕ್ ಕಾಮಗಾರಿ ಸ್ಥಳ ಸಮಸ್ಯೆಯಿಂದಾಗಿ ವಿಳಂಬವಾಗಿದೆ. ಅದರಂತೆ ಯೋಜಿತ 4,488 ನಳ ಸಂಪರ್ಕಗಳ ಪೈಕಿ ಈಗಾಗಲೇ 4,400 ಕ್ಕೂ ಹೆಚ್ಚು ಮನೆಗಳಿಗೆ ಸಂಪರ್ಕ ಕಲ್ಪಿಸಲಾಗಿದೆ. ಅದರಂತೆ ಒಟ್ಟು 102 ಕಿ.ಮೀ ಪೈಪ್‌ಲೈನ್ ಜಾಲದ ಪೈಕಿ ಈಗಾಗಲೇ 80 ಕಿ.ಮೀ ಕೆಲಸ ಪೂರ್ಣಗೊಂಡಿದೆ. ಯೋಜಿತ 6,500 ಮನೆಗಳ ಪೈಕಿ 4,300 ಮನೆಗಳಿಗೆ ಯಶಸ್ವಿಯಾಗಿ ನಳ ಸಂಪರ್ಕ ಕಲ್ಪಿಸಲಾಗಿದೆ. ಹೀಗೆ ಜಿಲ್ಲಾದ್ಯಂತ ಹಮ್ಮಿಕೊಳ್ಳಲಾಗಿರುವ ಅಭಿವೃದ್ಧಿ ಕಾಮಗಾರಿಗಳು ಬಹುತೇಕ ಪೂರ್ಣಗೊಂಡಿದ್ದು, ಮುಂದಿನ ಆಗಸ್ಟ್ ಅಂತ್ಯಕ್ಕೆ ಸಂಪೂರ್ಣ ಮುಕ್ತಾಯಗೊಳ್ಳಲಿವೆ ಎಂದು ಸಭೆಗೆ ಮಾಹಿತಿ ನೀಡಿದರು.ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮನೋಹರ್, ನಗರಸಭೆ ಪೌರಾಯುಕ್ತ ಎರಗುಡಿ ಶಿವಕುಮಾರ್ ಸೇರಿದಂತೆ ವಿವಿಧ ಇಲಾಖ ಅಧಿಕಾರಿಗಳು, ಸ್ಥಳೀಯ ಆಡಳಿತ ಸಂಸ್ಥೆಯ ಮುಖ್ಯಾಧಿಕಾರಿಗಳು, ಗುತ್ತಿಗೆದಾರರು ಇದ್ದರು.

# ಫಸಲ್ ಬಿಮಾ ಜಾಗೃತಿ: ಕಮಲನಗರ ಕೃಷಿ ಅಧಿಕಾರಿ ಶತ್ರುಘ್ನ ಅವರಿಂದ ರೈತರಿಗೆ ಕರೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಮುಂಗಾರು ಹಂಗಾಮಿನಲ್ಲಿ ಪ್ರಕೃತಿ ವಿಕೋಪಗಳಿಂದ ಎದುರಾಗುವ ಬೆಳೆ ನಷ್ಟಕ್ಕೆ ಆಸರೆಯಾಗುವ 'ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ' ಯೋಜನೆ ಕುರಿತು ರೈತರಲ್ಲಿ ಅರಿವು ಮೂಡಿಸುವ ವಿಶೇಷ ಅಭಿಯಾನವನ್ನು ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿತ್ತು.ಈ ವೇಳೆ ಮಾತನಾಡಿದ ಕಮಲನಗರ ಕೃಷಿ ಅಧಿಕಾರಿ ಶತ್ರುಘ್ನ ಅವರು, ಪ್ರಸ್ತುತ ಸಾಲಿನ ಮುಂಗಾರು ಬೆಳೆಗಳಿಗೆ ವಿಮೆ ಮಾಡಿಸುವುದರಿಂದ ಸಿಗುವ ಪ್ರಯೋಜನಗಳು ಮತ್ತು ಕಡ್ಡಾಯವಾಗಿ ಪಾಲಿಸಬೇಕಾದ ನಿಯಮಗಳ ಕುರಿತು ರೈತರಿಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು.

ಅತಿವೃಷ್ಟಿ, ಅನಾವೃಷ್ಟಿ, ಅಕಾಲಿಕ ಮಳೆಯಂತಹ ಕಷ್ಟದ ಸಂದರ್ಭಗಳಲ್ಲಿ ರೈತರ ಕೈಹಿಡಿಯಲು ಈ ಯೋಜನೆ ಸಹಕಾರಿಯಾಗಿದ್ದು, ತಾಲೂಕಿನ ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.ಅಭಿಯಾನದ ಪ್ರಮುಖ ಮುಖ್ಯಾಂಶಗಳು ಹಾಗೂ ಬೆಳೆವಾರು ಮಾಹಿತಿ:

ಕೊನೆಯ ದಿನಾಂಕದ ಎಚ್ಚರಿಕೆ:ಹೆಸರು ಮತ್ತು ಉದ್ದು ಬೆಳೆಗಳ ವಿಮೆ ನೋಂದಣಿಗೆ ಜುಲೈ 15, 2026 ಕೊನೆಯ ದಿನವಾಗಿದೆ. ಸೋಯಾಬೀನ್, ತೊಗರಿ, ಹತ್ತಿ, ಎಳ್ಳು ಹಾಗೂ ಭತ್ತದ ಬೆಳೆಗಳಿಗೆ ಜುಲೈ 31, 2026 ರವರೆಗೆ ವಿಮೆ ಮಾಡಿಸಲು ಅವಕಾಶವಿದೆ ಎಂದು ಕೃಷಿ ಅಧಿಕಾರಿಗಳು ವಿವರಿಸಿದರು.ಕೊನೆಯ ದಿನದವರೆಗೂ ಕಾಯದೆ ತಾಲ್ಲೂಕಿನ ಎಲ್ಲಾ ರೈತ ಬಾಂಧವರು ತಮ್ಮ ಹತ್ತಿರದ ಬ್ಯಾಂಕ್, ಸಿ.ಎಸ್.ಸಿ (CSC) ಅಥವಾ ಗ್ರಾಮ್-ಒನ್ ಕೇಂದ್ರಗಳ ಮೂಲಕ ತಕ್ಷಣವೇ ವಿಮೆ ಸಲ್ಲಿಸಿ ಆರ್ಥಿಕ ಸುರಕ್ಷತೆ ಪಡೆದುಕೊಳ್ಳಬೇಕು ಎಂದು ಈ ಸಂದರ್ಭದಲ್ಲಿ ಕರೆ ನೀಡಲಾಯಿತು.ಕೃಷಿ ಇಲಾಖೆ ಹಾಗೂ ಅಗ್ರಿಕಲ್ಚರ್ ಇನ್ಶೂರೆನ್ಸ್ ಕಂಪನಿ (AIC) ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದಲ್ಲಿ ಇಲಾಖೆಯ ಸಿಬ್ಬಂದಿ, ವಿಮಾ ಪ್ರತಿನಿಧಿಗಳು ಹಾಗೂ ರೈತ ಸಂಘದ ತಾಲೂಕ ಅಧ್ಯಕ್ಷ ಪ್ರವೀಣಕುಮಾರ ಕುಲಕರ್ಣಿ, ತಾಲೂಕ ಭಾರತ ಕೃಷಿ ಸಮಾಜ ಅಧ್ಯಕ್ಷ ಉಮಾಕಾಂತ, ವಿಠ್ಠಲರಾವ ಪಾಟೀಲ, ಭೀಮರಾವ ಕಣಜೆ, ಪ್ರಶಾಂತ ಖಾನಾಪುರೆ,ಸಿದ್ರಾಮಪ್ಪ ಬಿರಾದಾರ ಡಿಗ್ಗಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕುಕನೂರು ಠಾಣೆಯಿಂದ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ದುರುಪಯೋಗ ,ವಿರೋಧಿ ಜನಜಾಗೃತಿ ಅಭಿಯಾನ


• ಮಲ್ಲಮ್ಮ ನುಡಿ ವಾರ್ತೆ ಕುಕನೂರು




ಯುವಜನರಲ್ಲಿ ಹೆಚ್ಚುತ್ತಿರುವ ಮಾದಕ ವಸ್ತುಗಳ ವ್ಯಸನವನ್ನು ತಡೆಗಟ್ಟುವ ಹಾಗೂ ಅಕ್ರಮ ಮಾದಕ ವಸ್ತುಗಳ ಸಾಗಾಣಿಕೆ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಕುಕನೂರು ಪೊಲೀಸ್ ಠಾಣೆ ವತಿಯಿಂದ ತಾಲೂಕಿನ ಅಲ್ಪಸಂಖ್ಯಾತ ಮುರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಕೆಎಲ್ಇ (KLE) ಪದವಿ ಪೂರ್ವ ಕಾಲೇಜಿನಲ್ಲಿ ವಿಶೇಷ ಜನಜಾಗೃತಿ ಕಾರ್ಯಕ್ರಮವನ್ನು ಇಂದು (ಬುಧವಾರ) ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕುಕನೂರು ಪೊಲೀಸ್ ಠಾಣೆಯ ಪಿಎಸ್ಐ ಎಸ್.ಪಿ. ನಾಯ್ಕ್ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಾದಕ ವಸ್ತುಗಳ ದುರುಪಯೋಗವು ಸಮಾಜಕ್ಕೆ ದೊಡ್ಡ ಸವಾಲಾಗಿ ಪರಿಣಮಿಸಿದ್ದು, ವಿಶೇಷವಾಗಿ ಯುವಜನರು ಹಾಗೂ ವಿದ್ಯಾರ್ಥಿಗಳು ಇದರ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.ಯಾವುದೇ ರೀತಿಯ ಮಾದಕ ವಸ್ತುಗಳ ಸೇವನೆ ವ್ಯಕ್ತಿಯ ಆರೋಗ್ಯ, ಶಿಕ್ಷಣ, ಕುಟುಂಬ ಹಾಗೂ ಭವಿಷ್ಯದ ಮೇಲೆ ಗಂಭೀರ ದುಷ್ಪರಿಣಾಮ ಬೀರುತ್ತದೆ. ಸ್ನೇಹಿತರ ಒತ್ತಡ, ಕುತೂಹಲ ಅಥವಾ ತಪ್ಪು ಪ್ರಭಾವಕ್ಕೆ ಒಳಗಾಗಿ ಇಂತಹ ದುಶ್ಚಟಗಳಿಗೆ ಬಲಿಯಾಗಬಾರದು ಎಂದು ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ, ಮಾರಾಟ ಅಥವಾ ಬಳಕೆಯ ಕುರಿತು ಮಾಹಿತಿ ದೊರೆತಲ್ಲಿ ತಕ್ಷಣವೇ ಪೊಲೀಸ್ ಇಲಾಖೆಗೆ ತಿಳಿಸಿ ಸಮಾಜವನ್ನು ಈ ಪಿಡುಗಿನಿಂದ ಮುಕ್ತಗೊಳಿಸಲು ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ದುಷ್ಪರಿಣಾಮ, ಕಾನೂನು ಕ್ರಮಗಳು ಹಾಗೂ ಆರೋಗ್ಯದ ಮೇಲೆ ಉಂಟಾಗುವ ಪರಿಣಾಮಗಳ ಕುರಿತು ವಿವರವಾಗಿ ಅರಿವು ಮೂಡಿಸಲಾಯಿತು. ವಿದ್ಯಾರ್ಥಿಗಳು ಆಸಕ್ತಿಯಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ, ವ್ಯಸನಮುಕ್ತ ಜೀವನ ನಡೆಸುವ ಸಂಕಲ್ಪ ಕೈಗೊಂಡರು.ಈ ಸಂದರ್ಭದಲ್ಲಿ ಶಾಲೆ ಹಾಗೂ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು, ಶಿಕ್ಷಕರು, ಪೊಲೀಸ್ ಸಿಬ್ಬಂದಿ ಹಾಗೂ ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದ ಅಂತ್ಯದಲ್ಲಿ ವಿದ್ಯಾರ್ಥಿಗಳಿಗೆ ಮಾದಕ ವ್ಯಸನದಿಂದ ದೂರವಿದ್ದು ಆರೋಗ್ಯಕರ ಹಾಗೂ ಜವಾಬ್ದಾರಿಯುತ ಜೀವನ ನಡೆಸುವಂತೆ ಕರೆ ನೀಡಲಾಯಿತು.

# ಸಂಗೀತ-ಸಂಸ್ಕೃತಿಯ ಸೊಬಗು ಅನಾವರಣ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಸಂಗೀತ, ಸಾಹಿತ್ಯ ಹಾಗೂ ಜಾನಪದ ಸಂಸ್ಕೃತಿಯ ಶ್ರೀಮಂತ ಪರಂಪರೆಯನ್ನು ಅನಾವರಣಗೊಳಿಸುವ ಉದ್ದೇಶದಿಂದ ಅನುರಾಧಾ ಪೌಢವಾಲ ಮಹಿಳಾ ಕಲಾ, ಜಾನಪದ ಸಾಹಿತ್ಯ ಸಾಂಸ್ಕೃತಿಕ ಸಂಘ, ಜನತಾ ಕಾಲೋನಿ, ಭಾಲ್ಕಿ ವತಿಯಿಂದ ಕುಂಭೇಶ್ವರ ಮಂದಿರದಲ್ಲಿ ಆಯೋಜಿಸಿದ್ದ ಒಂದು ದಿನದ ಸಾಂಸ್ಕೃತಿಕ ಕಾರ್ಯಕ್ರಮ ಕಲಾಭಿಮಾನಿಗಳ ಮನಗೆದ್ದು ಯಶಸ್ವಿಯಾಗಿ ನಡೆಯಿತು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಸಂಗೀತ ಸೇವಕರಾದ ಕೇಶವರಾವ ಸೂರ್ಯವಂಶಿ ವಹಿಸಿದ್ದರು. ನಿವೃತ್ತ ಉಪನ್ಯಾಸಕರಾದ ಶೇಷೇರಾವ ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಿ, ಸಂಗೀತ ಮತ್ತು ಸಾಹಿತ್ಯವು ಸಮಾಜದಲ್ಲಿ ಸಂಸ್ಕಾರ, ಸೌಹಾರ್ದತೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಶಕ್ತಿಯಾಗಿದೆ. ಇಂತಹ ಕಾರ್ಯಕ್ರಮಗಳು ಯುವ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವುದರೊಂದಿಗೆ ಕಲಾ ಪರಂಪರೆಯನ್ನು ಉಳಿಸಿ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು.ಮುಖ್ಯ ಅತಿಥಿ-ಯಾಗಿ ಸಂಗಪ್ಪಾ ವಿ. ಡೊಂಗಾಪುರೆ ಹಾಗೂ ವಿಶೇಷ ಅತಿಥಿಯಾಗಿ ಇಂದುಮತಿ ಗುಂಡಪ್ಪಾ ಸಂಗಮಕರ್ ಭಾಗವಹಿಸಿ, ಸಂಘದ ಸಾಂಸ್ಕೃತಿಕ ಚಟುವಟಿಕೆಗಳನ್ನು ಶ್ಲಾಘಿಸಿ ಶುಭ ಹಾರೈಸಿದರು.ಕಾರ್ಯಕ್ರಮದಲ್ಲಿ ಸುಗಮ ಸಂಗೀತ ಗಾಯಕರುಗಿರಿ ಮಹಾರಾಜ ಹಾಗೂ ಕೇಶವರಾವ ಸೂರ್ಯವಂಶಿ ಅವರ ಸುಮಧುರ ಗಾಯನ ಪ್ರೇಕ್ಷಕರ ಮನಸೂರೆಗೊಂಡಿತು. ಹಾರ್ಮೋನಿಯಂನಲ್ಲಿ ಹಣಮಂತರಾವ ಚಿದ್ರ ಮತ್ತು ಸಂಗಪ್ಪಾ ವೀರಶೆಟ್ಟಿ ಡೊಂಗಾಪುರೆ ಅವರ ಸಂಗೀತ ಸಹಕಾರ, ತಬಲಾದಲ್ಲಿ ಸಂಕೇತ ಹಾಗೂ ಮನೋಹರ ಭಾತ್ರಂಬ್ರಾ ಅವರ ಮನಮೋಹಕ ವಾದನ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.ಆರಂಭದಲ್ಲಿ ಲಕ್ಷ್ಮಿ ಅಶೋಕ ಮುಂಗಡೆ ಅತಿಥಿಗಳನ್ನು ಸ್ವಾಗತಿಸಿದರು. ಚಂದ್ರಕಲಾ ಧನರಾಜ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರೆ, ಸರಸ್ವತಿ ಹೂಲಸೂರೆ ವಂದನಾರ್ಪಣೆ ಸಲ್ಲಿಸಿದರು.ಸಂಗೀತ, ಸಾಹಿತ್ಯ ಮತ್ತು ಜಾನಪದ ಸಂಸ್ಕೃತಿಯ ಸಂಗಮವಾಗಿ ನಡೆದ ಈ ಕಾರ್ಯಕ್ರಮದಲ್ಲಿ ಸ್ಥಳೀಯ ಕಲಾಭಿಮಾನಿಗಳು, ಮಹಿಳೆಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಲಾವಿದರನ್ನು ಹುರಿದುಂಬಿಸಿದರು. ಕಾರ್ಯಕ್ರಮವು ಸಾಂಸ್ಕೃತಿಕ ವೈಭವವನ್ನು ಅನಾವರಣಗೊಳಿಸುವುದರೊಂದಿಗೆ ಕಲಾಸಕ್ತರಿಗೆ ಸ್ಮರಣೀಯ ಅನುಭವವನ್ನು ನೀಡಿತು.

## ಪ್ರತಿ ಅರ್ಹ ಮತದಾರರು ಎಸ್‌ಐಆರ್ ಫಾರ್ಮ್ ಭರ್ತಿ ಮಾಡಿ ಮತದಾನದ ಹಕ್ಕು ಉಳಿಸಿಕೊಳ್ಳಿ: ಮೀನಾಕ್ಷಿ ನಾಯಕ



**ಕಡೆಚೂರು:** ಜು, 15 ಪ್ರತಿಯೊಬ್ಬ ಅರ್ಹ ನಾಗರಿಕರು ಎಸ್‌ಐಆರ್ ಫಾರ್ಮ್ ಭರ್ತಿ ಮಾಡಿ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕು. ಮತದಾನದ ಹಕ್ಕು ಸಂವಿಧಾನ ನೀಡಿರುವ ಅಮೂಲ್ಯ ಹಕ್ಕಾಗಿದ್ದು, ಯಾವುದೇ ಕಾರಣಕ್ಕೂ ಅದನ್ನು ಕಳೆದುಕೊಳ್ಳಬಾರದು ಎಂದು ಸೈದಾಪೂರ ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಮೀನಾಕ್ಷಿ ನಾಯಕ ಹೇಳಿದರು.

ಯಾದಗಿರಿ ತಾಲೂಕಿನ ಕಡೆಚೂರು ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಹಮ್ಮಿಕೊಂಡಿದ್ದ ಎಸ್‌ಐಆರ್ ಫಾರ್ಮ್ ಭರ್ತಿ ಹಾಗೂ ಬಿಎಲ್‌ಎ–2 ಜಾಗೃತಿ ಅಭಿಯಾನದಲ್ಲಿ ಅವರು ಮಾತನಾಡಿದರು.

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸಬೇಕು. ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು, ವಿಳಾಸ ಹಾಗೂ ಇತರೆ ವಿವರಗಳನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ಎಸ್‌ಐಆರ್ ಫಾರ್ಮ್ ಭರ್ತಿ ಮಾಡಿ ಸಲ್ಲಿಸಬೇಕು. ಪ್ರಜಾಪ್ರಭುತ್ವದ ಬಲವರ್ಧನೆಗೆ ಪ್ರತಿಯೊಬ್ಬ ಮತದಾರರ ಪಾಲ್ಗೊಳ್ಳುವಿಕೆ ಅತ್ಯಂತ ಮುಖ್ಯವಾಗಿದ್ದು, ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಕಾಂಗ್ರೆಸ್ ಪಕ್ಷ ಗ್ರಾಮ ಮಟ್ಟದಲ್ಲಿ ಜಾಗೃತಿ ಅಭಿಯಾನ ನಡೆಸುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾರ್ಯಕರ್ತೆಯರಾದ ವಿಜಮ್ಮ ಮಲ್ಹಾರ್, ಮುಖಂಡರಾದ ನಾಗಪ್ಪ ಸಜ್ಜನ್, ಹುಸೇನಪ್ಪ, ಚಂದ್ರು, ಅಬ್ದುಲ್ (ಘನಿ), ಯಲ್ಲಪ್ಪ, ಜುಬೇರ್ ಪಾಷ, ಮೈಬೂಬ್ ಅಫೀಜ್ ಸಾಬ್ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿ ಗ್ರಾಮಸ್ಥರಿಗೆ ಎಸ್‌ಐಆರ್ ಫಾರ್ಮ್ ಭರ್ತಿ ಮಾಡಿಸಲು ನೆರವು ನೀಡಿದರು.

## ಸೇವಾಭಾವ ಬೆಳೆಸಿ, ಕಾನೂನು ಪಾಲಿಸಿ: ಪೂಜ್ಯ ಶಾಂತವೀರ ಶ್ರೀ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

: ಜು. 15: "ಸೇವೆಯೇ ಜೀವನದ ಸಾರ್ಥಕತೆ. ಪ್ರತಿಯೊಬ್ಬರೂ ಸೇವಾಭಾವವನ್ನು ಬೆಳೆಸಿಕೊಂಡು ಕಾನೂನು ಪಾಲನೆಯ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು" ಎಂದು ಖಾಸಮಠದ ಪೂಜ್ಯಶ್ರೀ ಶಾಂತವೀರ ಶ್ರೀ ಗುರು ಮುರುಗರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.ಪಟ್ಟಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಯಾದಗಿರಿ, ತಾಲೂಕು ಕಾನೂನು ಸೇವೆಗಳ ಸಮಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ, ಕಂದಾಯ ಇಲಾಖೆ ಹಾಗೂ ಗುರುಮಠಕಲ್ ಆಟೋ ಚಾಲಕರ ಸಂಘದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಮಾದಕ ವಸ್ತು ಜಾಗೃತಿ ಮತ್ತು ಸ್ವಾಸ್ಥ್ಯ ಸಂಚರಣೆ ಯೋಜನೆ ಹಾಗೂ ಹೆರಿಗೆಗಾಗಿ ಉಚಿತ ಆಟೋ ಸೇವೆ ಚಾಲನಾ ಕಾರ್ಯಕ್ರಮ ಬುಧವಾರ ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ ವಹಿಸಿದ್ದರು. ಮಾತನಾಡಿದ ಅವರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಸಾರ್ವಜನಿಕರಿಗೆ ಉಚಿತ ಕಾನೂನು ನೆರವು ಸೇರಿದಂತೆ ವಿವಿಧ ಸೇವೆಗಳನ್ನು ಒದಗಿಸಲಾಗುತ್ತಿದೆ ಎಂದು ತಿಳಿಸಿದರು. ಹೆರಿಗೆಗೆ ಉಚಿತ ಆಟೋ ಸೇವೆ ನೀಡುತ್ತಿರುವ ನಾರಾಯಣ ಮಜ್ಜಿಗೆ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು, ಕಾನೂನು ಅರಿವು ಕುರಿತಾಗಿ ಮಾತನಾಡಿ ಅಪ್ರಾಪ್ತ ವಯಸ್ಸಿನ ಮಕ್ಕಳು ವಾಹನ ಚಾಲನೆ ಮಾಡಿದರೆ ?25 ಸಾವಿರ ದಂಡ ವಿಧಿಸುವ ಕಾನೂನು ಜಾರಿಯಲ್ಲಿದ್ದು, ವಾಹನ ವಿಮೆಯ ಮಹತ್ವ, ಸಂಚಾರ ನಿಯಮಗಳ ಪಾಲನೆ ಹಾಗೂ ಕಾನೂನು ಅರಿವಿನ ಅಗತ್ಯವನ್ನು ವಿವರಿಸಿದರು. ಹೆಚ್ಚುತ್ತಿರುವ ಜಿಲ್ಲೆಯಲ್ಲಿನ ಬ್ರೂಣ ಹತ್ಯೆ ಕುರಿತಾಗಿ ಆತಂಕ ವ್ಯಕ್ತ ಪಡಿಸಿದರು. ಸಂಪನ್ಮೂಲ ವ್ಯಕ್ತಿ ಶಿವರಾಜ್ ಕಟ್ಟಿಮನಿ ಮಾತನಾಡಿ, ಬಾಲ್ಯ ವಿವಾಹ, ಬಾಲಕಾರ್ಮಿಕ ಪದ್ಧತಿ, ಮಾದಕ ವಸ್ತುಗಳ ದುಷ್ಪರಿಣಾಮ, ಕಾನೂನುಬಾಹಿರ ಚಟುವಟಿಕೆಗಳು ಹಾಗೂ ಸಾಮಾಜಿಕ ಜವಾಬ್ದಾರಿಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಿದರು.ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ನೀಲಾಂಬಿಕಾ ಜಪಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕಿ ಗಂಗೂಬಾಯಿ ಪತ್ತರ್, ಬಸವೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ನರಸರೆಡ್ಡಿ ಗಡ್ಡೆಸೂಗೂರ್ ಪೊಲೀಸ್ ಪಾಟೀಲ್, ಸಂಪನ್ಮೂಲ ವ್ಯಕ್ತಿ ಸುಶ್ಮಾ ಡಿ ಜಾದವ್, ಎಎ??? ಭೀಮಣ್ಣ ಕಾನಗಡ್ಡ, ಆಟೋ ಚಾಲಕರ ಸಂಘದ ಅಧ್ಯಕ್ಷ ನಾರಾಯಣ ಮಜ್ಜಿಗೆ, ಆನಂದ್ ಅರೆಕಾಲಿಕ ಸ್ವಯಂ ಸೇವಕ, ಸಮಾಜಸೇವಕ ಪರ್ವತರೆಡ್ಡಿ ಚಪ್ಪೆಟ್ಲಾ, ನಾಗಭೂಷಣ ಅವಂಟಿ, ಸಿದ್ದಣ್ಣ ಜಾಡರ್, ಆನಂದಶೇಖರ ಹಿರೇಮಠ, ಅಖಂಡೇಶ್ವರಯ್ಯ ಹಿರೇಮಠ, ಲಾಲಪ್ಪ, ನರಸಿಮುಲು ಗಂಗನೊಳ, ಸಾಂಬಾಶಿವ, ಅಶೋಕ್, ಶ್ರೀನಿವಾಸ, ಬುಗ್ಗಪ್ಪ ,ಮಹಾದೇವ, ಇನ್ನಿತರರು ಹಾಜರಿದ್ದರು.

## ಕಾಡು ಇದ್ದರೆ ನಾಡು,ಪ್ರತಿಯೊಬ್ಬರೂ ಅರಿತು ಜೀವನ ಸಾಗಿಸಿ: ಜಗದೀಶ ಚೌರ್



• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಪ್ರಕೃತಿ ಜೊತೆಗೆ ಸಮತೋಲನದಿಂದ ಬಾಳಿದರೆ ನಮಗೆ ಉಳಿಗಾಲವಿದೆ ಎಂದು ಹುಮನಾಬಾದ ತಹಶೀಲ್ದಾರ್ ಜಗದೀಶ ಚೌರ್ ತಾಲೂಕಿನ ಹಳ್ಳಿಖೇಡ (ಬಿ) ಪಟ್ಟಣದ ಸರಸ್ವತಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಹಾಗೂ ಪರಿಸರ ವಾಹಿನಿ ಬೀದರ್ ಸಂಯುಕ್ತಾಶ್ರಯದಲ್ಲಿ ದೇವರಾಜ ಹೊಡೆಮನಿ ಇವರ ತೋಟದಲ್ಲಿ ಹಮ್ಮಿಕೊಂಡಿದ್ದ ವನಮಹೋತ್ಸವ ಮತ್ತು ವಿದ್ಯಾರ್ಥಿಗಳಿಂದ ಸಸಿ ನೆಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ಕಾಡು ನಾಡಿನ ಸಂಪತ್ತು ಕಾಡು ಇದ್ದರೆ ನಾಡು ಪ್ರತಿಯೊಬ್ಬರು ಅರಿತು ಜೀವನ ಸಾಗಿಸಬೇಕು. ವನ್ಯ ಜೀವಿಗಳು ಹೊಲಗಳಿಗೆ ನುಗ್ಗದಂತೆ ಹೊಲದ ಸುತ್ತಮುತ್ತ ಹಣ್ಣಿನ ಗಿಡಗಳು ನೆಡಬೇಕೆಂದು ರೈತರಿಗೆ ಸಲಹೆ ನೀಡಿದರು. ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ ಚಳಕಾಪುರ ಸಿದ್ದರೊಡ ಮಠದ ಶಂಕರಾನಂದ ಮಹಾಸ್ವಾಮಿಗಳು ಮಾತನಾಡಿ,ವನಮಹೋತ್ಸವ ಕಾರ್ಯಕ್ರಮ ಶ್ರೇಷ್ಠ ಕಾರ್ಯಕ್ರಮವಾಗಿದೆ ಮಕ್ಕಳಿಗೆ ಪ್ರಾಥಮಿಕ ಹಂತದಲ್ಲಿಯೇ ಪರಿಸರ ಜ್ಞಾನ ನೀಡಬೇಕು ಎಂದರು. ಸಾಮಾಜಿಕ ವಲಯ ಅರಣ್ಯಾಧಿಕಾರಿ ಪ್ರಕಾಶ ನಿಪ್ಪಾಣಿ ಮಾತನಾಡಿ, ಕೃಷಿ ಅರಣ್ಯ ಬೇಸಾಯ ಹಸಿರು ಹೊದಿಕೆ ಹೆಚ್ಚಳಕ್ಕೆ ತುಂಬಾ ಸಹಾಯವಾಗಿದೆ ಎಂದರು. ರೈತರು ಅರಣ್ಯ ಇಲಾಖೆಯ ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆ ಹಾಗೂ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ರೈತರು ಅರಣ್ಯ ಇಲಾಖೆಗೆ ಸಂಪರ್ಕಿಸಲು ಮನವಿ ಮಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ ಮಾತನಾಡಿ, ಪಾಲಕರು ಮಕ್ಕಳ ಅಭಿರುಚಿ ನೋಡಿ ಅವರ ಇಚ್ಛೆ ಅಂತೇ ವಿದ್ಯಾಭ್ಯಾಸ ನೀಡಲು ಕರೆ ನೀಡಿದರು. ಸರಸ್ವತಿ ಪ್ರೌಢ ಶಾಲೆ ಮಕ್ಕಳಿಗೆ ಒಳ್ಳೆಯ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಕಾರ್ಯ ಶ್ಲಾಘನೀಯ ಎಂದರು. ಪರಿಸರ ವಾಹಿನಿ ಅಧ್ಯಕ್ಷ ಶೈಲೇಂದ್ರ ಕಾವಡಿ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಪರಿಸರ ಸಂರಕ್ಷಣೆಗೆ ಹಗಲಿರಳು ಶ್ರಮಿಸುತ್ತಿರುವ ಕಾರ್ಯ ಮೆಚ್ಚುವಂತದಾಗಿದೆ ಪ್ರತಿಯೊಂದು ಶಾಲೆಗಳಿಗೆ ಭೇಟಿ ನೀಡಿ ಪರಿಸರ ಜಾಗೃತಿ ಮಾಡುತ್ತಿರುವ ಕಾರ್ಯಕ್ಕೆ ಧನ್ಯವಾದಗಳು ಸಲ್ಲಿಸಿದರು. ನಮ್ಮ ಇಲಾಖೆಯಿಂದ ಜಾಗೃತಿ ಕಾರ್ಯಕ್ರಮಕ್ಕೆ ಸಹಕಾರ ನೀಡುವುದಾಗಿ ತಿಳಿಸಿದರು. ಕೃಷಿ ಸಹಾಯಕ ನಿರ್ದೇಶಕ ಶರಣಕುಮಾರ ಮಾತನಾಡಿ, ರೈತರು ತಮ್ಮ ಹೊಲದ ಮಣ್ಣು ಕೊಚ್ಚಿಕೊಂಡು ಹೋಗದಂತೆ ತಡೆಗಟಲು ಮರ ಗಿಡ ಬೆಳೆಸಲು ಕರೆ ನೀಡಿದರು. ಬೀದರ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ರಾಜಶೇಖರ ಬಸನಾಯಕ ಮಾತನಾಡಿ, ವನಮಹೋತ್ಸವ ಕಾರ್ಯಕ್ರಮ ಹೊಲದಲ್ಲಿ ಏರ್ಪಡಿಸಿ ವಿದ್ಯಾರ್ಥಿಗಳ ಹಸ್ತದಿಂದ ಸಸಿ ನೆಡುವ ಕಾರ್ಯಕ್ರಮ ಮಾಡಿದ್ದು ಅತ್ಯುತ್ತಮ ಕಾರ್ಯವಾಗಿದೆ ಎಂದರು. ರೈತರ ಏಳಿಗೆಗಾಗಿ ಕೃಷಿ ವಿಜ್ಞಾನ ಕೇಂದ್ರ ಹಗಲಿರಳು ಶ್ರಮಿಸುತ್ತದೆ ಎಂದರು. ರೈತರ ಸಮಸ್ಯೆ ನಿವಾರಣೆಗೆ ಕೆವಿಕೆಗೆ ಸಂಪರ್ಕಿಸಲು ಕರೆ ನೀಡಿದರು. ಸಿಂಧನಕೇರಾ ವಿರಕ್ತ ಮಠದ ಹೊನ್ನಲಿಂಗೇಶ್ವರ ಮಹಾಸ್ವಾಮಿಗಳು ತಾಯಿಯ ಹೆಸರಿನ ಮೇಲೆ ಸಸಿ ನೆಡಲು ವಿದ್ಯಾರ್ಥಿಗಳಿಗೆ ಸಸಿ ವಿತರಿಸಿ ಚಾಲನೆ ನೀಡಿದರು. ಪರಿಸರ ವಾಹಿನಿ ಅಧ್ಯಕ್ಷ ಶೈಲೇಂದ್ರ ಕಾವಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪುರಸಭೆ ಮುಖ್ಯಾಧಿಕಾರಿ ಶಿವಶಂಕರ ಪಾಟೀಲ್, ಪರಿಸರ ಅಭಿಯಂತೆ ಪೂಜಾ ಪಾನಶೆಟ್ಟಿ, ಶಿಕ್ಷಣ ಸಂಸ್ಥೆಯ ಅಧ್ಯಕ್ಷ ದೇವರಾಜ ಹೊಡೆಮನಿ, ಎಸ್.ಎಸ್. ಹೊಡೆಮನಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಸಮನ್ವಯ ಅಧಿಕಾರಿ ಪ್ರೀತಮಸಿಂಗ್ ಜಾಧವ್, ಉಪ ವಲಯ ಅರಣ್ಯಾಧಿಕಾರಿ ರಾಜಶೇಖರ ಧುಪಾದ್, ಶಾಲಾ ಆಡಳಿತಾಧಿಕಾರಿ ಪ್ರೊಮೋದ ಸಿದ್ರಾಮಶೆಟ್ಟಿ, ಅಬಕಾರಿ ಪಿಎ??? ನರೇಂದ್ರ ಲಕ್ಕಾ, ಬೀದರ್ ಕೃಷಿ ಸಹಾಯಕ ನಿರ್ದೇಶಕ ರಾಜಕುಮಾರ್ ಏಖೇಳ್ಳಿ, ವಕೀಲರಾದ ಮಲ್ಲಿಕಾರ್ಜುನ ಪ್ರಭಾ, ಹಳ್ಳಿಖೇಡ ರೈತ ಸಂಪರ್ಕ ಕೇಂದ್ರ ಅಧಿಕಾರಿ ರಾಕೇಶ ಸಗರ್, ಬಿಆರ್ಪಿ ಧನರಾಜ, ಸದಾಶಿವ ವಿಭೂತಿ, ಪ್ರಶಾಂತ ಪೋಲ್ ಸೇರಿದಂತೆ ಸರಸ್ವತಿ ಶಾಲೆಯ ಸಿಬ್ಬಂದಿ ವರ್ಗದವರು, ರೈತರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ವಕೀಲ ಸಂಘದ ತಾಲೂಕ ಉಪಾಧ್ಯಕ್ಷರಾಗಿ ಅನೀತಾ ಪ್ರಭಾ ರವರಿಗೆ ಸಂಸ್ಥೆ ವತಿಯಿಂದ ಸನ್ಮಾನಿಸಲಾಯಿತು. ಕಾರ್ಯಕ್ರಮವನ್ನು ಶಾಲೆಯ ಮುಖ್ಯ ಶಿಕ್ಷಕಿ ಶೋಭಾ ಕಾಡವಾದೆ

## ಉದ್ಯೋಗ ಕೌಶಲದಿಂದ ಉಜ್ವಲ ಭವಿಷ್ಯ ನಿರ್ಮಿಸಿ: ಫಾ. ಶಾಬು ಫ್ರಾನ್ಸಿಸ್



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು 15: ಡಾನ್ ಬೋಸ್ಕೋ ಡಿಬಿ ಟೆಕ್, ಯಾದಗಿರಿಯಲ್ಲಿ 2026–27ನೇ ಆರ್ಥಿಕ ವರ್ಷದ ಮೊದಲ ಐಟಿ ಕಸ್ಟಮರ್ ಕೇರ್ ಎಕ್ಸಿಕ್ಯೂಟಿವ್ (ಐಟಿ–ಸಿಸಿಇ) 55ನೇ ಬ್ಯಾಚ್ ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಭಾವಪೂರ್ಣ ಬೀಳ್ಕೊಡುಗೆ ಸಮಾರಂಭವನ್ನು ಅದ್ದೂರಿಯಾಗಿ ಆಯೋಜಿಸಲಾಯಿತು. ಯುವಜನರಿಗೆ ಉದ್ಯೋಗ ಕೌಶಲ್ಯ, ವ್ಯಕ್ತಿತ್ವ ವಿಕಸನ, ಆತ್ಮವಿಶ್ವಾಸ ಹಾಗೂ ಜೀವನ ಕೌಶಲ್ಯಗಳನ್ನು ಬೆಳೆಸುವ ಉದ್ದೇಶದಿಂದ ನಡೆದ ಈ ಕಾರ್ಯಕ್ರಮದಲ್ಲಿ ಗಣ್ಯರು ಅಭ್ಯರ್ಥಿಗಳಿಗೆ ಉಜ್ವಲ ಭವಿಷ್ಯದ ಶುಭ ಹಾರೈಕೆಗಳನ್ನು ತಿಳಿಸಿದರು.

ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರದ ನಿರ್ದೇಶಕರು ಹಾಗೂ ಡಿಬಿ ಟೆಕ್ ಯಾದಗಿರಿ ಸೆಂಟರ್ ಹೆಡ್ ಫಾ. ಶಾಬು ಫ್ರಾನ್ಸಿಸ್ ಅವರು ಅಧ್ಯಕ್ಷೀಯ ಭಾಷಣದಲ್ಲಿ ಮಾತನಾಡಿ, ವಿದ್ಯಾರ್ಥಿಯೊಬ್ಬರು ಹಲವು ವರ್ಷಗಳ ಹಿಂದೆ ಉಡುಗೊರೆಯಾಗಿ ನೀಡಿದ ಸಸಿಯ ಉದಾಹರಣೆಯನ್ನು ಹಂಚಿಕೊಂಡರು. ಆ ಸಸಿಗೆ ಪ್ರೀತಿ, ಕಾಳಜಿ ಮತ್ತು ನಿರಂತರ ಆರೈಕೆ ನೀಡಿದ ಪರಿಣಾಮ ಅದು ಇಂದು ಬೃಹತ್ ಮರವಾಗಿ ಬೆಳೆದಿದೆ. ಅದೇ ರೀತಿಯಲ್ಲಿ ಡಾನ್ ಬೋಸ್ಕೋ ಡಿಬಿ ಟೆಕ್ ಪ್ರತಿಯೊಬ್ಬ ಯುವಕರ ಜೀವನದಲ್ಲಿ ಕೌಶಲ್ಯ, ಜ್ಞಾನ, ಶಿಸ್ತು, ಆತ್ಮವಿಶ್ವಾಸ ಹಾಗೂ ಉತ್ತಮ ಮೌಲ್ಯಗಳ ಬೀಜವನ್ನು ಬಿತ್ತಿದೆ. ಆ ಬೀಜವನ್ನು ಪರಿಶ್ರಮ, ಶಿಸ್ತು, ಪ್ರಾಮಾಣಿಕತೆ ಮತ್ತು ದೃಢ ಸಂಕಲ್ಪದ ಮೂಲಕ ಫಲ ನೀಡುವ ಮರವಾಗಿ ಬೆಳೆಸುವುದು ಪ್ರತಿಯೊಬ್ಬ ಅಭ್ಯರ್ಥಿಯ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಅವರು ಮುಂದುವರಿದು, ಕೌಶಲ್ಯ ತರಬೇತಿ ಎನ್ನುವುದು ಕೇವಲ ಪ್ರಮಾಣಪತ್ರ ಪಡೆಯುವ ಕಾರ್ಯಕ್ರಮವಲ್ಲ; ಅದು ಜೀವನವನ್ನು ರೂಪಿಸುವ ಮತ್ತು ಭವಿಷ್ಯವನ್ನು ನಿರ್ಮಿಸುವ ಸುವರ್ಣಾವಕಾಶವಾಗಿದೆ. ಉದ್ಯೋಗ ಸಿಕ್ಕನಂತರವೂ ಕಲಿಕೆಯನ್ನು ನಿಲ್ಲಿಸದೆ ಹೊಸ ಕೌಶಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಸಮಯಪಾಲನೆ, ಪ್ರಾಮಾಣಿಕತೆ, ಶಿಸ್ತು, ಕಠಿಣ ಪರಿಶ್ರಮ ಮತ್ತು ಉತ್ತಮ ನಡವಳಿಕೆ ವ್ಯಕ್ತಿಯನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯುತ್ತವೆ. ನೀವು ಎಲ್ಲಿಗೆ ಹೋದರೂ ಡಾನ್ ಬೋಸ್ಕೋ ಸಂಸ್ಥೆಯ ರಾಯಭಾರಿಗಳಾಗಿ ಉತ್ತಮ ಮೌಲ್ಯಗಳನ್ನು ಪ್ರತಿಬಿಂಬಿಸಬೇಕು. ನಿಮ್ಮ ಸಾಧನೆಯೇ ನಿಮ್ಮ ಕುಟುಂಬದ ಹೆಮ್ಮೆ, ಸಂಸ್ಥೆಯ ಗೌರವ ಮತ್ತು ಸಮಾಜದ ಅಭಿವೃದ್ಧಿಗೆ ಕಾರಣವಾಗಬೇಕು ಎಂದು ತಿಳಿಸಿದರು. ಅಂತಿಮವಾಗಿ ಎಲ್ಲಾ ಅಭ್ಯರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಶುಭ ಹಾರೈಸಿ, ಡಾನ್ ಬೋಸ್ಕೋ ಕುಟುಂಬದ ಪ್ರಾರ್ಥನೆ ಮತ್ತು ಆಶೀರ್ವಾದ ಸದಾ ನಿಮ್ಮೊಂದಿಗಿರುತ್ತದೆ ಎಂದು ಹೇಳಿದರು.

ಡಾನ್ ಬೋಸ್ಕೋ ಸಂಸ್ಥೆಯ ರೆಕ್ಟರ್ ಹಾಗೂ ಮ್ಯಾನೇಜರ್ ರೆವ. ಫಾ. ಸಾಜಿ ಜಾರ್ಜ್ ಅವರು ಮಾತನಾಡಿ, ಜೀವನದಲ್ಲಿ ಯಶಸ್ಸು ಸಾಧಿಸಲು ಪರಿಶ್ರಮ, ತಾಳ್ಮೆ ಹಾಗೂ ನಿರಂತರ ಪ್ರಯತ್ನ ಅತ್ಯಗತ್ಯ ಎಂದು ತಿಳಿಸಿದರು. ಸೈಕಲ್ ಕಲಿಯುವಾಗ ಬೀಳುವುದು ಸಹಜವಾದಂತೆ ಜೀವನದಲ್ಲಿಯೂ ವೈಫಲ್ಯಗಳು ಯಶಸ್ಸಿನ ಮೆಟ್ಟಿಲುಗಳಾಗಿವೆ ಎಂದು ಹೇಳಿ, ಪೋಷಕರ ತ್ಯಾಗವನ್ನು ಗೌರವಿಸಿ, ಧೈರ್ಯದಿಂದ ಸವಾಲುಗಳನ್ನು ಎದುರಿಸಿ, ಇತರರಿಗೆ ಸಹಾಯ ಮಾಡುವ ಗುಣವನ್ನು ಬೆಳೆಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರುಡಾನ್ ಬೋಸ್ಕೋ ಸಂಸ್ಥೆಯ ಆಡಳಿತಾಧಿಕಾರಿ ಫಾ. ಮಿಥುನ್ ಅವರು ಪ್ರಾಮಾಣಿಕತೆ, ನಿಷ್ಠೆ ಮತ್ತು ಸಮರ್ಪಣೆಯೊಂದಿಗೆ ವೃತ್ತಿ ಜೀವನವನ್ನು ಕಟ್ಟಿಕೊಳ್ಳಬೇಕು ಎಂದು ತಿಳಿಸಿದರು. ಉತ್ತಮ ಉದ್ಯೋಗ ಪಡೆಯುವುದಷ್ಟೇ ಅಲ್ಲದೆ, ಸಮಾಜಕ್ಕೆ ಉತ್ತಮ ಕೊಡುಗೆ ನೀಡುವ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳುವುದೇ ನಿಜವಾದ ಯಶಸ್ಸು ಎಂದು ಹೇಳಿದರು.

ಡಾನ್ ಬೋಸ್ಕೋ ಪಿಯು ಕಾಲೇಜಿನ ಪ್ರಾಂಶುಪಾಲ ಫಾ. ವಿವೇಕ್ ಅವರು ಚಾವುಂಡರಾಯ ಹಾಗೂ ಗೊಮ್ಮಟೇಶ್ವರ ಪ್ರತಿಮೆ ನಿರ್ಮಾಣದ ಪ್ರೇರಣಾದಾಯಕ ಕಥೆಯನ್ನು ಉದಾಹರಿಸಿ, ದೃಢ ಸಂಕಲ್ಪ, ನಿರಂತರ ಪರಿಶ್ರಮ ಹಾಗೂ ತಾಳ್ಮೆಯಿಂದ ಯಾವುದೇ ಗುರಿಯನ್ನು ಸಾಧಿಸಬಹುದು ಎಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಡಿಬಿ ಟೆಕ್ ಸಂಯೋಜಕರಾದ ಮಲ್ಲಿಕಾರ್ಜುನ ಕುರುಕುಂದಿ ಅವರು, ಡಾನ್ ಬೋಸ್ಕೋ ಡಿಬಿ ಟೆಕ್ ಯಾದಗಿರಿ 2010ರಿಂದ ಕೌಶಲ್ಯಾಭಿವೃದ್ಧಿ ತರಬೇತಿಗಳನ್ನು ನಡೆಸುತ್ತಿದ್ದು, ಇಲ್ಲಿಯವರೆಗೆ ಒಟ್ಟು 56 ಬ್ಯಾಚ್‌ಗಳಿಗೆ ಯಶಸ್ವಿಯಾಗಿ ತರಬೇತಿ ನೀಡಿದೆ. ಪ್ರಸ್ತುತ 57ನೇ ಬ್ಯಾಚ್‌ನ ತರಬೇತಿ ಆರಂಭಗೊಂಡಿದ್ದು, ನೂರಾರು ನಿರುದ್ಯೋಗಿ ಯುವಕ–ಯುವತಿಯರಿಗೆ ಉದ್ಯೋಗ ಕೌಶಲ್ಯ, ವ್ಯಕ್ತಿತ್ವ ವಿಕಸನ, ಸಂವಹನ ಕೌಶಲ್ಯ, ಇಂಗ್ಲಿಷ್ ಸಂವಹನ, ಡಿಜಿಟಲ್ ಜ್ಞಾನ ಹಾಗೂ ಜೀವನ ಕೌಶಲ್ಯಗಳನ್ನು ನೀಡಿ ಉದ್ಯೋಗ ಕ್ಷೇತ್ರಕ್ಕೆ ಸಜ್ಜುಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ಅವರು ಮುಂದುವರಿದು, ಇಂದು ಬೀಳ್ಕೊಡುಗೆ ಪಡೆಯುತ್ತಿರುವ ಅಭ್ಯರ್ಥಿಗಳು ಮಾನಸಿಕವಾಗಿ ಸದೃಢರಾಗಿ, ಆತ್ಮವಿಶ್ವಾಸದಿಂದ ಉದ್ಯೋಗ ಕ್ಷೇತ್ರವನ್ನು ಪ್ರವೇಶಿಸಬೇಕು. ತರಬೇತಿ ಮುಗಿದ ನಂತರ ಉತ್ತಮ ಉದ್ಯೋಗದಲ್ಲಿ ತೊಡಗಿ ಆರ್ಥಿಕವಾಗಿ ಸ್ವಾವಲಂಬಿಗಳಾಗಿ ತಮ್ಮ ಕುಟುಂಬಕ್ಕೆ ಆಸರೆಯಾಗಬೇಕು. ನಿಮ್ಮ ಯಶಸ್ಸು, ನಿಮ್ಮ ಕುಟುಂಬದ ಸಂತೋಷ ಮತ್ತು ಸಮಾಜದ ಅಭಿವೃದ್ಧಿಯೇ ಡಾನ್ ಬೋಸ್ಕೋ ಡಿಬಿ ಟೆಕ್ ನೀಡುತ್ತಿರುವ ಕೌಶಲ್ಯ ತರಬೇತಿಯ ನಿಜವಾದ ಸಾರ್ಥಕತೆ. ನೀವು ಸಾಧಿಸುವ ಯಶಸ್ಸು ಮುಂದಿನ ಪೀಳಿಗೆಯ ಯುವಕರಿಗೆ ಪ್ರೇರಣೆಯಾಗಬೇಕು ಎಂದು ಕರೆ ನೀಡಿದರು.

ಜೀವನೋಪಾಯ (WeLive) ಯೋಜನೆಯ ಸಂಯೋಜಕ ದೇವೀಂದ್ರಪ್ಪ ಅವರು ಯುವಕರು ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಉತ್ತಮ ಉದ್ಯೋಗ ಪಡೆದು ಪೋಷಕರಿಗೆ ಹೆಮ್ಮೆ ತರುವುದರ ಜೊತೆಗೆ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ತಮ್ಮ ಕೌಶಲ್ಯ ಮತ್ತು ಸೇವೆಯನ್ನು ಸಮರ್ಪಿಸುವಂತೆ ಕರೆ ನೀಡಿದರು.

ಕಾರ್ಯಕ್ರಮದ ಅಂಗವಾಗಿ ಡಿಜಿಟಲ್ ಮಿತ್ರ ಬ್ಯಾಚ್ ವತಿಯಿಂದ ಐಟಿ–ಸಿಸಿಇ ಅಭ್ಯರ್ಥಿಗಳಿಗಾಗಿ ಆಯೋಜಿಸಲಾಗಿದ್ದ ಮನರಂಜನಾ ಸ್ಪರ್ಧೆಗಳ ವಿಜೇತರಿಗೆ ಗಣ್ಯರು ಬಹುಮಾನ ವಿತರಿಸಿ ಅಭಿನಂದಿಸಿದರು.

ಸಮಾರಂಭದಲ್ಲಿ ಸ್ವಾತಿ, ಪದ್ಮಾ, ಗಂಗಾ, ಸರಸ್ವತಿ ಹಾಗೂ ನಾಗರಾಜ್ ಅವರು ತಮ್ಮ ಅನುಭವಗಳನ್ನು ಹಂಚಿಕೊಂಡು, ಡಾನ್ ಬೋಸ್ಕೋ ಡಿಬಿ ಟೆಕ್‌ನಲ್ಲಿ ಪಡೆದ ತರಬೇತಿಯಿಂದ ತಮ್ಮ ವ್ಯಕ್ತಿತ್ವ, ಸಂವಹನ ಕೌಶಲ್ಯ, ಆತ್ಮವಿಶ್ವಾಸ ಹಾಗೂ ಉದ್ಯೋಗ ಕೌಶಲ್ಯಗಳು ವೃದ್ಧಿಯಾಗಿದ್ದು, ಪ್ರತಿಷ್ಠಿತ ಸಂಸ್ಥೆಗಳಲ್ಲಿ ಉದ್ಯೋಗ ಪಡೆಯಲು ಸಾಧ್ಯವಾಗಿದೆ ಎಂದು ತಿಳಿಸಿದರು. ಕೇಂದ್ರದ ಮುಖ್ಯಸ್ಥರು ಹಾಗೂ ಸಿಬ್ಬಂದಿಯ ಮಾರ್ಗದರ್ಶನಕ್ಕೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು.

ಈ ಬೀಳ್ಕೊಡುಗೆ ಸಮಾರಂಭದಲ್ಲಿ ಡಿಜಿಟಲ್ ಮಿತ್ರ ಬ್ಯಾಚ್‌ನ ಅಭ್ಯರ್ಥಿಗಳು, ಐಟಿ ಕಸ್ಟಮರ್ ಕೇರ್ ಎಕ್ಸಿಕ್ಯೂಟಿವ್ (ಐಟಿ–ಸಿಸಿಇ) ಬ್ಯಾಚ್‌ನ ಹಾಲಿ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳು, ಬೀಳ್ಕೊಡುಗೆ ಪಡೆಯುತ್ತಿರುವ 55ನೇ ಬ್ಯಾಚ್‌ನ ಅಭ್ಯರ್ಥಿಗಳು, ಡಿಬಿ ಟೆಕ್ ಸಿಬ್ಬಂದಿ ಹಾಗೂ ವಿವಿಧ ಬ್ಯಾಚ್‌ಗಳ ತರಬೇತಿದಾರರು ಉತ್ಸಾಹದಿಂದ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಾಕ್ಷಿಯಾದರು.

ಕೊನೆಯಲ್ಲಿ ವಂದನಾರ್ಪಣೆ ಸಲ್ಲಿಸಿ, ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದ ಎಲ್ಲಾ ಗಣ್ಯರು, ಸಿಬ್ಬಂದಿ ಹಾಗೂ ಅಭ್ಯರ್ಥಿಗಳಿಗೆ ಕೃತಜ್ಞತೆ ಸಲ್ಲಿಸಲಾಯಿತು. ಯುವಕರಲ್ಲಿ ಆತ್ಮವಿಶ್ವಾಸ, ನೈತಿಕತೆ, ಉದ್ಯೋಗ ಕೌಶಲ್ಯ ಹಾಗೂ ಜೀವನ ಮೌಲ್ಯಗಳನ್ನು ಬೆಳೆಸಿದ ಈ ಬೀಳ್ಕೊಡುಗೆ ಸಮಾರಂಭವು ಅರ್ಥಪೂರ್ಣ, ಪ್ರೇರಣಾದಾಯಕ ಹಾಗೂ ಸ್ಮರಣೀಯ ಕಾರ್ಯಕ್ರಮವಾಗಿ ಮೂಡಿಬಂತು.

## ಆರೋಗ್ಯ ರಕ್ಷಣೆಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ವಡಗೇರಾ ತಾಲೂಕಿನ ನಾಯ್ಕಲ್ ಗ್ರಾಮದಲ್ಲಿ ಸ್ಮೈಲ್ ಫೌಂಡೇಶನ್ ಹಾಗೂ ಇಂಡೋಸ್ಟಾರ್ ಕ್ಯಾಪಿಟಲ್ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಂಟಿಯಾಗಿ ಉಚಿತ ಸಮುದಾಯ ಆರೋಗ್ಯ ಶಿಬಿರ ಕಾರ್ಯಕ್ರಮವನ್ನು ಆಯೋಜಿಸಕಾಯಿತು.ಈ ಕಾರ್ಯಕ್ರಮದ ಮುಖ್ಯ ಉದ್ದೇಶವೆಂದರೆ ತಡೆಗಟ್ಟುವ ಆರೋಗ್ಯ ರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವುದು,ಜೀವನಶೈಲಿಯ ಬದಲಾವಣೆಗಳು,ಆರಂಭಿಕ ಪತ್ತೆ ಮತ್ತು ನಿಯಮಿತ ತಪಾಸಣೆಗಳ ಮೂಲಕ ಉತ್ತಮ ಆರೋಗ್ಯವನ್ನು ಹೇಗೆ ಕಾಪಾಡಿಕೊಳ್ಳುವುದು ಎಂಬುದರ ಕುರಿತು ಭಾಗವಹಿಸುವವರಿಗೆ ಶಿಕ್ಷಣ ನೀಡುವುದು.

ಈ ಕಾರ್ಯಕ್ರಮದಲ್ಲಿ ಶ್ರೀ ಅಬ್ದುಲ್ ಶಫೀ ಅಹ್ಮದ್ ಯೋಜನಾ ಸಂಯೋಜಕರು ಮಾತನಾಡಿ ಜನರು ಇಂತಹ ಉಚಿತ ಆರೋಗ್ಯ ಶಿಬಿರಗಳಲ್ಲಿ ಏಕೆ ಭಾಗವಹಿಸಬೇಕು ಎಂಬುದರ ಕುರಿತು ಮಾತನಾಡಿದರು ಮತ್ತು ಇದು ವ್ಯಕ್ತಿಗೆ ಆರಂಭಿಕ ಪತ್ತೆ, ತಡೆಗಟ್ಟುವ ಆರೈಕೆ ಮತ್ತು ಸಮಯಕ್ಕೆ ಸರಿಯಾಗಿ ಅವರ ಆರೋಗ್ಯದ ಬಗ್ಗೆ ಹೆಚ್ಚು ಅರಿವು ಮೂಡಿಸಲು ಸಹಾಯಕವಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಲಸಿಕಾ ಸಂಯೋಜಕರು ಹಾಗೂ ಕರ್ನಾಟಕ ರಾಜ್ಯ ಪ್ರೊಫೆಷನಲ್ ಸೋಷಿಯಲ್ ವರ್ಕರ್ಸ್ ವೆಲ್ಫೇರ್ ಅಸೋಸಿಯೇಷನ್ ಜಿಲ್ಲಾಧ್ಯಕ್ಷರಾದ ಶ್ರೀ ಮೌನೇಶ ಪಾಟೀಲ್ ಬೆಳಗೇರಾ ರವರು ಮಾತನಾಡಿ ಈ ಒಂದು ಸ್ಮೈಲ್ ಪೌಂಡೇಶನ್ ನ ಹಲವಾರು ಸಾಮಾಜಿಕ ಕಾರ್ಯಗಳಲ್ಲಿ ಈ ಆರೋಗ್ಯ ಶಿಬಿರವು ಒಂದು ಕೂಡ ಭಾಗವಾಗಿದೆ.ಜನರ ಆರೋಗ್ಯ ಕಾಪಾಡುವ ದೃಷ್ಟಿಯಿಂದ ದಿನಾಲು ಒಂದೊಂದು ಹಳ್ಳಿಗೆ ತಮ್ಮ ಮೊಬೈಲ್ ಟೀಮ್ ಜೊತೆಗೆ ಹೋಗಿ ಉಚಿತವಾಗಿ ಆರೋಗ್ಯ ತಪಾಸಣೆ ಮಾಡಿ ಔಷಧಗಳು ನೀಡುತ್ತಾ ಬಂದಿದೆ,ಅದೇ ರೀತಿ ಇಂದು ನಿಮ್ಮ ಗ್ರಾಮದಲ್ಲಿ ದೊಡ್ಡ ಮಟ್ಟದಲ್ಲಿ ಇಂಡೋಸ್ಟಾರ್ ಕ್ಯಾಪಿಟಲ್ ನ ಬೆಂಬಲದೊಂದಿಗೆ ಉಚಿತವಾಗಿ ಸಮುದಾಯ ಆರೋಗ್ಯ ಶಿಬಿರವನ್ನು ಹಮ್ಮಿ ಕೊಂಡಿರುವುದು ಸಂತೋಷದ ವಿಷಯ,ಈ ಒಂದು ಶಿಬಿರದ ಉಪಯೋಗ ಪ್ರತಿಯೊಬ್ಬ ಜನರಿಗೂ ತಲುಪಬೇಕು,ಈ ಒಂದು ಪೌಂಡೇಶನ್ ದಿಂದ ಜನರ ಆರೋಗ್ಯ ಕಾಪಾಡುವುದರ ಜೊತೆಗೆ ಆರೋಗ್ಯವನ್ನು ಹೇಗೆ ಕಾಪಾಡಿಕೊಳ್ಳಬೇಕು ಎಂಬುದರ ಬಗ್ಗೆ ಶಿಕ್ಷಣ ನೀಡುವುದರಿಂದ ಜನರಿಗೆ ಮತ್ತು ಆರೋಗ್ಯ ಇಲಾಖೆಗೆ ಬೆಂಬಲ ನೀಡುತ್ತಿದೆ.ಗ್ರಾಮಸ್ಥರು ಮತ್ತು ಸುತ್ತ ಮುತ್ತಲಿನ ಹಳ್ಳಿಯ ಜನರು ಈ ಒಂದು ಶಿಬಿರದಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಯಿಮ್ಸ್ ಆಸ್ಪತ್ರೆಯ ಜನರಲ್ ಮೆಡಿಸಿನ್ ತಜ್ಞ ವೈದ್ಯ ಶರಣಬಸಪ್ಪ ಬಿ ರವರು ವಿವಿಧ ರೀತಿಯ ಕಾಯಿಲೆಗಳ ತಪಾಸಣೆ ಮಾಡಿದರು

ಯಾದಗಿರಿಯ ಪಾಟೀಲ್ ಕಣ್ಣಿನ ಆಸ್ಪತ್ರೆಯ ಕಣ್ಣಿನ ಶಸ್ತ್ರಚಿಕಿತ್ಸಕ ವೈದ್ಯೆ ವಿದ್ಯಾ ಜಿ ನಾಡಗೌಡರ್ ಕಾರ್ಯಕ್ರಮದಲ್ಲಿ ಭಾಗವಹಿಸಿ ರೋಗಿಗಳ ಕಣ್ಣಿನ ಸಮಸ್ಯೆಗೆ ಸಮಾಲೋಚನೆ ನಡೆಸಿದರು.

ಯಿಮ್ಸ್ ಆಸ್ಪತ್ರೆಯ ಭೌತಚಿಕಿತ್ಸಕ ಡಾ.ಮೊಹಮ್ಮದ್ ಮುಬೀನ್ ಆಶರ್ ಕಾರ್ಯಕ್ರಮದಲ್ಲಿ ಭಾಗವಹಿಸಿ ರೋಗಿಗಳ ಭೌತಚಿಕಿತ್ಸಕ ಸಮಸ್ಯೆಗೆ ಸಮಾಲೋಚನೆ ನಡೆಸಿದರು.

ಈ ಶಿಬಿರದಲ್ಲಿ ಸಮುದಾಯಕ್ಕೆ ಉಚಿತ ಕಣ್ಣಿನ ತಪಾಸಣೆ, ಸಾಮಾನ್ಯ ಔಷಧಗಳು, ಕಣ್ಣಿನ ತಜ್ಞರು ಮತ್ತು ಭೌತಚಿಕಿತ್ಸಕರ ಸೇವೆಗಳು ಲಭ್ಯವಿದ್ದವು ಮತ್ತು ರೋಗಿಗಳಿಗೆ ಉಚಿತವಾಗಿ ಔಷಧಿ ಕಿಟ್, ಪ್ರಥಮ ಚಿಕಿತ್ಸಾ ಪೆಟ್ಟಿಗೆ ಮತ್ತು ಕನ್ನಡಕಗಳನ್ನು ವಿತರಿಸಿದರು ಈ ಶಿಬಿರದಲ್ಲಿ 260 ಕ್ಕೂ ಹೆಚ್ಚು ಜನರು ಭಾಗವಹಿಸಿ ಸದುಪಯೋಗ ಪಡೆದುಕೊಂಡರು.

ಈ ಸಂದರ್ಭದಲ್ಲಿ ರಮೇಶ್ ಎಂ ಹೊಸಳ್ಳಿ, ಕುಮಾರಿ ರಾಜಶ್ರೀ, ಸಿದ್ದುಬಸಯ್ಯ, ಮೊಯಿನುದ್ದೀನ್ ಸೌದಾಗರ್ ಮತ್ತು ವೆಂಕಟ್ ರೆಡ್ಡಿ ಮತ್ತು ಗ್ರಾಮದ ಜನರು ಭಾಗವಹಿಸಿದ್ದರು.

# ಪ್ರತಿಯೊಬ್ಬರು ಯೋಜನೆಯ ಸದುಪಯೋಗ ಪಡೆದುಕೊಳ್ಳಿ: ಲಿಂಗರಾಜ ಪಾಟೀಲ್



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ವಿಕಸಿತ್ ಭಾರತ ಗ್ಯಾರಂಟಿ ಫಾರ್ ರೋಜಗಾರ ಆಯಿಂಡ್ ಆಜೀವಿಕ ಮಿಷನ್ ಗ್ರಾಮೀಣ ಯೋಜನೆ ಅಡಿಯಲ್ಲಿ ಕೂಲಿ ಕಾರ್ಮಿಕರು ಕೂಲಿ ಕೆಲಸ ಪಡೆದು ಜೀವನ ಸಾಗಿಸಬೇಕೆಂದು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಲಿಂಗರಾಜ ಪಾಟೀಲ್ ಹೇಳಿದರು.

ತಾಲೂಕಿನ ಚಾಂಗಲೇರಾ ಗ್ರಾಮ ಪಂಚಾಯತ್ ಆವರಣದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮತ್ತು 15ನೇ ಹಣಕಾಸು ಆಯೋಗದ ಸಾಮಾಜಿಕ ಲೆಕ್ಕ ಪರಿಶೋಧನೆ ಗ್ರಾಮ ಸಭೆಯಲ್ಲಿ ಮಾತನಾಡುತ್ತ ವಿಬಿಜಿ ರಾಮಜೀ ಯೋಜನೆ ಅಡಿಯಲ್ಲಿ ಪ್ರತಿಯೊಂದು ಕುಟುಂಬಕ್ಕೆ ವರ್ಷದಲ್ಲಿ 125 ಮಾನವ ದಿನಗಳ ಕೆಲಸ ನೀಡಲಾಗುತ್ತಿದೆ. ಪ್ರತಿಯೊಬ್ಬ ಕೂಲಿ ಕಾರ್ಮಿಕರಿಗೆ ಪ್ರತಿ ದಿನಕ್ಕೆ 382 ರೂ. ಕೂಲಿ ಮೊತ್ತ ನೀಡಲಾಗುತ್ತಿದ್ದು, ಪ್ರತಿಯೊಬ್ಬರು ಯೋಜನೆಯ ಸದೂಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮ ವ್ಯವಸ್ಥಾಪಕ ರಾಹುಲ್ ಕೈವಾರೆ ಲೆಕ್ಕ ಪರಿಶೋಧನೆ ಪ್ರಕ್ರಿಯೆ ಕುರಿತು ಸಮಗ್ರವಾಗಿ ವಿಷಯವನ್ನು ಮಂಡಿಸಿದರು. ಈ ಸಂದರ್ಭದಲ್ಲಿ ಅಭಿವೃದ್ಧಿ ಅಧಿಕಾರಿ ಸುಶಾಂತಕುಮಾರ, ತಾಂತ್ರಿಕ ಸಂಯೋಜಕ ಸುಧಾಕಾರ ಪಾಟೀಲ್, ಮಾಹಿತಿ ಶಿಕ್ಷಣ ಸಂವಹನ ಸಂಯೋಜಕ ವಿಶ್ವನಾಥ, ತಾಂತ್ರಿಕ ಸಹಾಯಕ ಮೈಬೂಬಸಾಬ್, ಕಾರ್ಯದರ್ಶಿ ಶ್ಯಾಮುವೆಲ್, ಚಿತ್ರಶೇಖರ, ಜಾಕೀರ ಹುಸೇನ್, ಗಣಪತಿ ಸೇರಿದಂತೆ ಕೂಲಿ ಕಾರ್ಮಿಕರು ಉಪಸ್ಥಿತರಿದ್ದರು.

# ಸಂಸ್ಕಾರವೇ ಬದುಕಿನ ಬೆಳಕು: ಮಹಾದೇವ ಶ್ರೀ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮನುಷ್ಯನಿಗೆ ಸಂಪತ್ತು ಇಲ್ಲದಿದ್ದರೂ ನಡೆ-ಯುತ್ತದೆ, ಆದರೆ ಸಂಸ್ಕಾರ ಇಲ್ಲದಿದ್ದರೆ ಬದುಕೇ ಬರಡು" ಎಂದು ಕುಕನೂರು ಬೇಟಗೇರಿಯ ಪೂಜ್ಯ ಡಾ. ಮಹಾದೇವ ಮಹಾಸ್ವಾಮಿಗಳು ಹೇಳಿದರು.

ಬೇಟಗೇರಿ ಗ್ರಾಮದ ಮುಂಡರಗಿ ಅನ್ನದಾನೀಶ್ವರ ಶಾಖಾಮಠದಲ್ಲಿ ಜರುಗಿದ 13ನೇ ಮಾಸಿಕ ಶಿವಾನುಭವ ಕಾರ್ಯಕ್ರಮದಲ್ಲಿ ಅವರು ಆಶೀರ್ವಚನ ನೀಡುತ್ತಾ ಬಸವಣ್ಣನವರು 'ದಯವಿಲ್ಲದ ಧರ್ಮವು ಯಾವುದಯ್ಯಾ' ಎಂದು ಪ್ರಶ್ನಿಸಿದರು. ದಯೆ, ಕರುಣೆ, ತ್ಯಾಗ, ಸಹನೆ ಇವೆಲ್ಲವೂ ಸಂಸ್ಕಾರದ ಮುಖಗಳು. ಶಾಲೆಯಲ್ಲಿ ಅಂಕ ಗಳಿಸುವುದನ್ನು ಮಾತ್ರ ಕಲಿತರೆ ಸಾಲದು. ಅಕ್ಕ-ಪಕ್ಕದವರ ಕಷ್ಟಕ್ಕೆ ಸ್ಪಂದಿಸುವ ಗುಣ ಬೆಳೆಸಿಕೊಳ್ಳಬೇಕು. ಸಂಸ್ಕಾರವಿಲ್ಲದ ವಿದ್ಯೆ ಎಂದರೆ ಕತ್ತಿ ಹಿಡಿದ ಮಂಗನಂತೆ" ಎಂದು ಮಾರ್ಮಿಕವಾಗಿ ನುಡಿದರು.

ಮೈನಹಳ್ಳಿಯ ಪೂಜ್ಯ ಸಿದ್ದೇಶ್ವರ ಮಹಾಸ್ವಾಮಿಗಳು ಮಾತನಾಡಿ, "ಸಂಸ್ಕಾರವೆಂದರೆ ಕೇವಲ ದೊಡ್ಡವರಿಗೆ ನಮಸ್ಕಾರ ಮಾಡುವುದಲ್ಲ. ಮಾತಿನಲ್ಲಿ ವಿನಯ, ನಡೆಯಲ್ಲಿ ನೀತಿ, ಮನದಲ್ಲಿ ಮಾನವೀಯತೆ ಇರುವುದೇ ನಿಜವಾದ ಸಂಸ್ಕಾರ. ಇಂದು ಮೊಬೈಲ್ ಸಂಸ್ಕೃತಿಯಲ್ಲಿ ಬೆಳೆಯುತ್ತಿರುವ ಮಕ್ಕಳಿಗೆ ಮನೆಯೇ ಮೊದಲ ಪಾಠಶಾಲೆಯಾಗಬೇಕು. ಅಪ್ಪ-ಅಮ್ಮ ದಿನಾ 10 ನಿಮಿಷ ಮಕ್ಕಳ ಜೊತೆ ಕುಳಿತು ನೀತಿ ಕಥೆ, ವಚನ ಹೇಳಿಕೊಟ್ಟರೆ ಸಾಕು, ಸಂಸ್ಕಾರದ ಬೀಜ ಬಿತ್ತಿದಂತೆ" ಎಂದರು.

ಗುರುಬಸಯ್ಯ ಬೃಹನಮಠ ಅವರು, "ಹಿಂದಿನ ಕಾಲದಲ್ಲಿ ಅಜ್ಜ-ಅಜ್ಜಿಯ ಕಥೆಗಳೇ ಸಂಸ್ಕಾರದ ಗಣಿ ಆಗಿದ್ದವು. ಈಗ ಟಿವಿ, ಸೋಶಿಯಲ್ ಮೀಡಿಯಾ ಮಕ್ಕಳನ್ನು ಆವರಿಸಿದೆ. ಹೀಗಾಗಿ ಮಠ-ಮಾನ್ಯಗಳು ಸಂಸ್ಕಾರದ ಜವಾಬ್ದಾರಿ ಹೊರಬೇಕಾಗಿದೆ. ಪ್ರತಿ ಮನೆಯಲ್ಲಿ ವಾರಕ್ಕೊಮ್ಮೆ 'ಸಂಸ್ಕಾರದ ಒಂದು ಗಂಟೆ' ಮೀಸಲಿಡಿ. ಮಕ್ಕಳಿಗೆ ಹಿರಿಯರ ಪಾದ ಪೂಜೆ, ದೀಪ ನಮಸ್ಕಾರ, ವಚನ ಕಂಠಪಾಠ ಅಭ್ಯಾಸ ಮಾಡಿಸಿ" ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಿಂದಗಿಯ ಬಸವನಗೌಡ ದೇಸಾಯಿ, ತಳಕಲ್ ಗ್ರಾಮದ ಮಲ್ಲೇಶಪ್ಪ ಸಿಂಗಾಪೂರ, ಪ್ರಭು ಶಿಂಪರ, ಮುತ್ತಯ್ಯ ಹಿರೇಮಠ, ಶಂಕ್ರಪ್ಪ ಬಡಿಗೇರ, ಬಳಗೇರಿ ಪ್ರಭು, ಬಸವರಡ್ಡಿ, ಮುತ್ತಣ್ಣ ಮತ್ತು ಇತರರು ಇದ್ದರು. ದಾಸೋಹವನ್ನ ಬೇಟಗೇರಿ ಗ್ರಾಮದ ಬಳಗೇರಿ ಬಂಧುಗಳು ಮಾಡಿಸಿದ್ದರು.

# 22 ವರ್ಷಗಳಿಂದ ಲಾಂಡ್ರಿ (ಇಸ್ತ್ರಿ) ವೃತ್ತಿಯಲ್ಲೇ ಜೀವನ ಸರ್ಕಾರಿ ಸೌಲಭ್ಯಕ್ಕಾಗಿ ಹುಲಗಪ್ಪ ಮಡಿವಾಳ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ನಗರದ 12ನೇ ವಾರ್ಡ್‌ನ ಸಜ್ಜಿಹೊಲ ಕೊಟಗಾರಗೇರ ಸರ್ಕಾರಿ ಶಾಲೆ ಸಮೀಪ ಕಳೆದ 22 ವರ್ಷಗಳಿಂದ ಸಣ್ಣ ಡಬ್ಬಿ ಅಂಗಡಿಯಲ್ಲಿ ಲ್ಯಾಂಡ್ರಿ (ಇಸ್ತ್ರಿ) ವೃತ್ತಿ ನಡೆಸುತ್ತಾ ಜೀವನೋಪಾಯ ಮಾಡುತ್ತಿರುವ ಹುಲಗಪ್ಪ ಮಡಿವಾಳ ಅವರಿಗೆ ಇದುವರೆಗೂ ಸರ್ಕಾರದ ಯಾವುದೇ ಯೋಜನೆಯ ಸೌಲಭ್ಯ ದೊರೆತಿಲ್ಲ ಎಂಬುದು ಬೇಸರದ ಸಂಗತಿಯಾಗಿದೆ.

ಕುಟುಂಬದ ಜೀವನ ನಿರ್ವಹಣೆಗೆ ದಿನನಿತ್ಯ ಸಾರ್ವಜನಿಕರ ಬಟ್ಟೆಗಳಿಗೆ ಇಸ್ತ್ರಿ ಮಾಡುವ ಮೂಲಕ ದುಡಿದು ಬದುಕು ಸಾಗಿಸುತ್ತಿರುವ ಹುಲಗಪ್ಪ ಮಡಿವಾಳ, ತಮ್ಮ ಸಾಂಪ್ರದಾಯಿಕ ವೃತ್ತಿಯನ್ನು ಪ್ರಾಮಾಣಿಕವಾಗಿ ಮುಂದುವರಿಸಿಕೊಂಡು ಬಂದಿದ್ದಾರೆ. ಆದರೂ, ಇಷ್ಟೊಂದು ವರ್ಷಗಳಿಂದ ಶ್ರಮಿಸುತ್ತಿದ್ದರೂ ಸರ್ಕಾರದಿಂದ ಯಾವುದೇ ಆರ್ಥಿಕ ನೆರವು, ವೃತ್ತಿ ಅಭಿವೃದ್ಧಿಗೆ ಅಗತ್ಯವಾದ ಉಪಕರಣಗಳು, ಸಾಲ ಸೌಲಭ್ಯ ಅಥವಾ ಇತರೆ ಕಲ್ಯಾಣ ಯೋಜನೆಗಳ ಪ್ರಯೋಜನ ದೊರೆತಿಲ್ಲ ಎಂದು ಅವರು ಅಳಲು ತೋಡಿಕೊಂಡಿದ್ದಾರೆ.

ಪ್ರಸ್ತುತ ಸಣ್ಣ ಡಬ್ಬಿ ಅಂಗಡಿಯಲ್ಲೇ ತಮ್ಮ ವೃತ್ತಿಯನ್ನು ಮುಂದುವರಿಸುತ್ತಿರುವ ಅವರು, ಸರ್ಕಾರದಿಂದ ಲ್ಯಾಂಡ್ರಿ ವೃತ್ತಿಕಾರರಿಗಾಗಿ ಇರುವ ಯಾವುದೇ ಯೋಜನೆಯ ಸೌಲಭ್ಯವನ್ನು ಒದಗಿಸಿ, ತಮ್ಮ ಜೀವನೋಪಾಯಕ್ಕೆ ನೆರವಾಗುವಂತೆ ಸಂಬಂಧಪಟ್ಟ ಇಲಾಖೆಗೆ ಮನವಿ ಮಾಡಿದ್ದಾರೆ.

ಸ್ಥಳೀಯರು ಸಹ ಇಂತಹ ಶ್ರಮಜೀವಿಗಳ ಬದುಕಿನ ಬಗ್ಗೆ ಸರ್ಕಾರ ವಿಶೇಷ ಗಮನ ಹರಿಸಬೇಕು ಎಂದು ಒತ್ತಾಯಿಸಿದ್ದು, ಹುಲಗಪ್ಪ ಮಡಿವಾಳ ಅವರಂತಹ ಸಾಂಪ್ರದಾಯಿಕ ವೃತ್ತಿಕಾರರಿಗೆ ಆರ್ಥಿಕ ನೆರವು, ಆಧುನಿಕ ಉಪಕರಣಗಳು, ಸ್ವಂತ ಅಂಗಡಿ ನಿರ್ಮಾಣಕ್ಕೆ ಸಹಾಯಧನ ಹಾಗೂ ಇತರೆ ಸರ್ಕಾರಿ ಸೌಲಭ್ಯಗಳನ್ನು ಶೀಘ್ರವಾಗಿ ಒದಗಿಸಬೇಕೆಂದು ಆಗ್ರಹಿಸಿದ್ದಾರೆ.

# ಕೆಂಪೇಗೌಡ ಬೆಂಗಳೂರು ನಿರ್ಮಾತೃ ಮಾತ್ರವಲ್ಲ ದೂರದೃಷ್ಟಿಯ ನಾಯಕ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಜು.15:ಕೆಂಪೇಗೌಡರು ಕೇವಲ ಬೆಂಗಳೂರಿನ ನಿರ್ಮಾತೃ ಮಾತ್ರವಲ್ಲ, ಉತ್ತಮ ಆಡಳಿತ, ಕೃಷಿ, ನೀರಾವರಿ ಹಾಗೂ ನಗರ ಯೋಜನೆಗೆ ಅಡಿಪಾಯ ಹಾಕಿದ ದೂರದೃಷ್ಟಿಯ ನಾಯಕ ಎಂದು ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಸಾಗರಗೌಡ ಬಣ್ಣಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಬುಧವಾರ ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ನಾಡ ಪ್ರಭು ಕೆಂಪೇಗೌಡ ಜಯಂತೋತ್ಸವ ಕಾರ್ಯಕ್ರಮದಲ್ಲಿ ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು. ಆಡಳಿತದಿಂದ ಬಂದ ತೆರಿಗೆಯನ್ನು ನಾಡು ಕಟ್ಟುವ ಮೂಲಕ ಅಭಿವೃದ್ಧಿಯನ್ನು ಸಾಧಿಸಿದವರು. ಸುಮಾರು 16ನೇ ಶತಮಾನದಲ್ಲಿ ಕೆಂಪೇಗೌಡರು ಬೆಂಗಳೂರನ್ನು ಯೋಜಿತ ನಗರವಾಗಿ ನಿರ್ಮಿಸಿ, ನಗರದ ನಾಲ್ಕು ದಿಕ್ಕುಗಳಲ್ಲಿ ಗೋಪುರಗಳನ್ನು ನಿರ್ಮಿಸಿ ನಗರದ ಗಡಿಯನ್ನು ಗುರುತಿಸಿದರು. ಕೆರೆಗಳು, ದೇವಾಲಯಗಳು, ರಸ್ತೆಗಳು ಹಾಗೂ ಮಾರುಕಟ್ಟೆಗಳ ನಿರ್ಮಾಣಕ್ಕೆ ವಿಶೇಷ ಆದ್ಯತೆ ನೀಡಿದ್ದರು. ಒಕ್ಕಲಿಗ ಸಮುದಾಯದ ಏಳಿಗೆಗೆ ಅಷ್ಟೇ ಸೀಮಿತವಾಗಿರದೇ ಸಮ ಸಮಾಜದ ಕನಸು ಕಂಡ ಧೀಮಂತ ನಾಯಕ ಕೆಂಪೇಗೌಡ. ವಿಜಯನಗರ ಸಾಮ್ರಾಜ್ಯದ ಶ್ರೀ ಕೃಷ್ಣದೇವರಾಯನ ಕಾಲದ ಆಡಳಿತದಿಂದ ಪ್ರಭಾವಿತರಾಗಿದ್ದ ಅವರ ಆದರ್ಶಗಳು ಇಂದಿಗೂ ಪ್ರಸ್ತುತ ಎಂದು ಹೇಳಿದರು.ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಮಾತನಾಡಿ, ಬೆಂಗಳೂರು ನಗರ ನಿರ್ಮಾಣಕ್ಕೆ ಭದ್ರ ಬುನಾದಿ ಹಾಕಿದ ದೂರದೃಷ್ಟಿಯ ನಾಯಕ ಕೆಂಪೇಗೌಡರು. ಅವರು ಇಂದು ಊಹೆಗೂ ಮೀರಿ ಬೆಳೆಯುತ್ತಿದೆ. ಅವರ ತತ್ವಾದರ್ಶ, ನಾಯಕತ್ವಗುಣಗಳನ್ನು ಪ್ರತಿಯೊಬ್ಬರೂ ಮೈಗೂಡಿಸಕೊಂಡು ನಾಡಿನ ಪ್ರಗತಿ ಮತ್ತು ಸಮೃದ್ಧಿಗಾಗಿ ನಾವೆಲ್ಲರೂ ಒಟ್ಟಾಗಿ ಶ್ರಮಿಸೋಣ ಎಂದರು.ಈ ವೇಳೆ ಅಪರ ಜಿಲ್ಲಾಧಿಕಾರಿ ಈ.ಬಾಲಕೃಷ್ಣ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗೇಶ ರಂಗಣ್ಣವರ, ಸಮುದಾಯದ ಮುಖಂಡರಾದ ನಾಗರಾಜ್ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

# ಬುದ್ಧ ವಿಹಾರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೌದ್ಧಧರ್ಮಾಚಾರಿಗಳಿಗೆ ಮಾಸಿಕ 6 ಸಾ.ರೂ. ಗೌರವಧನ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ



ನೋಂದಾಯಿತ ಬುದ್ಧ ವಿಹಾರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೌದ್ಧ ಧರ್ಮ ಚಾರಿಗಳಿಗೆ ಅವರ ದೈನಂದಿನ ಜೀವನ ನಿರ್ವಹಣೆಗಾಗಿ ಮಾಸಿಕ 6 ಸಾವಿರ ರೂ ಗೌರವ ಧನ ನೀಡಲು ಸರ್ಕಾರ ಆದೇಶಿಸಿರುವುದಾಗಿ ವಿಧಾನ ಪರಿಷತ್ ಸದಸ್ಯ ಕೆ ಶಿವಕುಮಾರ್ ತಿಳಿಸಿದ್ದಾರೆ.

ಅವರನ್ನು ಭೇಟಿಯಾದ ಆಪ್ತರೊಂದಿಗೆ ಸರ್ಕಾರವು ತಾವು ನೀಡಿದ ಬೇಡಿಕೆಗಳನ್ನು ಹಂತ ಹಂತವಾಗಿ ಪರಿಹರಿಸುತ್ತಿರುವ ಬಗ್ಗೆ ಮಾತನಾಡುತ್ತಾ ಈ ವಿಷಯ ಪ್ರಸ್ತಾಪಿಸಿದರು.

2026-27ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ 2025-04-102-0-05(015)" ಜೈನ್. ಬೌದ್ಧ ಮತ್ತು ಸಿಖ್ ಸಮುದಾಯದ ಅಭಿವೃದ್ಧಿ ರಾಜ್ಯವಲಯ ಯೋಜನೆಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಬರಿಸತಕ್ಕದ್ದು ಎಂದು ನೀಡಿರುವ ಸಹಮತಿರನ್ವಯ ಹೊರಡಿಸಲಾಗಿದೆ ಎಂದು ತಿಳಿಸಿದ್ದಾರೆ.ಬೌದ್ಧ ಬಿಕ್ಕುಗಳ ಜೀವನ ನಿರ್ವಹಣೆಗೆ ಮಾಸಿಕ ಗೌರವಧನ ನೀಡುವಂತೆ ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ಸರ್ಕಾರಕ್ಕೆ ಮನವಿ ಮಾಡಿದ್ದೆ ಅದರಂತೆ ನಿಕಟಪೂರ್ವ ಮುಖ್ಯಮಂತ್ರಿಯವರಾದ ಸಿದ್ದರಾಮಯ್ಯ ಅವರು 2026-27ನೇ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದರು.ಈ ಮೂಲಕ ರಾಜ್ಯ ಸರ್ಕಾರದ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರಿಗೆ ಹಾಗೂ ನಿಕಟಪೂರ್ವ ಮುಖ್ಯಮಂತ್ರಿಯವರಾದ ಸಿದ್ದರಾಮಯ್ಯ ಅವರಿಗೆ ಆನಂತ ಧನ್ಯವಾದಗಳು ಮತ್ತು ಕೃತಜ್ಞತೆಯನ್ನು ಕೆ ಶಿವಕುಮಾರ್ ಸಲ್ಲಿಸಿದ್ದಾರೆ.

# ಸರಕಾರದಿಂದ ಪ್ರತಿ ವರ್ಷ ತಾಲೂಕಿನ ಶಿಕ್ಷಣ ಇಲಾಖೆಗೆ 18 ಕೋಟಿ ರೂ ಅನುದಾನ : ಮಾನಪ್ಪ ವಜ್ಜಲ್

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ




ಜು. 15: ಶಾಲಾ ಕೊಠಡಿಗಳು,ಶೌಚಾಲಯ, ಕಾಂಪೌಂಡ್ ಸೇರಿದಂತೆ ಶಿಕ್ಷಣ ಇಲಾಖೆಯ ಇನ್ನಿತರ ಮೂಲಸೌಕರ್ಯಗಳಿಗಾಗಿ ಶಿಕ್ಷಣ ಇಲಾಖೆಗೆ ಸರಕಾರ ಕೆಕೆಆರ್ ಡಿ ಬಿಯಿಂದ ತಾಲೂಕಿಗೆ ಪ್ರತಿ ವರ್ಷ 18 ಕೋಟಿ ರೂಪಾಯಿ ನೀಡುತ್ತಿದೆ ಎಂದು ಶಾಸಕ ಮಾನಪ್ಪ ವಜ್ಜಲ್ ಹೇಳಿದರು. ಅವರು ಕೆಕೆಆರ್ ಡಿ ಬಿ ಅನುದಾನದಲ್ಲಿ ಪಟ್ಟಣದ ಸರಕಾರಿ ಶಾಸಕರ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕನ್ನಡ ಮಾಧ್ಯಮ ಹಾಗೂ ಉರ್ದು ಶಾಲೆಯಲ್ಲಿ ನೂತನವಾಗಿ ನಿರ್ಮಿಸಲಾದ ಎರಡು ಭೋಜನಾಲಯ ಕೊಠಡಿಗಳನ್ನು ಉದ್ಘಾಟಿಸಿ ಮಾತನಾಡಿದ ಅವರು ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆಗಳ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದ ಶಾಲೆಗಳ ಮೂಲಭೂತ ಸೌಕರ್ಯಗಳ ಹಾಗೂ ಅಲ್ಲಿಯ ಸಮಸ್ಯೆಗಳ ಕುರಿತು ತಮ್ಮ ಗಮನಕ್ಕೆ ತಂದರೆ ಖಂಡಿತವಾಗಿಯೂ ಅವರ ವರದಿಯಂತೆ ಸಮಸ್ಯೆಗಳನ್ನು ಪರಿಹರಿಸುವ ಪ್ರಯತ್ನ ಮಾಡುವೆ. ಸರಕಾರಿ ಶಾಸಕರ ಮಾದರಿಯ ಈ ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಅತ್ಯಧಿಕವಾಗಿದ್ದು ಮಕ್ಕಳು ಕುಳಿತುಕೊಂಡು ಊಟ ಮಾಡಲು ಈ ಭೋಜನಾಲಯ ಚಿಕ್ಕದಾಗುತ್ತಿದ್ದು ಮುಂಬರುವ ದಿನಗಳಲ್ಲಿ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಸುಮಾರು 50 ಲಕ್ಷ ರೂಪಾಯಿಗಳ ಬೃಹತ್ತಾದ ಸ್ಥಳದಲ್ಲಿ ಭೋಜನಾಲಯವನ್ನು ನಿರ್ಮಾಣ ಮಾಡಲು ವಿಶ್ವ ಪ್ರಯತ್ನ ಮಾಡುತ್ತೇನೆ. ಹಂತ ಹಂತವಾಗಿ ಶಾಲೆಯ ಸಮಸ್ಯೆಗಳ ಪರಿಹಾರಕ್ಕೆ ಹಾಗೂ ತಾಲೂಕಿನಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದ ಮತ್ತು ಅವಶ್ಯವಿರುವ ಕಾಮಗಾರಿಗಳ ಪಟ್ಟಿಮಾಡಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮಗೆ ಸಲ್ಲಿಸಿದರೆ ಕ್ರಿಯಾ ಯೋಜನೆ ಮೂಲಕ ಸರಕಾರಕ್ಕೆ ವರದಿ ಸಲ್ಲಿಸಲಾಗುವುದು. ಯಾವುದೇ ರೀತಿಯಿಂದ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಕಾರಣಕ್ಕಾಗಿ ಸರಕಾರ ಶಿಕ್ಷಣ ಇಲಾಖೆಗೆಕೋಟ್ಯಾಂತರ ರೂಪಾಯಿ ಖರ್ಚು ಮಾಡುತ್ತ ವಿವಿಧ ಯೋಜನೆಗಳನ್ನು ಜಾರಿಗೆ ತರಲಾಗಿದ್ದು ಶಿಕ್ಷಕರೂ ಸಹ ಸರಕಾರಿ ಶಾಲೆಗಳ ಕೀರ್ತಿ ತರುವಲ್ಲಿ ಪ್ರಮಾಣಿಕವಾಗಿ ಪ್ರಯತ್ನಿಸಬೇಕಾಗಿದೆ ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಸುಜಾತಾ ಹೂನೂರ್, ಶಿಕ್ಷಣ ಸಂಯೋಜಕ ಹನುಮಂತಪ್ಪ ಕ್ವಾರಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಗುರು ಸಂಗಯ್ಯ ಗಣಾಚಾರಿ, ಶಾಸಕರ ಶಾಲೆಯ ಮುಖ್ಯ ಗುರು ಸುಭಾಷ್, ಮೌನೇಶ, ಉರ್ದು ಶಾಲೆಯ ಮುಖ್ಯ ಶಿಕ್ಷಕಿ ಆಶಾಬೇಗಂ, ಎಸ್ ಡಿ ಎಂ ಸಿ ಅಧ್ಯಕ್ಷ ರಮೇಶ್ ಸೇರಿದಂತೆ ಇತರರಿದ್ದರು.

# ಬಸ್‌ಗಳ ಕೊರತೆಯಿಂದ ಶಾಲಾ ಕಾಲೇಜುಗಳಿಗೆ ತೆರಳಲು ತೊಂದರೆ ಈಚನಾಳ್ ಕ್ರಾಸ್ ರಾಯಣ್ಣ ವೃತ್ತದಲ್ಲಿ ಸಾರಿಗೆ ಬಸ್ ತಡೆದು ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ಜು. 15: ತಾಲೂಕಿನ ಈಚನಾಳ, ಮಾರ್ಗವಾಗಿ ತೆರಳುವ ಈಚನಾಳ ಯರಗುಂಟಿ, ಗೊರೆಬಾಳ, ಶೀಲಹಳ್ಳಿ ಹಾಲಬಾವಿ, ಹಿರೇ ಉಪ್ಪೇರಿ ಗ್ರಾಮಗಳಿಗೆ ಹೋಗುವ ಸಾರಿಗೆ ಬಸ್ಸುಗಳ ಕೊರತೆಯಿಂದಾಗಿ ಶಾಲಾ ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ದಿನನಿತ್ಯ ತೊಂದರೆಯಾಗುತ್ತಿದ್ದು ಕೂಡಲೇ ಈ ಮಾರ್ಗಕ್ಕೆ ಹೆಚ್ಚುವರಿಯಾಗಿ ಬಸ್ ಬಿಡುವಂತೆ ಆಗ್ರಹಿಸಿ ನೂರಾರು ವಿದ್ಯಾರ್ಥಿಗಳು ಈಚನಾಳ್ ಕ್ರಾಸ್ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಸಾರಿಗೆ ಬಸ್ ಗಳನ್ನು ತಡೆದು ಪ್ರತಿಭಟನೆ ನಡೆಸಿದರು. ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ರಸ್ತೆಗೆ ಕುಳಿತು ಪ್ರತಿಭಟಿಸಿದ ವಿದ್ಯಾರ್ಥಿಗಳು ಸಾರಿಗೆ ಘಟಕ ವ್ಯವಸ್ಥಾಪಕರು ಸ್ಥಳಕ್ಕಾಗಮಿಸಿ ತಮ್ಮ ಸಮಸ್ಯೆ ಪರಿಹರಿಸುವಂತೆ ಪಟ್ಟು ಹಿಡಿದು ಕುಳಿತರು.

ನಂತರ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಸಾರಿಗೆ ವಿಭಾಗಿಯ ವ್ಯವಸ್ಥಾಪಕರಾದ ಪಿ ಲಕ್ಷ್ಮಣ ಅವರು ಪ್ರತಿಭಟನಾ ನಿರತ ವಿದ್ಯಾರ್ಥಿಗಳೊಂದಿಗೆ ಹಾಗೂ ವಿವಿಧ ಗ್ರಾಮಸ್ಥರೊಂದಿಗೆ ಮಾತನಾಡಿ ಈಗಾಗಲೇ ಈ ಮಾರ್ಗವಾಗಿ ಶಾಲಾ ಸಮಯಕ್ಕೆ ಸರಿಯಾದ ರೀತಿಯಲ್ಲಿ ಬಸ್ಸುಗಳು ಬಿಡಲಾಗುತ್ತಿದ್ದು ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚು ಇರುವುದರಿಂದ ತೊಂದರೆಯಾಗಿದ್ದು ಮುಂದಿನ ದಿನಗಳಲ್ಲಿ ಹೆಚ್ಚುವರಿಯಾಗಿ ಈ ಮಾರ್ಗದ ಮೂಲಕ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಬೆಳಗಿನ ಜಾವ ಹಾಗೂ ಸಾಯಂಕಾಲ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಬಸ್ ಬಿಡುವ ಭರವಸೆ ನೀಡಿದ ಅವರು ಸ್ಥಳದಲ್ಲಿ ಪ್ರತಿಭಟನೆಗೆ ಮುಂದಾಗಿದ್ದ ವಿದ್ಯಾರ್ಥಿಗಳನ್ನು ಸಾರಿಗೆ ಘಟಕದಿಂದ ನಾರಾಯಣಪುರ ಮಾರ್ಗವಾಗಿ ತೆರಳುವ ಹೆಚ್ಚುವರಿ ಬಸ್ ಗಳ ಮೂಲಕ ವಿದ್ಯಾರ್ಥಿಗಳನ್ನು ಕಳಿಸಿಕೊಟ್ಟ ನಂತರ ವಿದ್ಯಾರ್ಥಿಗಳು ಪ್ರತಿಭಟನೆ ಹಿಂಪಡೆದರು.

# ಶಾಸಕರ ಮಾ. ಹಿ.ಪ್ರಾಥಮಿಕ ಶಾಲೆಗೆ ಮೂಲಭೂತ ಸೌಲಭ್ಯಗಳಿಗೆ ಅನುದಾನ ನೀಡಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ಜು.15: ಪಟ್ಟಣದಲ್ಲಿಯ ಶಾಸಕರ ಸರಕಾರಿ ಮಾದರಿಯ ಕನ್ನಡ & ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಗೆ ಶೈಕ್ಷಣಿಕವಾಗಿ ಅವಶ್ಯಕತೆ ಇರುವ ಮೂಲಭೂತ ಸೌಕರ್ಯಗಳಿಗೆ ಅನುದಾನ ಒದಗಿಸುವಂತೆ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಪದಾಧಿಕಾರಿಗಳು ಹಾಗೂ ಮುಖ್ಯ ಗುರುಗಳು ಶಾಸಕ ಮಾನಪ್ಪ ವಜ್ಜಲ್ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು. ಸ್ಥಳೀಯ ಶಾಸಕರ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಎಲ್ ಕೆ ಜಿ ಯಿಂದ 8 ನೇ ತರಗತಿ ವರೆಗೆ ಪ್ರಸಕ್ತ 2026-27 ಶೈಕ್ಷಣಿಕ ಸಾಲಿನಲ್ಲಿ 600 ರಿಂದ 720 ಮಕ್ಕಳು ವ್ಯಾಸಂಗಕ್ಕೆ ದಾಖಲಾಗಿದ್ದು ಸದರಿ ಶಾಲಾ ಮಕ್ಕಳ ಗುಣಮಟ್ಟದ ಕಲಿಕೆ ಶಾಲೆಗೆ ಅತಿ ಅವಶ್ಯವಾಗಿರುವ ಮೂಲಭೂತ ಸೌಲಭ್ಯಗಳ ಅವಶ್ಯಕತೆ ಇರುವುದರಿಂದ ಸದರಿ ಮೂಲಭೂತ ಸೌಲಭ್ಯಗಳಿಗೆ ಅನುದಾನ ನೀಡಬೇಕೆಂದು ಅವರು ಆಗ್ರಹಿಸಿದರು.ಶಾಲೆಗೆ ಅವಶ್ಯವಾಗಿ ಬೇಕಾಗಿರುವ ಮೂಲಭೂತ ಸೌಲಭ್ಯಗಳಾದ

ಶಾಲಾ ಆಸ್ತಿ ರಕ್ಷಣೆಗಾಗಿ ಶಾಲಾ ಮುಂಭಾಗದಲ್ಲಿ 100 ರಿಂದ 200 ಮೀಟರ್ ಕಂಪೌಂಡ್ ನೀರ್ಮಾಣ ಮಾಡವುದು. ಮಕ್ಕಳ ಸಂಖ್ಯೆ ಹೆಚ್ಚಾಗಿರುವುದರಿಂದ ಶೀಥಿಲಗೊಂಡ ಶೌಚಾಲಯ ನೆಲಸಮಗೊಳಿಸಿ ಗಂಡು ಮತ್ತು ಹೆಣ್ಣು ಮಕ್ಕಳಿಗಾಗಿ 2 ಪ್ರತ್ಯೇಕ ಹೈಟೆಕ ಶೌಚಾಲಯ ನಿರ್ಮಾಣ ಮಾಡಬೇಕು.ಆಂಗ್ಲ ಮಾಧ್ಯಮ ತರಗತಿಗಳಿಗೆ ಇನ್ನೂ 02 ಹೆಚ್ಚುವರಿ ತರಗತಿ ಕೊಠಡಿಗಳನ್ನು ನಿರ್ಮಾಣ ಮಾಡುವದು. ಶಾಲಾ ಮಕ್ಕಳ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಉತ್ತಮ ಸುಂದರವಾದ ರಂಗಮಂದಿರ ನಿಮಾಣ ಮಾಡಬೇಕು. 2 ರಿಂದ 3 ತರಗತಿ ಕೋಣೆಗಳ ಮೇಲಭಾವಣಿ ದುರಸ್ತೀಯಾ ಅವಶ್ಯಕತೆ ಇದ್ದು ತಕ್ಷಣ ಮೇಲ್ಚಾವಣಿ ದುರಸ್ತಿಗೊಳಿಸುವಂತೆ ಅವರು ಮನವಿ ಮಾಡಿಕೊಂಡರು.ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷ ರಮೇಶ್, ಮುಖ್ಯ ಗುರು ಸುಭಾಷ್, ಸದಸ್ಯ ಬಾಬು ನಾಯಕ್ ಸೇರಿದಂತೆ ಉಪಸ್ಥಿತರಿದ್ದರು.

# ಷಣ್ಮುಖ ಜನ್ಮದಿನದ ಅಂಗವಾಗಿ 600 ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಸ್ಥಾಪಕ ಅಧ್ಯಕ್ಷ ಹಾಗೂ ಶ್ರೀಧರಗಡ್ಡ ಚಿನ್ನದ ಅಂಗಡಿ ಮಾಲೀಕ ಷಣ್ಮುಖ ತಮ್ಮ 43ನೇ ಜನ್ಮದಿನವನ್ನು ಬಳ್ಳಾರಿ ತಾಲೂಕಿನ ಕಪ್ಪಗಲ್ಲು ಸರ್ಕಾರಿ ಪ್ರೌಢಶಾಲೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಿದರು. ಈ ಸಂದರ್ಭದಲ್ಲಿ ಶಾಲೆಯ 600 ವಿದ್ಯಾರ್ಥಿಗಳಿಗೆ 600ಕ್ಕೂ ಹೆಚ್ಚು ಶಾಲಾ ಬ್ಯಾಗ್‌ಗಳನ್ನು ಉಚಿತವಾಗಿ ವಿತರಿಸಿದರು.

ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಮೂಲಕ ಷಣ್ಮುಖ ಅವರು ಈಗಾಗಲೇ ಬಡವರಿಗೆ ಆರ್ಥಿಕ ನೆರವು, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಮಗ್ರಿಗಳ ವಿತರಣೆ, ವೈದ್ಯಕೀಯ ಶಿಬಿರಗಳು, ಅನ್ನದಾನ, ಹಾಗೂ ವಿವಿಧ ಸಾಮಾಜಿಕ ಮತ್ತು ಧಾರ್ಮಿಕ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಿ ಜನಮನ್ನಣೆ ಗಳಿಸಿದ್ದಾರೆ.

ಕಾರ್ಯಕ್ರಮದ ಆರಂಭದಲ್ಲಿ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಕೇಕ್ ಕತ್ತರಿಸಿ ಜನ್ಮದಿನ ಆಚರಿಸಲಾಯಿತು. ಬಳಿಕ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್‌ಗಳನ್ನು ವಿತರಿಸಿ, ಶಿಕ್ಷಣಕ್ಕೆ ತಮ್ಮ ಸಹಕಾರ ಮುಂದುವರಿಯಲಿದೆ ಎಂದು ಷಣ್ಮುಖ ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಲೆಯ ಮುಖ್ಯೋಪಾಧ್ಯಾಯರು, "ಜನ್ಮದಿನವನ್ನು ಸಮಾಜಮುಖಿ ಸೇವಾ ಕಾರ್ಯಕ್ರಮವಾಗಿ ಆಚರಿಸಿರುವುದು ಶ್ಲಾಘನೀಯ. ವಿದ್ಯಾರ್ಥಿಗಳಿಗೆ ನೀಡಿದ ಬ್ಯಾಗ್‌ಗಳು ಅವರ ಶಿಕ್ಷಣಕ್ಕೆ ನೆರವಾಗಲಿವೆ. ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಸೇವಾ ಕಾರ್ಯಗಳು ಇತರರಿಗೆ ಮಾದರಿಯಾಗಿವೆ" ಎಂದು ಪ್ರಶಂಸಿಸಿದರು.

ಈ ವೇಳೆ ಎರ್ರಗುಡಿ ಮಲ್ಲಯ್ಯ, ಕರ್ನಾಟಕ ರಕ್ಷಣಾ ವೇದಿಕೆಯ ರಘು, ಉಪ್ಪಾರ್ ಹನುಮೇಶ್, ಸೀನಾ ರಾಜು, ಸತ್ಯ, ಎರಗುಂಟ್ಲಾ ಕೃಷ್ಣ ಮಾತನಾಡಿ, "ಷಣ್ಮುಖ ಅವರು ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಮೂಲಕ ನಿರಂತರವಾಗಿ ಸಮಾಜಮುಖಿ ಸೇವೆ ಸಲ್ಲಿಸುತ್ತಿದ್ದು, ಯುವಜನತೆಗೆ ಪ್ರೇರಣೆಯಾಗಿದ್ದಾರೆ" ಎಂದು ಹೇಳಿದರು. ಕಾರ್ಯಕ್ರಮದಲ್ಲಿ ರಮಣ, ಮಧು, ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು, ಸಿಬ್ಬಂದಿ, ವಿದ್ಯಾರ್ಥಿಗಳು, ಗ್ರಾಮಸ್ಥರು ಹಾಗೂ ಗಣ್ಯರು ಭಾಗವಹಿಸಿದ್ದರು.

ಕೊನೆಯಲ್ಲಿ ಷಣ್ಮುಖ ಮಾತನಾಡಿ, "ನನ್ನ ಜನ್ಮದಿನವನ್ನು ಯಶಸ್ವಿಗೊಳಿಸಿದ ಶಾಲಾ ಆಡಳಿತ ಮಂಡಳಿ, ಗಣ್ಯರು, ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳಿಗೆ ಹೃತ್ಪೂರ್ವಕ ಧನ್ಯವಾದಗಳು. ಮುಂದೆಯೂ ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಮೂಲಕ ಇನ್ನಷ್ಟು ಸಮಾಜಮುಖಿ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತೇನೆ" ಎಂದು ಹೇಳಿದರು.

# ಕಾನೂನುಬದ್ಧ ದಾಖಲೆಗಳಿದ್ದರೂ ಕೃಷಿಗೆ ಅಡ್ಡಿ : ರಾಮರಾವ್, ರಾಜಶೇಖರ್ ಆರೋಪ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಸಂಡೂರು ತಾಲೂಕಿನ ಅಯ್ಯನಹಳ್ಳಿ ಕಂದಾಯ ಗ್ರಾಮದ ಸರ್ವೆ ನಂ. 20/2ರ 8.75 ಎಕರೆ ಕೃಷಿ ಭೂಮಿಯನ್ನು ಕಾನೂನುಬದ್ಧವಾಗಿ ಖರೀದಿಸಿದ್ದರೂ, ಭೂಮಿಗೆ ಪ್ರವೇಶ ನಿರಾಕರಿಸಿ ಕೃಷಿ ಚಟುವಟಿಕೆಗಳಿಗೆ ಅಡ್ಡಿಪಡಿಸಲಾಗುತ್ತಿದೆ ಎಂದು ಕುಡತಿನಿ ನಿವಾಸಿ ಡಿ. ರಾಮರಾವ್ ಹಾಗೂ ರಾಜಶೇಖರ್ ಆರೋಪಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೂಲ ವಾರಸುದಾರರಾದ ಶ್ರೀಮತಿ ಚಿಕ್ಕಮ್ಮ ಅವರಿಂದ ಸುಮಾರು 15 ವರ್ಷಗಳ ಹಿಂದೆ ಸದರಿ ಭೂಮಿಯನ್ನು ನೋಂದಾಯಿತ ಮಾರಾಟ ಪತ್ರದ ಮೂಲಕ ಖರೀದಿಸಿದ್ದು, ಪಹಣಿ, ಮ್ಯೂಟೇಶನ್, ಆರ್‌ಟಿಸಿ ಸೇರಿದಂತೆ ಎಲ್ಲಾ ಕಂದಾಯ ದಾಖಲೆಗಳು ತಮ್ಮ ಹೆಸರಿನಲ್ಲಿವೆ ಎಂದು ತಿಳಿಸಿದರು. ಇದೇ ಭೂಮಿಯ ಆಧಾರದ ಮೇಲೆ ಸಹಕಾರಿ ಬ್ಯಾಂಕಿನಿಂದ ?9 ಲಕ್ಷ ಅಭಿವೃದ್ಧಿ ಸಾಲ ಪಡೆದಿರುವುದೂ ತಮ್ಮ ಹಕ್ಕಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು. ಭೂಮಿಯನ್ನು ಖರೀದಿಸಿದ ಬಳಿಕ ನಾಲ್ಕು ಬೋರ್‌ವೆಲ್‌ಗಳನ್ನು ಕೊರೆಸಿ ಕೃಷಿಗೆ ಅನುಕೂಲವಾಗುವಂತೆ ಅಭಿವೃದ್ಧಿಪಡಿಸಲಾಗಿದೆ. ಇತ್ತೀಚೆಗೆ ಬೋರ್‌ವೆಲ್‌ಗೆ ನೀರು ದೊರೆತ ಹಿನ್ನೆಲೆಯಲ್ಲಿ ಕುಟುಂಬ ಸದಸ್ಯರು ಹಾಗೂ ಹಿತೈಷಿಗಳೊಂದಿಗೆ ಪೂಜೆ ಸಲ್ಲಿಸಲು ತೆರಳಿದ ವೇಳೆ, ಲಿಂಗದಹಳ್ಳಿ ಗ್ರಾಮದ ಕೆಲವರು ಯಾವುದೇ ದಾಖಲೆಗಳನ್ನು ತೋರಿಸದೆ ತಮ್ಮನ್ನು ತಡೆದು ನಿಂದನೆ, ಬೆದರಿಕೆ ಹಾಗೂ ಹಲ್ಲೆಗೆ ಯತ್ನಿಸಿದ್ದಾರೆ ಎಂದು ಆರೋಪಿಸಿದರು. ಅಲ್ಲದೆ, ತಾವು ಕೊರೆಸಿದ್ದ ಆರು ಬೋರ್‌ವೆಲ್‌ಗಳಲ್ಲಿ ಎರಡು ಬೋರ್‌ಗಳನ್ನು ಕಲ್ಲುಗಳಿಂದ ಮುಚ್ಚಿ ಹಾನಿಪಡಿಸಲಾಗಿದೆ ಎಂದು ದೂರಿದರು.

ವಿ.ಎಸ್. ಶಂಕರ್ ಅವರು ತಮ್ಮ ಕೃಷಿ ಭೂಮಿಯಲ್ಲಿ ಸಾಗುವಳಿ ಹಾಗೂ ಬಿತ್ತನೆ ಕಾರ್ಯಗಳನ್ನು ನಡೆಸಲು ನಿರಂತರವಾಗಿ ಅಡ್ಡಿಪಡಿಸುತ್ತಿದ್ದು, "ಹಣ ಕೊಡಿ ಅಥವಾ ಭೂಮಿ ಕೊಡಿ, ಇಲ್ಲದಿದ್ದರೆ ಒಕ್ಕಲೆಬ್ಬಿಸುತ್ತೇವೆ" ಎಂದು ಬೆದರಿಕೆ ಹಾಕುತ್ತಿದ್ದಾರೆ ಎಂದು ರಾಮರಾವ್ ಆರೋಪಿಸಿದರು. ಶಂಕರ್ ಅವರ ಬಳಿ 1925ರ ದಾಖಲೆ ಹೊರತುಪಡಿಸಿ ಬೇರೆ ಯಾವುದೇ ಕಾನೂನುಬದ್ಧ ದಾಖಲೆಗಳಿಲ್ಲ. ಆದರೆ ತಮ್ಮ ಬಳಿ ನೋಂದಾಯಿತ ಖರೀದಿ ಪತ್ರ, ಕಂದಾಯ ದಾಖಲೆಗಳು, ಆರ್‌ಎಸ್ ದಾಖಲೆಗಳು ಹಾಗೂ ಹಣದ ಲೇವಾದೇವಿ ದಾಖಲೆಗಳು ಇವೆ ಎಂದು ಅವರು ತಿಳಿಸಿದರು. ಘಟನೆ ನಡೆದ ತಕ್ಷಣ 112ಕ್ಕೆ ಕರೆ ಮಾಡಿ ಪೊಲೀಸರನ್ನು ಸ್ಥಳಕ್ಕೆ ಕರೆಸಲಾಗಿದ್ದು, ಈ ಸಂಬಂಧ ದೂರು ದಾಖಲಾಗಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ ಎಂದು ಹೇಳಿದರು. ಇದೇ ವ್ಯಕ್ತಿಗಳು ಇತ್ತೀಚೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಗೆ ತೆರಳಿ ಮನವಿ ಸಲ್ಲಿಸಿದ್ದು, ಜಗಳವನ್ನು ಅವರೇ ಆರಂಭಿಸಿ ಈಗ ತಮ್ಮ ಮೇಲೆಯೇ ದೌರ್ಜನ್ಯ ನಡೆದಿದೆ ಎಂದು ಆರೋಪಿಸುತ್ತಿದ್ದಾರೆ ಎಂದು ರಾಮರಾವ್ ಹಾಗೂ ರಾಜಶೇಖರ್ ದೂರಿದರು.

ನ್ಯಾಯಾಲಯದ ಆದೇಶ ಹಾಗೂ ಕಂದಾಯ ದಾಖಲೆಗಳ ಆಧಾರದ ಮೇಲೆ ತಮ್ಮ ಹೆಸರಿಗೆ ಹಕ್ಕು ಬದಲಾವಣೆಯಾಗಿರುವ ಭೂಮಿಯಲ್ಲಿ ಕೃಷಿ ನಡೆಸಲು ಅವಕಾಶ ಕಲ್ಪಿಸಿ, ತಮ್ಮ ಜೀವ ಹಾಗೂ ಆಸ್ತಿಗೆ ಸೂಕ್ತ ರಕ್ಷಣೆ ಒದಗಿಸಬೇಕು. ವಿ.ಎಸ್. ಶಂಕರ್ ಸೇರಿದಂತೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಂಡು, ದಾಖಲೆಗಳ ಆಧಾರದ ಮೇಲೆ ನಿಷ್ಪಕ್ಷಪಾತ ತನಿಖೆ ನಡೆಸಿ ನ್ಯಾಯ ಒದಗಿಸಬೇಕು ಎಂದು ಅವರು ಅಧಿಕಾರಿಗಳನ್ನು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಮರಾವ್, ರಾಜಶೇಖರ್, ವೆಂಕಟರಮಣ, ಮಹಾಂತೇಶ್, ಬಾಬು, ರುದ್ರಮ್ಮ ಹಾಗೂ ಪ್ರತಾಪ್ ಉಪಸ್ಥಿತರಿದ್ದರು.

# ರಾಷ್ಟ್ರೀಯ ಸ್ವಚ್ಛತಾ ಪಾಕ್ಷಿಕ ಅಂಗವಾಗಿ ಜಾಗೃತಿ ಅಭಿಯಾನ ಮತ್ತು ಸಸಿ ನೆಡುವ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಭಾರತ ಸರ್ಕಾರದ ಅಂಕಿಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ನಿರ್ದೇಶನದಂತೆ, ಬಳ್ಳಾರಿಯ ಉಪ ವಲಯ ಕಚೇರಿ ವತಿಯಿಂದ ಜುಲೈ 1 ರಿಂದ ಜುಲೈ 15, 2026 ರವರೆಗೆ ನಗರದಲ್ಲಿ 'ರಾಷ್ಟ್ರೀಯ ಸ್ವಚ್ಛತಾ ಪಾಕ್ಷಿಕ' ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ಆಯೋಜಿಸಲಾಗಿತ್ತು.

ಈ ಅಭಿಯಾನದ ಅಂಗವಾಗಿ ನಗರದ ಹೈಸ್ಕೂಲ್ ಮೈದಾನ ಹಾಗೂ ಐತಿಹಾಸಿಕ ಬಳ್ಳಾರಿ ಕೋಟೆಯ ಆವರಣದಲ್ಲಿ ಸ್ವಚ್ಛತಾ ಶ್ರಮದಾನ ಮತ್ತು ಸಸಿ ನೆಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಸಾರ್ವಜನಿಕರಲ್ಲಿ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸುವುದು ಹಾಗೂ ಸಚಿವಾಲಯದ ವಿವಿಧ ಅಂಕಿ-ಅಂಶ ಇಲಾಖೆಗಳ ಕಾರ್ಯವೈಖರಿಯನ್ನು ಜನಸಾಮಾನ್ಯರಿಗೆ ಪರಿಚಯಿಸುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿತ್ತು.*ಗಮನ ಸೆಳೆದ ಜಾಗೃತಿ ಜಾಥಾ:*ಬುಧವಾರ ರಾಷ್ಟ್ರೀಯ ಅಂಕಿ-ಅಂಶ ಕಚೇರಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಈ ಜಾಗೃತಿ ಜಾಥಾಗೆ ಗಣ್ಯರು ಚಾಲನೆ ನೀಡಿದರು. ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ಸ್ವಚ್ಛತಾ ಘೋಷಣೆಗಳುಳ್ಳ ಫಲಕಗಳನ್ನು ಹಿಡಿದು ನಗರದ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು. ಈ ಮೆರವಣಿಗೆಯು ನಗರದ ಪವನ್ ಹೋಟೆಲ್ ವೃತ್ತ, ಇಂದಿರಾ ವೃತ್ತ, ಗಡಿಗಿ ಚೆನ್ನಪ್ಪ ವೃತ್ತ, ಹೆಚ್.ಆರ್.ಗವಿಯಪ್ಪ ವೃತ್ತ ಹಾಗೂ ಹೊಸ ಬಸ್ ನಿಲ್ದಾಣಗಳ ಮೂಲಕ ಹಾದುಹೋಯಿತು. ಸಾರ್ವಜನಿಕರಿಗೆ ಕರಪತ್ರಗಳನ್ನು ಹಂಚುವ ಮೂಲಕ ಸ್ವಚ್ಛತೆಯ ಮಹತ್ವ ಹಾಗೂ ಅಂಕಿಅಂಶ ಇಲಾಖೆಯ ವಿವಿಧ ಸಮೀಕ್ಷೆಗಳ ಕುರಿತು ಮಾಹಿತಿ ನೀಡಲಾಯಿತು.

ವೈಯಕ್ತಿಕ ಮತ್ತು ಪರಿಸರ ಸ್ವಚ್ಛತೆಯಿಂದ ಸಾಂಕ್ರಾಮಿಕ ರೋಗಗಳನ್ನು ಹೇಗೆ ತಡೆಗಟ್ಟಬಹುದು ಮತ್ತು ಆರೋಗ್ಯಕರ ಸಮಾಜ ನಿರ್ಮಾಣ ಹೇಗೆ ಸಾಧ್ಯ ಎಂಬುದನ್ನು ಜನರಿಗೆ ಮನವರಿಕೆ ಮಾಡಿಕೊಡಲಾಯಿತು. ಮುಖ್ಯವಾಗಿ ಪ್ಲಾಸ್ಟಿಕ್ ಮುಕ್ತ ಪರಿಸರ ಮತ್ತು ಕಸದ ಸೂಕ್ತ ವಿಲೇವಾರಿಗೆ ಹೆಚ್ಚಿನ ಒತ್ತು ನೀಡಲಾಯಿತು. ದೇಶದ ಪ್ರಗತಿಯಲ್ಲಿ ಅಂಕಿ-ಅಂಶಗಳ ಮಹತ್ವ, ಸಚಿವಾಲಯದ ವಿವಿಧ ವಿಭಾಗಗಳು ನಡೆಸುವ ಸಾಮಾಜಿಕ-ಆರ್ಥಿಕ ಸಮೀಕ್ಷೆಗಳು ಮತ್ತು ದೇಶದ ಅಭಿವೃದ್ಧಿಯಲ್ಲಿ ಸಚಿವಾಲಯದ ಪಾತ್ರದ ಕುರಿತು ಜನಸಾಮಾನ್ಯರಿಗೆ ಸವಿಸ್ತಾರವಾಗಿ ವಿವರಿಸಲಾಯಿತು.

ಭಾರತ ಸರ್ಕಾರದ ಆರ್ಥಿಕ ಮತ್ತು ಅಂಕಿಅಂಶ ಸೇವೆಯ ಸಹಾಯಕ ನಿರ್ದೇಶಕ ಸಮೀರ್ ವಸಂತ್ ಪಾಟೀಲ್ ಅವರು ಅಭಿಯಾನದ ನೇತೃತ್ವ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಇಲಾಖೆಯ ಹಿರಿಯ ಸಂಖ್ಯಾಶಾಸ್ತ್ರ ಅಧಿಕಾರಿಗಳಾದ ಅಮಿತ್ ಕುಮಾರ್, ಮಿಥಿಲೇಶ್ ವಿಶ್ವಕರ್ಮ, ವೀರಭದ್ರ ಸಿಂಗ್, ರಾಜ್‌ಕುಮಾರ್ ವರ್ಮಾ, ಮಹೇಶ್ ಕುಮಾರ್, ಸಂಜಯ್ ಶ್ರೀವಾಸ್ತವ ಹಾಗೂ ಸುನಿಲ್ ಬಾಬು ಉಪಸ್ಥಿತರಿದ್ದು ಸಕ್ರಿಯವಾಗಿ ಭಾಗವಹಿಸಿದ್ದರು. ಇವರೊಂದಿಗೆ ಕಚೇರಿಯ ಇತರ ಹಿರಿಯ ಅಧಿಕಾರಿಗಳು, ಕ್ಷೇತ್ರಕಾರ್ಯ ನಿರ್ವಹಿಸುವ ಸಮೀಕ್ಷಾ ಮೇಲ್ವಿಚಾರಕರು, ನಿಖರ ದತ್ತಾಂಶ ಸಂಗ್ರಹಿಸುವ ಗಣತಿದಾರರು ಹಾಗೂ ಕಚೇರಿಯ ಎಲ್ಲಾ ಹಂತದ ಸಿಬ್ಬಂದಿ ಅಭಿಯಾನದಲ್ಲಿ ಕೈಜೋಡಿಸಿದ್ದರು. ಅಧಿಕಾರಿಗಳು ಮತ್ತು ಸಿಬ್ಬಂದಿಯ ಸಾಮೂಹಿಕ ಶ್ರಮದಿಂದಾಗಿ ಈ ಅಭಿಯಾನವು ಯಶಸ್ವಿಯಾಗಿ ಮುಕ್ತಾಯಗೊಂಡಿತು. ಸಾರ್ವಜನಿಕರಿಂದಲೂ ಅಭಿಯಾನಕ್ಕೆ ಅತ್ಯುತ್ತಮ ಸಕಾರಾತ್ಮಕ ಪ್ರತಿಕ್ರಿಯೆ ವ್ಯಕ್ತವಾಯಿತು. ಕಚೇರಿ ಆವರಣದಲ್ಲಿ ಸ್ವಚ್ಛತಾ ಪ್ರತಿಜ್ಞಾ ವಿಧಿ ಸ್ವೀಕರಿಸುವುದರೊಂದಿಗೆ 15 ದಿನಗಳ ಈ ಜಾಗೃತಿ ಅಭಿಯಾನಕ್ಕೆ ತೆರೆಬಿದ್ದಿತು.

# ಮತದಾರರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವ ಬಲಪಡಿಸುವ ಹೆಜ್ಜೆ: ಬಿ.ವೈ. ವಿಜಯೇಂದ್ರ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆಯನ್ನು ಖಚಿತಪಡಿಸುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (SIR) ಕಾರ್ಯಕ್ರಮ ಅತ್ಯಂತ ಮಹತ್ವದ್ದಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ನಗರದ ಭಾರತೀಯ ಜನತಾ ಪಕ್ಷದ ಜಿಲ್ಲಾ ಪ್ರಧಾನ ಕಚೇರಿಯಲ್ಲಿ ಬುಧವಾರ ಜಿಲ್ಲಾ ಘಟಕದ ವತಿಯಿಂದ ಆಯೋಜಿಸಿದ್ದ ಎಸ್‌ಐಆರ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮತದಾರರ ಪಟ್ಟಿಯಲ್ಲಿನ ಲೋಪದೋಷಗಳನ್ನು ಸರಿಪಡಿಸಿ, ಅರ್ಹ ಪ್ರತಿಯೊಬ್ಬ ಮತದಾರರ ಹೆಸರನ್ನು ಪಟ್ಟಿಯಲ್ಲಿ ಸೇರಿಸುವ ನಿಟ್ಟಿನಲ್ಲಿ ಎಸ್‌ಐಆರ್ ಪ್ರಕ್ರಿಯೆಯ ಮಹತ್ವವನ್ನು ವಿವರಿಸಿದ ಅವರು, ಕಾರ್ಯಕರ್ತರಿಗೆ ಅಗತ್ಯ ಮಾಹಿತಿ ಹಾಗೂ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವರು ಹಾಗೂ ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ, ಬಿಜೆಪಿ ಮುಖಂಡೆ ಗಾಲಿ ಲಕ್ಷ್ಮೀ ಅರುಣಾ, ಮಾಜಿ ಸಚಿವ ಬಿ. ಶ್ರೀರಾಮುಲು, ವಿಧಾನ ಪರಿಷತ್ ಸದಸ್ಯರಾದ ಸುಶೀಲ್ ಕುಮಾರ್ ಹಾಗೂ ವೈ.ಎಂ. ಸತೀಶ್, ಮಾಜಿ ಸಂಸದ ಸಣ್ಣ ಪಕ್ಕೀರಪ್ಪ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕುಡಚಿ ರಾಜೀವ್, ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ, ಟಿ.ಎಚ್. ಸುರೇಶ್ ಬಾಬು, ಎಂ.ಎಸ್. ಸೋಮಲಿಂಗಪ್ಪ, ಬಿಜೆಪಿ ಜಿಲ್ಲಾಣಟಿಜಜಜಿಟಿಜಜಧ್ಯಕ್ಷ ಅನಿಲ್ ಕುಮಾರ್ ನಾಯ್ಡು, ವಿಜಯನಗರ ಬಿಜೆಪಿ ಜಿಲ್ಲಾಧ್ಯಕ್ಷ ಬಸವನಗೌಡ ಪಾಟೀಲ್, ಬಿಜೆಪಿ ಎಸ್‌ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು, ಎಸ್‌ಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಕೆ.ಎಸ್. ದಿವಾಕರ್, ಬಿಜೆಪಿ ಮುಖಂಡ ದರಪ್ಪ ನಾಯಕ ಸೇರಿದಂತೆ ಜಿಲ್ಲೆಯ ಹಾಗೂ ನಗರದ ಪದಾಧಿಕಾರಿಗಳು, ಹಿರಿಯ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಮನೆ ಹೊಂದುವ ಕನಸಿಗೆ ದಾಖಲೆಗಳೇ ದೊಡ್ಡ ತಡೆ ಗ್ರಾಮೀಣ ಸಾಲಗಾರರ ನೆರವಿಗೆ ನಿಂತ ನಿವಾಸ ಫೈನಾನ್ಸ್

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಸ್ವಂತ ಮನೆ ಖರೀದಿ ಅಥವಾ ನಿರ್ಮಾಣ ಮಾಡುವುದು ಪ್ರತಿಯೊಬ್ಬರ ಜೀವಮಾನದ ಕನಸು. ಆದರೆ, ಹೊಸಪೇಟೆ ಹಾಗೂ ವಿಜಯನಗರ ಜಿಲ್ಲೆ ಸೇರಿದಂತೆ ಕರ್ನಾಟಕದ ಸಣ್ಣ ಪಟ್ಟಣಗಳು ಮತ್ತು ಗ್ರಾಮೀಣ ಭಾಗಗಳಲ್ಲಿ ಗೃಹಸಾಲ ಪಡೆಯುವುದು ಇಂದಿಗೂ ದೊಡ್ಡ ಸವಾಲಾಗಿದೆ. ಸಾಲ ಮರುಪಾವತಿ ಸಾಮರ್ಥ್ಯವಿದ್ದರೂ, ನಗದು ರೂಪದ ಸಂಬಳ, ಅಪೂರ್ಣ ಆಸ್ತಿ ದಾಖಲೆಗಳು ಹಾಗೂ ಖಾತಾ ಸಮಸ್ಯೆಗಳಿಂದಾಗಿ ಅನೇಕರ ಸಾಲದ ಅರ್ಜಿಗಳು ತಿರಸ್ಕೃತಗೊಳ್ಳುತ್ತಿವೆ. ಹೂವಿನಹಡಗಲಿಯ ಸೈಯದ್ ಸರೀಫಾ, ಟಿಪ್ಪುಸುಲ್ತಾನ್, ಹಳೇಗೇರಿಯ ರವಿಕುಮಾರ್ ಮತ್ತು ಹಳೆಬಂಡಿ ಗ್ರಾಮದ ಗಂಗಾಧರ ಅವರಂತಹ ಅನೇಕರು ಇಂತಹದ್ದೇ ಸವಾಲುಗಳನ್ನು ಎದುರಿಸಿದ್ದರು. ಆದರೆ ಸೂಕ್ತ ಮಾರ್ಗದರ್ಶನ ಹಾಗೂ ಹಣಕಾಸು ನೆರವು ಸಿಕ್ಕಿದ್ದರಿಂದ ಇವರೆಲ್ಲರೂ ಇಂದು ಗೃಹಸಾಲ ಮತ್ತು ಆಸ್ತಿ ಆಧಾರಿತ ಸಾಲ ಪಡೆದು ಆರ್ಥಿಕ ಸ್ಥಿರತೆ ಕಂಡುಕೊಂಡಿದ್ದಾರೆ. ಗ್ರಾಮೀಣ ಭಾಗದ ಜನಸಾಮಾನ್ಯರ ಇಂತಹ ಸಮಸ್ಯೆಗಳಿಗೆ ಬೆಂಗಳೂರು ಮೂಲದ 'ನಿವಾಸ ಫೈನಾನ್ಸ್' ಪರಿಹಾರ ಒದಗಿಸುತ್ತಿದೆ. ಇದೊಂದು ವಿಶೇಷ ಗೃಹ ಹಣಕಾಸು ವೇದಿಕೆಯಾಗಿದ್ದು, 10ಕ್ಕೂ ಹೆಚ್ಚು ಪಾಲುದಾರ ಬ್ಯಾಂಕುಗಳು, ಹೌಸಿಂಗ್ ಫೈನಾನ್ಸ್ ಕಂಪನಿಗಳು ಹಾಗೂ ಓಃಈಅಗಳೊಂದಿಗೆ ಸಹಭಾಗಿತ್ವ ಹೊಂದಿದೆ.

ಗ್ರಾಹಕರ ಅಗತ್ಯಕ್ಕೆ ತಕ್ಕ ಸಾಲದಾತರನ್ನು ಆಯ್ಕೆ ಮಾಡುವುದು, ದಾಖಲೆಗಳ ಸಿದ್ಧತೆ ಮತ್ತು ಮನೆ ಬಾಗಿಲಿಗೇ ಬಂದು ಸ್ಥಳೀಯ ಭಾಷೆಯಲ್ಲಿ ಪಾರದರ್ಶಕ ನೆರವು ನೀಡುವುದು ಇದರ ವಿಶೇಷತೆಯಾಗಿದೆ.

2025ರಲ್ಲಿ ಮೈಸೂರು ಮತ್ತು ಮಂಡ್ಯದಲ್ಲಿ ಆರಂಭವಾದ ಈ ಸಂಸ್ಥೆ, ಪ್ರಸ್ತುತ ಕರ್ನಾಟಕದ 13 ಜಿಲ್ಲೆಗಳಿಗೆ ವಿಸ್ತರಿಸಿದ್ದು, ಇದುವರೆಗೆ 20 ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ನೂರಾರು ಭದ್ರತಾ ಆಧಾರಿತ ಸಾಲಗಳ ಮಂಜೂರಾತಿಗೆ ನೆರವಾಗಿದೆ ಎಂದು ಪತ್ರಿಕೆ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಶ್ರೀಧರಗಡ್ಡ, ಕೊರ್ಲಗುಂದಿ ಗ್ರಾ.ಪಂ.ಗಳಲ್ಲಿ ವಿ-ಬಿಜಿ ರಾಮ್ ಜಿ ಯೋಜನೆ ಜಾಗೃತಿ ಅಭಿಯಾನಕ್ಕೆ ಇಒ ಬಾರಕೇರ್ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಗ್ರಾಮೀಣ ಭಾಗದ ಜನರ ಆರ್ಥಿಕ ಸಬಲೀಕರಣ ಹಾಗೂ ಉದ್ಯೋಗಾವಕಾಶ ಹೆಚ್ಚಿಸುವ ನಿಟ್ಟಿನಲ್ಲಿ ಜಾರಿಗೆ ತರಲಾಗಿರುವ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಯೋಜನೆಯ ಕುರಿತು ಶ್ರೀಧರಗಡ್ಡ ಮತ್ತು ಕೊರ್ಲಗುಂದಿ ಗ್ರಾಮ ಪಂಚಾಯತಿಗಳಲ್ಲಿ ಬುಧವಾರ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಯಿತು.

ಬಳ್ಳಾರಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಬಾರಕೇರ್ ಅವರು, ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಯಡಿ ಹಮ್ಮಿಕೊಂಡಿದ್ದ ಈ ಜಾಗೃತಿ ಅಭಿಯಾನಕ್ಕೆ ಸ್ವಚ್ಛ ಭಾರತ ಮಿಷನ್ ವಾಹನದ ಮುಖಾಂತರ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ವಿ-ಬಿಜಿ ರಾಮ್ ಜಿ ಯೋಜನೆಯಡಿ ಗ್ರಾಮೀಣ ಕೂಲಿಕಾರರಿಗೆ ಆರ್ಥಿಕ ಭದ್ರತೆ ನೀಡಲು ಹಲವು ಸುಧಾರಣೆಗಳನ್ನು ತರಲಾಗಿದ್ದು, ಈ ಯೋಜನೆಯಡಿ ಕೂಲಿ ದರವನ್ನು ರೂ.370 ರಿಂದ 382 ರೂ. ವರೆಗೆ ಹೆಚ್ಚಿಸಲಾಗಿದೆ. ಅಷ್ಟೇ ಅಲ್ಲದೆ, ಒಂದು ಕುಟುಂಬಕ್ಕೆ ಒಂದು ಆರ್ಥಿಕ ವರ್ಷದಲ್ಲಿ ನೀಡಲಾಗುತ್ತಿದ್ದ ಉದ್ಯೋಗದ ಅವಧಿಯನ್ನು 125 ಮಾನವ ದಿನಗಳಿಗೆ ಹೆಚ್ಚಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಈ ಯೋಜನೆಯಿಂದ ನೀರು ಸಂಗ್ರಹಣೆ ಮತ್ತು ಜಲ ಮೂಲಗಳ ಪುನಶ್ಚೇತನಕ್ಕೆ ಸಂಬಂಧಿಸಿದ ಕಾಮಗಾರಿಗಳಿಗೆ ವಿಶೇಷ ಉತ್ತೇಜನ ನೀಡುವುದು. ಗ್ರಾಮೀಣ ಜನರ ಜೀವನೋಪಾಯದ ಅವಕಾಶಗಳನ್ನು ಹೆಚ್ಚು ಮಾಡುವುದು. ಗ್ರಾಮೀಣ ಭಾಗದ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಈ ಯೋಜನೆಯಡಿ ಕೂಲಿಕಾರರಿಗೆ ನಿರಂತರ ಕೆಲಸ ನೀಡುವುದು ಮತ್ತು ರೈತರಿಗೆ ಅನುಕೂಲವಾಗುವಂತೆ ಮಾಡಲು ಸರ್ಕಾರವು ಒಟ್ಟು 318 ವೈವಿಧ್ಯಮಯ ಕಾಮಗಾರಿಗಳನ್ನು ನಿಗದಿಪಡಿಸಿದೆ. ರೈತರು ಹಾಗೂ ಸ್ವಸಹಾಯ ಸಂಘಗಳ ಮಹಿಳೆಯರಿಗೆ ಈ ಯೋಜನೆಯಲ್ಲಿ ಸುವರ್ಣಾವಕಾಶಗಳಿದ್ದು, ಪ್ರತಿಯೊಬ್ಬರೂ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸ್ವಸಹಾಯ ಸಂಘದ ಸದಸ್ಯರು, ಮೇಟಿಗಳು ಹಾಗೂ ಕೂಲಿಕಾರರಿಗೆ ಯೋಜನೆಯ ಸಂಪೂರ್ಣ ಮಾಹಿತಿ ನೀಡಲಾಯಿತು. ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ ಆರ್. ಕೆ ಬಸವರಾಜ್, ಶ್ರೀಧರಗಡ್ಡ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಹನುಮಂತಪ್ಪ, ಕೊರ್ಲಗುಂದಿ ಗ್ರಾ.ಪಂ. ಪಿಡಿಓ ಪ್ರಕಾಶ ಅಮರಶೆಟ್ಟಿ, ತಾಲೂಕು ಐಇಸಿ ಸಂಯೋಜಕ ರಮೇಶ ಸೇರಿದಂತೆ ಪ್ರಮುಖರಾದ ವಿಜಯ ಮಹಂತೇಶ, ಎಸ್‌ಡಿಎ, ಡಿಇಓಗಳು, ಪಂಚಾಯತಿ ಕಾರ್ಯದರ್ಶಿಗಳು, ಕರವಸೂಲಿಗಾರರು, ಬಿಎಫ್‌ಟಿ, ಜಿಕೆಎಂ, ಸ್ವಸಹಾಯ ಸಂಘದ ಪದಾಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸಾಂಸ್ಕೃತಿಕ ಸೌರಭ, ಯುವಸೌರಭ ಹಾಗೂ ಚಿಗುರು ಕಾರ್ಯಕ್ರಮಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು. 15 : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಯಾದಗಿರಿ ಜಿಲ್ಲೆಯ ವತಿಯಿಂದ 2026-27ನೇ ಸಾಲಿನ ಕ್ರಿಯಾಯೋಜನೆಯಡಿ ಜಿಲ್ಲಾ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿರುವ ಸಾಂಸ್ಕೃತಿಕ ಸೌರಭ, ಯುವಸೌರಭ ಹಾಗೂ ಚಿಗುರು ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಆಸಕ್ತ ಅರ್ಹ ಕಲಾವಿದರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಕಲಾವಿದರು ತಮ್ಮ ಸ್ವ-ವಿವರ (ಬಯೋಡಾಟಾ) ಹಾಗೂ ಅಗತ್ಯ ದಾಖಲೆಗಳನ್ನು ಜುಲೈ.25 2026 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯಾದಗಿರಿ ಜಿಲ್ಲೆ ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾರಿ–ಸ್ಕಿಲ್ಸ್: ಜಂಟಿ ಪರಿಶೀಲನೆಗೆ ಕೇಂದ್ರ ತಂಡ



**ಬಾಗಲಕೋಟೆ:** ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ನಾರಿ–ಸ್ಕಿಲ್ಸ್ ಕಾರ್ಯಕ್ರಮದ ಪ್ರಥಮ ಜಂಟಿ ಪ್ರಗತಿ ಪರಿಶೀಲನೆ ಅಂಗವಾಗಿ ಗ್ರಾಮೀಣ ಪ್ರದೇಶದ ಅತ್ಯಂತ ದುರ್ಬಲ ಕುಟುಂಬಗಳಿಗೆ ಆರ್ಥಿಕ ಸಹಾಯ ಹಾಗೂ ಕೌಶಲ್ಯ ತರಬೇತಿ ನೀಡಿ ಸ್ವಾವಲಂಬನೆ ಸಾಧಿಸಲು ಜೀವನೋಪಾಯ ಚಟುವಟಿಕೆಗಳ ಮೂಲಕ ಆರ್ಥಿಕ ಸಬಲೀಕರಣಕ್ಕಾಗಿ ಮೋಡ್ಸ್ ಗೋಲ್ ಮಾಜಿ ಹೆಚ್ಚುವರಿ ಕಾರ್ಯದರ್ಶಿ ಚರಣಸಿಂಗ್ ನೇತೃತ್ವದ ಕೇಂದ್ರ ತಂಡ ಮಂಗಳವಾರ ಜಿಲ್ಲೆಗೆ ಭೇಟಿ ನೀಡಿತು.

ಕೇಂದ್ರದ ತಂಡ ಮೊದಲು ಕೆರೂರಿನ ಬೃಂದಾವನ ಸಭಾಭವನದಲ್ಲಿ ಸಭೆ ಮಾಡಿ ನಾರಿ–ಕಿಲ್ಸ್ ಕಾರ್ಯಕ್ರಮದ ಅನುಷ್ಠಾನ ಕುರಿತು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ ಅವರೊಂದಿಗೆ ಚರ್ಚೆ ನಡೆಸಿತು. ನಂತರ 5ಜನ ಸದಸ್ಯರ 3 ತಂಡಗಳಾಗಿ ವಿಂಗಡಿಸಿ, ಬಾದಾಮಿ ತಾಲೂಕಿನ ಅನವಾಲ, ಕುಳಗೇರಿ ಕ್ರಾಸ್ ಹಾಗೂ ಆಲೂರ ಎಸ್‌ಕೆ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಲಾಯಿತು. 3 ಗ್ರಾಮ ಪಂಚಾಯತಿಗಳಲ್ಲಿ ನಾರಿ–ಕಿಲ್ಸ್ ಯೋಜನೆಯ ಅನುಷ್ಠಾನ ಕುರಿತು ಗ್ರಾಮ ಪಂಚಾಯತಿ ಸಮಿತಿ ಸದಸ್ಯರ ಜೊತೆ ಎಸ್.ಎಚ್.ಜಿ, ಜಿಪಿಎಲ್‌ಎಫ್ ಮಹಿಳೆಯರ ಜೊತೆ ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಜೊತೆಯಲ್ಲಿ ಕಾರ್ಯಕ್ರಮ ಅನುಷ್ಠಾನ, ಸವಾಲುಗಳು ಹಾಗೂ ಮುಂದಿನ ಕಾರ್ಯತಂತ್ರಗಳ ಕುರಿತು ಚರ್ಚಿಸಲಾಯಿತು. ನಂತರ ಮಹಿಳಾ ಸ್ವ–ಸಹಾಯ ಸಂಘಗಳ ಉತ್ಪನ್ನಗಳ ಘಟಕಗಳಿಗೆ ಭೇಟಿ ನೀಡಿದರು. ಯೋಜನೆ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಕುರಿತು ಚರ್ಚಿಸಿದರು. ಫಲಾನುಭವಿಗಳ ಮನೆಗಳಿಗೆ ಭೇಟಿ ಮಾಡಿ ಯೋಜನೆ ಕುರಿತು ಚರ್ಚಿಸಿದರು. ಜಿಲ್ಲೆಯಲ್ಲಿ ಮಹಿಳಾ ಸ್ವ–ಸಹಾಯ ಗುಂಪುಗಳು ವಿವಿಧ ಉತ್ಪನ್ನಗಳಾದ ರೊಟ್ಟಿ ತಯಾರಿಕೆ, ಇಳಕಲ್ಲ ಸಾರಿ, ಗುಳೇದಗುಡ್ಡ ಖಣ ಸೇರಿದಂತೆ ಹಲವು ಉತ್ಪನ್ನಗಳನ್ನು ತಯಾರಿಸಿ ಉತ್ತಮ ರೀತಿಯಲ್ಲಿ ಪ್ಯಾಕಿಂಗ್ ಮಾಡಿ ಮಾರಾಟ ಮಾಡಲಾಗುತ್ತಿರುವುದಕ್ಕೆ ಶ್ಲಾಘನೆ ವ್ಯಕ್ತಪಡಿಸಿದರು. ಕ್ಷೇತ್ರ ಭೇಟಿ ಸಂದರ್ಭದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ, ಜಿ.ಪಂ ಮುಖ್ಯ ಯೋಜನಾ ನಿರ್ದೇಶಕ ಸಿದ್ದರಾಮೇಶ್ವರ ಉಕ್ಕಲಿ, ತಾ.ಪಂ ಇಓ ಸತೀಶ ಮಾಕೊಂಡ, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ, ವಿವಿಧ ಗ್ರಾಮ ಪಂಚಾಯತ ಅಬಿವೃದ್ಧಿ ಅಧಿಕಾರಿಗಳು, ಎಲ್.ಆರ್.ಎಲ್.ಎಂ ನಾರಿ ಕಿಲ್ಸ್ ಸಿಬ್ಬಂದಿ ಇದ್ದರು.

## ವಿದ್ಯಾರ್ಥಿಗಳು ಕೌಶಲ್ಯ ವೃದ್ಧಿಸಿಕೊಳ್ಳಬೇಕು: ಡಾ.ಚವ್ಹಾಣ



**ಬಾಗಲಕೋಟೆ:** ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೇವಲ ಪದವಿ ಪಡೆದರೆ ಸಾಕಾಗುವುದಿಲ್ಲ. ಉದ್ಯೋಗ ಪಡೆಯಲು ಸಂವಹನ ಕೌಶಲ್ಯ, ವ್ಯಕ್ತಿತ್ವ ವಿಕಸನ, ಸಂದರ್ಶನ ಕೌಶಲ್ಯ ಹಾಗೂ ಉದ್ಯೋಗಾರ್ಹತಾ ಕೌಶಲ್ಯಗಳನ್ನು ವಿದ್ಯಾರ್ಥಿಗಳು ರೂಢಿಸಿಕೊಳ್ಳಬೇಕು ಎಂದು ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಜಗನ್ನಾಥ ಚವ್ಹಾಣ ಹೇಳಿದರು.

ನಗರದ ಬಿ.ವಿ.ವಿ. ಸಂಘದ ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದ ನಿರ್ವಹಣಾ ಅಧ್ಯಯನ ವಿಭಾಗ (ಬಿಬಿಎ) ಹಾಗೂ ಐಕ್ಯೂಎಸಿ ಆಶ್ರಯದಲ್ಲಿ, ಮಹೀಂದ್ರ ಮತ್ತು ನಾಂದಿ ಫೌಂಡೇಶನ್ ಬೆಂಗಳೂರು ಇವರ ಸಹಯೋಗದಲ್ಲಿ ಆಯೋಜಿಸಲಾದ 6 ದಿನಗಳ ಉದ್ಯೋಗಾರ್ಹತಾ ಕೌಶಲ್ಯ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಸಂಪನ್ಮೂಲ ವ್ಯಕ್ತಿ, ತರಬೇತುದಾರ ದಾಮೋದರನ್ ಮಾತನಾಡಿ, ಇಂದಿನ ಉದ್ಯಮ ಕ್ಷೇತ್ರದ ಅಗತ್ಯಗಳಿಗೆ ಅನುಗುಣವಾಗಿ ವಿದ್ಯಾರ್ಥಿಗಳು ತಮ್ಮ ಕೌಶಲ್ಯಗಳನ್ನು ನಿರಂತರವಾಗಿ ವೃದ್ಧಿಸಿಕೊಳ್ಳುವುದು ಅತ್ಯಗತ್ಯವಾಗಿದೆ ಎಂದು ಹೇಳಿದರು. ತರಬೇತಿ ಮೂಲಕ ಉದ್ಯೋಗಾರ್ಹತಾ ಕೌಶಲ್ಯ, ಸಂವಹನ ಕೌಶಲ್ಯ, ವ್ಯಕ್ತಿತ್ವ ವಿಕಸನ, ಸಂದರ್ಶನ ಕೌಶಲ್ಯ ಹಾಗೂ ಉದ್ಯಮ ಕ್ಷೇತ್ರದ ನಿರೀಕ್ಷೆಗಳ ಕುರಿತು ಪ್ರಾಯೋಗಿಕ ಮತ್ತು ಉಪಯುಕ್ತ ಮಾಹಿತಿಯನ್ನು ನೀಡಲಾಗುವುದು. ಇದು ವಿದ್ಯಾರ್ಥಿಗಳನ್ನು ಉದ್ಯೋಗ ಹಾಗೂ ಉನ್ನತ ಶಿಕ್ಷಣಕ್ಕೆ ಸಜ್ಜುಗೊಳಿಸುವ ಮಹತ್ವದ ವೇದಿಕೆಯಾಗಿದೆ ಎಂದು ತಿಳಿಸಿದರು. ಆರು ದಿನಗಳ ಈ ಉದ್ಯೋಗಾರ್ಹತಾ ಕೌಶಲ್ಯ ತರಬೇತಿ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ 250ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಪ್ರಾಧ್ಯಾಪಕರು ಮತ್ತು ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ಜ್ಞಾನದ ಜೊತೆಗೆ ಸಂಸ್ಕಾರ ಅಗತ್ಯ: ಕಾಂಬಳೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**




ಜಾತಿ–ಧರ್ಮಕ್ಕಿಂತ ಮಾನವೀಯತೆ ಮುಖ್ಯವಾಗಿದ್ದು, ಜ್ಞಾನದ ಜೊತೆಗೆ ಸಂಸ್ಕಾರ ಅಗತ್ಯ. ವಿದ್ಯಾರ್ಥಿಗಳು ಪಡೆದಿರುವ ಶಿಕ್ಷಣ ದೇಶದ ಅಭಿವೃದ್ಧಿಗೆ ಪೂರಕವಾಗಬೇಕು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪುಂಡಲಿಕ ಕಾಂಬಳೆ ಹೇಳಿದರು.

ನಗರದ ವಿದ್ಯಾಗಿರಿಯ ಬಸವೇಶ್ವರ ಇಂಜಿನಿಯರಿಂಗ್ ಕಾಲೇಜಿನ ನೂತನ ಸಭಾಂಗಣದಲ್ಲಿ ಬುಧವಾರ ನಡೆದ ಬಿ.ವಿ.ವಿ. ಸಂಘದ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಸ್ವತಂತ್ರ ಪದವಿ ಮಹಾವಿದ್ಯಾಲಯದ 2026–27ನೇ ಸಾಲಿನ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮ ಹಾಗೂ ಕ್ರೀಡಾ, ಸಾಂಸ್ಕೃತಿಕ, ಎನ್‌ಎಸ್‌ಎಸ್., ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ತಂದೆ–ತಾಯಿ ಹಾಗೂ ಗುರುಗಳಿಗೆ ಗೌರವ ನೀಡಬೇಕು. ದುಶ್ಚಟಗಳಿಂದ ದೂರವಿದ್ದು, ಸಮಯವನ್ನು ಓದಿಗೆ ಮೀಸಲಿಡಬೇಕು. ಭಾಷೆ ಮುಖ್ಯವಲ್ಲ, ಭಾವನೆಯೇ ಮುಖ್ಯ. ಜ್ಞಾನದ ಜೊತೆಗೆ ಸಂಸ್ಕಾರವೂ ಅತ್ಯಗತ್ಯವಾಗಿದ್ದು, ಜ್ಞಾನ ಇದ್ದರೂ ಸುಸಂಸ್ಕೃತಿ ಇಲ್ಲದಿದ್ದರೆ ಅದರ ಮೌಲ್ಯ ಕಡಿಮೆಯಾಗುತ್ತದೆ. ಬೇರೆಯವರೊಂದಿಗೆ ಉತ್ತಮ ರೀತಿಯಲ್ಲಿ ನಡೆದುಕೊಳ್ಳುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಕರ್ತವ್ಯ, ವಿದ್ಯಾರ್ಥಿಗಳು ಜೀವನದಲ್ಲಿ ಸ್ಪಷ್ಟ ಗುರಿ ಹೊಂದಿ, ಅದನ್ನು ಸಾಧಿಸಲು ಸರಿಯಾದ ಮಾರ್ಗವನ್ನು ಆಯ್ಕೆ ಮಾಡಿಕೊಂಡು ನಿರಂತರ ಶ್ರಮಿಸಬೇಕು. ಶಿಕ್ಷಣದ ಜೊತೆಗೆ ವ್ಯಕ್ತಿತ್ವ ವಿಕಸನಕ್ಕೂ ಆದ್ಯತೆ ನೀಡಿದಾಗ ಮಾತ್ರ ಆದರ್ಶ ನಾಗರಿಕರಾಗಲು ಸಾಧ್ಯ ಎಂದು ಕಿವಿಮಾತು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಡಾ.ಪ್ರಮೋದ ಮಿರ್ಜಿ ಮಾತನಾಡಿ, ಉತ್ತಮ ಆರೋಗ್ಯಕ್ಕಾಗಿ ಗುಣಮಟ್ಟದ ಆಹಾರ ಸೇವಿಸಬೇಕು. ಯೋಗ ಮತ್ತು ಧ್ಯಾನ ಅಭ್ಯಾಸ ಮಾಡುವುದರಿಂದ ಏಕಾಗ್ರತೆ, ಜ್ಞಾನ ಹಾಗೂ ಆತ್ಮಸ್ಥೈರ್ಯ ವೃದ್ಧಿಯಾಗುತ್ತದೆ. ವಿದ್ಯಾರ್ಥಿಗಳು ಮೊಬೈಲನ್ನು ಅಗತ್ಯಕ್ಕೆ ತಕ್ಕಂತೆ ಬಳಕೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಬಾವಿ ಮಾತನಾಡಿ, ಬಿ.ವಿ.ವಿ. ಸಂಘದ ಶಿಕ್ಷಣ ಸಂಸ್ಥೆಗಳಲ್ಲಿ ಶೈಕ್ಷಣಿಕ ಜ್ಞಾನದ ಜೊತೆಗೆ ಬದುಕಿಗೆ ಅಗತ್ಯವಾದ ಜೀವನ ಮೌಲ್ಯಗಳನ್ನು ವಿದ್ಯಾರ್ಥಿಗಳಿಗೆ ಕಲಿಸಲಾಗುತ್ತಿದೆ. ವಿವಿಧ ಕ್ಷೇತ್ರಗಳಲ್ಲಿ ಕಾಲೇಜಿನ ವಿದ್ಯಾರ್ಥಿಗಳು ಸಾಧಿಸಿರುವ ಯಶಸ್ಸು ಸಂಸ್ಥೆಯ ಹೆಮ್ಮೆಯಾಗಿದೆ ಎಂದು ಹೇಳಿದರು.

ವಿವಿಧ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಪ್ರಾಚಾರ್ಯ ಡಾ. ಎಸ್.ಎಂ.ಗಾಂವಕರ್, ಡಾ. ಎಸ್.ಎಸ್.ಬಸಪ್ಪನವರ, ಬಿ.ಐ.ಬೋಡನಾಯಕದಿನ್ನಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಪಿ.ವೈ.ಮಾಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಎಂ.ಎ.ಪಾಟೋಳಿ ಪರಿಚಯಿಸಿದರು. ಅನ್ನಪೂರ್ಣ ಪಾಟೀಲ ಹಾಗೂ ಡಾ.ಎಸ್.ಆರ್.ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮಕ್ಕೂ ಮುನ್ನ ವಿದ್ಯಾರ್ಥಿಗಳು ಸುಮಧುರವಾಗಿ ಹಾಡಿದ ವಂದೇ ಮಾತರಂ, ಕುಮಾರಿ ಶ್ರೇಯಾ ಕುಲಕರ್ಣಿ ಅವರ ಸ್ವಾಗತ ನೃತ್ಯ ಹಾಗೂ ಕುಮಾರಿ ಅಕ್ಷರಾ ಮತ್ತು ಆದ್ವಿತಾ ಗಣನಾಥ ಅವರ ಪ್ರಾರ್ಥನೆ ಗಮನ ಸೆಳೆಯಿತು.

# ಪೊಲೀಸ್ ಇಲಾಖೆಯಿಂದ ಎರಡು ಹೊಸ ಯೋಜನೆಗಳು ಜಾರಿಗೆ: ಸಂದೀಪ ಪಾಟೀಲ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**



ಕರ್ನಾಟಕವನ್ನು ಮಾದಕ ವಸ್ತು ಮುಕ್ತವಾಗಿಸಲು ಪೊಲೀಸ್ ಇಲಾಖೆಯಿಂದ ಎರಡು ಹೊಸ ಯೋಜನೆಗಳು ಜಾರಿಗೆ ಮಾಡಲಾಗಿದೆ ಎಂದು ಉತ್ತರ ವಲಯ ಪೊಲೀಸ್ ಮಹಾ ನಿರೀಕ್ಷಕ ಸಂದೀಪ ಪಾಟೀಲ ಹೇಳಿದರು. ಈ ಕುರಿತು ವಿಜಯಪುರ ನಗರದ ಪೋಲಿಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿ ಕರ್ನಾಟಕವನ್ನು ಮಾದಕ ವಸ್ತು ಮುಕ್ತ ರಾಜ್ಯವನ್ನಾಗಿ ಮಾಡಲು ಸರ್ಕಾರ ಘೋಷಿಸಿದ್ದು, ಇದರ ಅಡಿಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯು ಈಗಾಗಲೇ ಸಾಕಷ್ಟು ಮಾದಕ ದ್ರವ್ಯ ಮಾರಾಟಗಾರರು (ಪೆಡ್ಲರ್ಸ್) ಹಾಗೂ ಗ್ರಾಹಕರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ, ಹೆಚ್ಚಿನ ಪ್ರಮಾಣದಲ್ಲಿ ಡ್ರಗ್ಸ್ ಜಪ್ತಿ ಮಾಡಲಾಗಿದೆ ಎಂದರು.

ಇನ್ನೂ ಈ ಪಿಡುಗನ್ನು ಸಂಪೂರ್ಣವಾಗಿ ತೆ–ಡೆದು ಹಾಕಲು ಕೇವಲ ಪೊಲೀಸ್ ಇಲಾಖೆಯಷ್ಟೇ ಅಲ್ಲದೆ, ಸರ್ಕಾರದ ಇತರ ಇಲಾಖೆಗಳ ಪಾತ್ರವೂ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರ ನೇತೃತ್ವದಲ್ಲಿ ಇಲಾಖೆಯು 'ಆಪರೇಷನ್ ರೈಸ್' (Operation RISE) ಮತ್ತು 'ಬೇಡ ಬ್ರೋ' (Beda Bro) ಎಂಬ ಎರಡು ಹೊಸ ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಿದೆ. ಈ ಯೋಜನೆಯಡಿ ಪೊಲೀಸ್ ಇಲಾಖೆಯೊಂದಿಗೆ ಕಂದಾಯ, ಸಾರಿಗೆ, ಉನ್ನತ ಶಿಕ್ಷಣ, ವೈದ್ಯಕೀಯ ಶಿಕ್ಷಣ, ಆರೋಗ್ಯ ಹಾಗೂ ಔಷಧಿ ನಿಯಂತ್ರಣ ಇಲಾಖೆಗಳು ಒಟ್ಟಾಗಿ ಸೇರಿ ಡ್ರಗ್ಸ್ ನಿಯಂತ್ರಣ–ಕ್ಕೆ ಹೋರಾಡಲಿವೆ ಎಂದರು. ಇನ್ನೂ ಮಾದಕ ವ್ಯಸನಕ್ಕೆ ಬಲಿಯಾಗುತ್ತಿರುವ ಯುವಕರು ಹಾಗೂ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜಾಲತಾಣಗಳ ಮೂಲಕ ಅರಿವು ಮೂಡಿಸಲು ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸಣ್ಣ ವೀಡಿಯೊಗಳು ಮತ್ತು ಪೋಸ್ಟರ್‌ಗಳ ಮೂಲಕ ಡ್ರಗ್ಸ್‌ನಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಮೇಲಾಗುವ ಪರಿಣಾಮಗಳು ಮತ್ತು ಅದು ಹೇಗೆ ಅಪರಾಧ ಜಗತ್ತಿಗೆ ದೂಡುತ್ತದೆ ಎಂಬುದನ್ನು ವಿವರಿಸಲಾಗುತ್ತದೆ. ಈ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ಮೂರು ಹಂತಗಳಲ್ಲಿ ಜಾರಿಗೆ ತರಲಾಗುತ್ತಿದೆ. ಜಿಲ್ಲಾ ಮಟ್ಟದ ಪ್ರಮುಖ ಶಾಲಾ–ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮ.

ಎರಡನೇ ಹಂತದಲ್ಲಿ ಎಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಯ ಶಾಲಾ–ಕಾಲೇಜುಗಳಲ್ಲಿ ಕಾರ್ಯಕ್ರಮಗಳ ಆಯೋಜನೆ. ಮೂರನೇ ಹಂತದಲ್ಲಿ ತಾಲೂಕು ಮಟ್ಟದಲ್ಲಿ ಸ್ಥಳೀಯ ಶಾಸಕರನ್ನು ಒಳಗೊಂಡು ಬೃಹತ್ ಜಾಗೃತಿ ಮೂಡಿಸುವುದಾಗಿದೆ ಎಂದರು. ಇನ್ನೂ ಗಾಂಜಾ ಮಾರಾಟ ಅಥವಾ ಬೆಳೆಯುತ್ತಿರುವ ಬಗ್ಗೆ ಸಾರ್ವಜನಿಕರು ಫೋನ್ ಮೂಲಕ ಅಥವಾ ಕೆಎಸ್‌ಪಿ (KSP) ಆಪ್ ಮೂಲಕ ಇಲಾಖೆಗೆ ಮಾಹಿತಿ ನೀಡಬೇಕು, ಇನ್ನೂ ಮಾಹಿತಿ ನೀಡಿದವರ ವಿವರಗಳನ್ನು ರಹಸ್ಯವಾಗಿಡಲಾಗುವುದು ಎಂದರು. ಇದೇ ವೇಳೆ ಮಾತನಾಡುತ್ತಾ ಉತ್ತರ ವಲಯದ 5 ಜಿಲ್ಲೆಗಳ ಪೈಕಿ ಡ್ರಗ್ಸ್ ವಿರುದ್ಧದ ಕಾರ್ಯಾಚರಣೆ, ಗಾಂಜಾ ಜಪ್ತಿ ಹಾಗೂ ಆರೋಪಿಗಳ ಬಂಧನದಲ್ಲಿ ವಿಜಯಪುರ ಜಿಲ್ಲೆಯು ಪ್ರಥಮ ಸ್ಥಾನದಲ್ಲಿದೆ ಎಂದು ಅವರು ಈ ಸಂದರ್ಭದಲ್ಲಿ ಶ್ಲಾಘಿಸಿದರು. ಎಸ್‌ಪಿ ಲಕ್ಷ್ಮಣ ನಿಂಬರಗಿ ಸೇರಿದಂತೆ ಹಲವು ಜನ ಹಿರಿಯ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

# ನಾಗರಿಕರಿಗೆ ಸುಲಭ, ವೇಗದ ಆಧಾರ ಸೇವೆ: ಜಿಲ್ಲಾಧಿಕಾರಿ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**



ಭಾರತೀಯ ವಿಶಿಷ್ಟ ಗುರುತಿನ ಪ್ರಾಧಿಕಾರದ ವತಿಯಿಂದ ನಗರದ ವಿದ್ಯಾಗಿರಿಯಲ್ಲಿ ನೂತನವಾಗಿ ಸ್ಥಾಪಿಸಲಾದ ಆಧಾರ ಸೇವಾ ಕೇಂದ್ರವನ್ನು ಜಿಲ್ಲಾಧಿಕಾರಿ ಸಂಗಪ್ಪ ಬುಧವಾರ ಉದ್ಘಾಟಿಸುವ ಮೂಲಕ ಸಾರ್ವಜನಿಕ ಸೇವೆಗೆ ಸಮರ್ಪಿಸಿದರು.

ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಆಧಾರ ಹೊಸ ನೋಂದಣಿ, ತಿದ್ದುಪಡಿ, ಮೊಬೈಲ್ ಸಂಖ್ಯೆ ಮತ್ತು ವಿಳಾಸ ಬದಲಾವಣೆ ಸೇರಿದಂತೆ ವಿವಿಧ ಸೇವೆಗಳು ಒಂದೇ ಸೂರಿನಡಿ ಲಭ್ಯವಾಗುವದರಿಂದ ಸಾರ್ವಜನಿಕರಿಗೆ ಅನುಕೂಲವಾಗಲಿದೆ. ಸ್ಥಳೀಯವಾಗಿ ನಾಗರಿಕರಿಗೆ ಸುಲಭ ಹಾಗೂ ವೇಗದ ಆಧಾರದ ಸೇವೆ ಪಡೆಯುವ ಅವಕಾಶ ಸಿಗಲಿದೆ ಎಂದು ಹೇಳಿದರು.

ಡಿಜಿಟಲ್ ಸೇವೆಗಳನ್ನು ಜನಸಾಮಾನ್ಯರಿಗೆ ಇನ್ನಷ್ಟು ಸುಲಭವಾಗಿ ತಲುಪಿಸುವ ಉದ್ದೇಶದಿಂದ ಇಂತಹ ಸೇವಾ ಕೇಂದ್ರಗಳನ್ನು ಜಿಲ್ಲಾ ಮಟ್ಟದಲ್ಲಿ ಸ್ಥಾಪಿಸಲಾಗುತ್ತಿದೆ. ಸರಕಾರದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಆಧಾರ ಪ್ರಮುಖ ದಾಖಲೆಯಾಗಿರುವದರಿಂದ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಕರೆ ನೀಡಿದರು.

ಆಧಾರ ಸೇವಾ ಕೇಂದ್ರದ ಕ್ಲಸ್ಟರ ವ್ಯವಸ್ಥಾಪಕ ಶ್ಯಾಮಸುಂದರ್ ಮಾತನಾಡಿ, ಸಾರ್ವಜನಿಕರಜಾದಿನಗಳನ್ನು ಹೊರತುಪಡಿಸಿ ವಾರದ 7 ದಿನಗಳ ಕಾಲ ಬೆಳಿಗ್ಗೆ 9.30 ರಿಂದ ಸಮಜೆ 5.30 ವರೆಗೆ ಕಾರ್ಯನಿರ್ವಹಿಸುತ್ತದೆ. ಈ ಆಧಾರ ಸೇವಾ ಕೇಂದ್ರಗಳನ್ನು ನೇರವಾಗಿ ಯುಐಡಿಎಐ ನಿರ್ವಹಿಸುತ್ತದೆ. ಈ ಕೇಂದ್ರವನ್ನು ಸಂಪೂರ್ಣವಾಗಿ ಎಲ್ಲರನ್ನೂ ಒಳಗೊಳ್ಳುವ ಮತ್ತು ನಿವಾಸಿ ಸ್ನೇಹಿಯಾಗಿ ವಿನ್ಯಾಸಗೊಳಿಸಲಾಗಿದೆ. ವೀಲ್‌ಚೇರ್ ಪ್ರವೇಶ, ಪ್ರವೇಶಿಸಬಹುದಾದ ವಿಶ್ರಾಂತಿ ಕೊಠಡಿಗಳು ಮತ್ತು ಮೀಸಲಾದ ಕುಂದುಕೊರತೆ ನಿವಾರಣಾ ವ್ಯವಸ್ಥೆಯಂತಹ ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದರು.

5 ರಿಂದ 17 ವರ್ಷ ವಯಸ್ಸಿನ ಮಕ್ಕಳಿಗೆ ಕಡ್ಡಾಯ ಬಯೋಮೆಟ್ರಿಕ್ ನವೀಕರಣಗಳನ್ನು ಸೆಪ್ಟೆಂಬರ 30 ವರೆಗೆ ಉಚಿತವಾಗಿ ನೀಡಲಾಗುತ್ತಿದೆ. ಈ ಸೌಲಭ್ಯವು ಶಾಲಾ ಶಿಬಿರಗಳು ಮತ್ತು ಆಧಾರ ಸೇವಾ ಕೇಂದ್ರಗಳಲ್ಲಿ ಲಭ್ಯವಿದೆ. ಆಧಾರ ಸೇವಾ ಕೇಂದ್ರವನ್ನು ಎ.ಎಸ್.ಕೆ ವ್ಯವಸ್ಥಾಪಕರು ನಿರ್ವಹಿಸಲಿದ್ದು, ಕುಂದುಕೊರತೆಗಳನ್ನು ಸ್ವೀಕರಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಕಳುಹಿಸಲಾಗುತ್ತದೆ. ಅಲ್ಲದೇ ಸಕಾಲದಲ್ಲಿ ಪರಿಹಾರ ಬಗ್ಗೆ ಖಚಿತಪಡಿಸಿಕೊಳ್ಳಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ಆಧಾರ ಸೇವಾ ಕೇಂದ್ರದ ಯುಡಿಐಡಿ ವಿಭಾಗದ ಅಧಿಕಾರಿ ಅರ್ಚನಾ, ಸಹಾಯಕ ವ್ಯವಸ್ಥಾಪಕ ಪ್ರಸಾದ, ಆಫರೇಶನಲ್ ಮ್ಯಾನೇಜರ್ ಅಭಿಷೇಕ ಕೊಣ್ಣೂರ, ಜಿಲ್ಲಾ ಆಧಾರ ಕನ್ಸಲ್ಟಂಟ ಸಿದ್ದಪ್ಪ ಸೇರಿದಂತೆ ಇತರರು ಇದ್ದರು.

# ಜನ ಸೇವೆಯೇ ರೋಟರಿ ಸಂಸ್ಥೆಯ ಮುಖ್ಯ ಉದ್ದೇಶ

• **ಮಲ್ಲಮ್ಮ ನುಡಿ ವಾರ್ತೆ ಅಥಣಿ**




ಅಥಣಿ ರೋಟರಿ ಸಂಸ್ಥೆಯಿಂದ ತಾಲೂಕಿನಲ್ಲಿ ಉತ್ತಮ ಸಾಮಾಜಿಕ ಸೇವಾ ಕಾರ್ಯಗಳನ್ನು ಮಾಡುತ್ತ ಬರಲಾಗುತ್ತಿದೆ. ಜನಸಾಮಾನ್ಯರಿಗೆ ಸೇವೆ ನೀಡುವುದೇ ರೋಟರಿ ಸಂಸ್ಥೆಯ ಉದ್ದೇಶವಾಗಿದೆ. ವರ್ಷದ 365 ದಿನವೂ ಸಹ ಹೃದಯದಿಂದ ಕೆಲಸ, ಕಾರ್ಯ ಮಾಡಿದರೆ ಎಲ್ಲ ಕಾರ್ಯಗಳು ಯಶಸ್ವಿಯಾಗುತ್ತವೆ ಎಂದು ಬೆಳಗಾವಿ ರೋಟರಿ ಕ್ಲಬ್‌ನ ಜಿಲ್ಲಾ ಪ್ರಾಂತಪಾಲ ಅಶೋಕ ನಾಯಿಕ ಹೇಳಿದರು.

ಅವರು ರವಿವಾರ ನಗರದ ರಾಯಲ್ ಹಾಲ್‌ದಲ್ಲಿ ಹಮ್ಮಿಕೊಂಡಿದ್ದ ಅಥಣಿ ರೋಟರಿ ಕ್ಲಬ್ ನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡುತ್ತಾ, ರೋಟರಿ ಸಂಸ್ಥೆಯಿಂದ ಜನರಿಗೆ ಅನುಕೂಲವಾಗುವಂತಹ ಉತ್ತಮ ಯೋಜನೆಗಳನ್ನು ರೂಪಿಸಿ, ಅದಕ್ಕೆ ಬೇಕಾಗುವ ಅನುದಾನವನ್ನು ಜಿಲ್ಲಾ ರೋಟರಿ ಮತ್ತು ಅಂತರಾಷ್ಟ್ರೀಯ ರೋಟರಿ ಸಂಸ್ಥೆಯಿಂದ ಒದಗಿಸುವ ಜವಾಬ್ದಾರಿ ನನ್ನ ಮೇಲಿದೆ. ವಿಚಾರ ದೊಡ್ಡದಾಗಿರಲಿ. ಅದೇ ರೀತಿ ಕೆಲಸ, ಕಾರ್ಯಗಳು ಕೂಡ ನಾಡಿಗೆ ಮಾದರಿಯಾಗುವಂತ ಕಾರ್ಯಕ್ರಮಗಳನ್ನು ಅಥಣಿ ರೋಟರಿ ಕ್ಲಬ್ ವತಿಯಿಂದ ಈ ವರ್ಷ ಆಗಬೇಕು ಎಂದು ಹೇಳಿದರು.

ಅಥಣಿ ರೋಟರಿ ಕ್ಲಬ್ ಸಂಸ್ಥಾಪಕ ಅಧ್ಯಕ್ಷ ಗಜಾನನ ಮಂಗಸೂಳಿ ಮಾತನಾಡಿ, ಕಳೆದ 28 ವರ್ಷಗಳಿಂದ ರೋಟರಿ ಕ್ಲಬ್ ತಾಲೂಕಿನಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುವ ಜತೆಗೆ ಈಗಾಗಲೆ ರೋಟರಿಯಿಂದ ಉದ್ಯಾನವನ ಆರಂಭಿಸಲಾಗಿದೆ. ರೋಗಿಗಳಿಗೆ ಅನುಕೂಲವಾಗಲೆಂದು ಯಶಸ್ವಿನಿ ಆಸ್ಪತ್ರೆಯಲ್ಲಿ ರೋಟರಿ ಸಂಸ್ಥೆ ಹಾಗೂ ಇತರರ ಸಹಯೋಗದೊಂದಿಗೆ ಡಯಾಲಿಸಿಸ್ ಕೇಂದ್ರ ತೆರೆಯಲಾಗಿದೆ. ಇದು ಜನರಿಗೆ ಹೆಚ್ಚು ಅನುಕೂಲವಾಗಿದೆ. ಮುಂದಿನ ದಿನಗಳಲ್ಲಿ ರೋಟರಿ ಭವನ ನಿರ್ಮಾಣ ಕಾರ್ಯ ನಡೆಯಲಿದೆ. ಹಲವು ವಿದಾಯಕ ಕಾರ್ಯಕ್ರಮಗಳಿಗೆ ಹೆಚ್ಚಿನ ನೆರವು ಜಿಲ್ಲಾ ರೋಟರಿಯಿಂದ ನೀಡಬೇಕು ಎಂದು ಮನವಿ ಮಾಡಿದರು.

ರೋಟರಿ ಸಂಸ್ಥೆಯ ನೂತನ ಅಧ್ಯಕ್ಷ ಡಾ. ಸಿದ್ದಪ್ಪ ಸಂಕ್ರಟ್ಟಿ ಮಾತನಾಡಿ, ರೋಟರಿ ಸಂಸ್ಥೆಯು ಜನ ಸೇವೆ ಹಾಗೂ ಸಾಮಾಜಿಕ ಸುಧಾರಣೆಯ ಕನಸಿನೊಂದಿಗೆ ಬೆಳೆದು ಬಂದ ಸಂಸ್ಥೆಯಾಗಿದೆ. ರೋಟರಿ ಸಂಸ್ಥೆಯ ಎಲ್ಲ ಸದಸ್ಯರ ಸಹಕಾರದೊಂದಿಗೆ ತಾಲೂಕಿನಲ್ಲಿ ಉತ್ತಮ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ರಕ್ತದಾನ ಶಿಬಿರಗಳು, ಗಿಡಮರ ಬೆಳೆಸುವ ಅಭಿಯಾನ, ಉಚಿತ ವೈದ್ಯಕೀಯ ಶಿಬಿರಗಳು, ಇನ್ನಿತರ ಜನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದು ಹೇಳಿದರು.

**ನೂತನ ಪದಾಧಿಕಾರಿಗಳ ಪದಗ್ರಹಣ:** ಅಧ್ಯಕ್ಷರಾಗಿ ಡಾ. ಸಿದ್ದಪ್ಪ ಸಂಕ್ರಟ್ಟಿ, ಕಾರ್ಯದರ್ಶಿಯಾಗಿ ಚಂದ್ರಶೇಖರ ವಾಂಗಿ, ಮತ್ತು ಖಜಾಂಚಿಯಾಗಿ ಪ್ರಫುಲ ಪಡನಾಡ ಪದಗ್ರಹಣ ಮಾಡಿದರೆ ಇನ್ನರವಿಲ್ ಕ್ಲಬ್ ನೂತನ ಅಧ್ಯಕ್ಷೆಯಾಗಿ ಡಾ. ಮೊನಿಷಾ ಸಂಕ್ರಟ್ಟಿ, ಕಾರ್ಯದರ್ಶಿಯಾಗಿ ಕವಿತಾ ವಾಂಗಿ ಮತ್ತು ಖಜಾಂಚಿಯಾಗಿ ಡಾ. ಅಕ್ಷತಾ ಪಡನಾಡ ಪದಗ್ರಹಣ ಮಾಡಿದರು.

ಮಾಜಿ ಅಧ್ಯಕ್ಷ ಸಚಿನ ದೇಸಾಯಿ ಮಾತನಾಡಿ, ಎಲ್ಲರ ಸಹಕಾರದಿಂದ ಸಾಕಷ್ಟು ಜನೋಪಯೋಗಿ ಕಾರ್ಯಗಳನ್ನು ಮಾಡಿದ್ದೇವೆ ಎಂದು ವರದಿ ವಾಚನ ಮಾಡಿದರು. ಇದೇ ಸಂದರ್ಭದಲ್ಲಿ ಪತ್ರಿಕಾ ವಿತರಕರಿಗೆ ರೇನ್‌ಕೋಟ್ ನೀಡಿದರು ಮತ್ತು ಹಣ್ಣಿನ ಸಸಿಗಳ ವಿತರಣೆ ನಡೆಯಿತು. ಈ ವೇಳೆ ಸಮಾರಂಭದಲ್ಲಿ ಸಹಾಯಕ ಪ್ರಾಂತಪಾಲ ಮೇಘರಾಜ ಪರಮಾರ, ಡಾ. ಪಿ.ಪಿ. ಮಿರಜ, ಅರುಣ ಯಲಗುದ್ರಿ, ಭರತ ಸೊಮಯ್ಯಾ, ಅರುಣ ಸೌದಾಗರ, ಶ್ರೀಕಾಂತ ಅಥಣಿ, ಡಿ.ಡಿ. ಮೆಕನಮರಡಿ, ಅನೀಲ ದೇಶಪಾಂಡೆ, ಡಾ. ಆನಂದ ಗುಂಜಿಗಾವಿ, ಡಾ. ಆನಂದ ಕುಲಕರ್ಣಿ, ಆನಂದ ಟೋಣಪಿ, ರಾವಸಾಬ ಐಹೊಳೆ, ಬಾಹುಬಲಿ ಅಸ್ಕಿ, ಸ್ಮೀತಾ ದಳವಿ, ಪೂರ್ಣಿಮಾ ಪಾಂಗಿ, ಮದು ಮಂಗಸೂಳಿ, ಶೇಖರ ಕೊಲಾರ, ಸಂತೋಷ ಬೊಮ್ಮಣವರ ಸೇರಿದಂತೆ ಮತ್ತಿತರರರು ಇದ್ದರು.



**ಚಿಟಗುಪ್ಪ:** ಪಟ್ಟಣದ ಸಮಾಜ ಸೇವಕರು, ಪರಿಸರ ಸಂರಕ್ಷಕರಾದ ಮಹಮ್ಮದ್ ಅಸ್ಲಾಂಮಿಯಾ ಅವರ 60ನೇ ವರ್ಷದ ಜನ್ಮ ದಿನಾಚರಣೆ ಪ್ರಯುಕ್ತ ಬುಧವಾರ ಸಂಜೆ ಹುಮನಾಬಾದ ಸಾಮಾಜಿಕ ವಲಯ ಅರಣ್ಯಾಧಿಕಾರಿ ಪ್ರಕಾಶ ನಿಪ್ಪಾಣಿ, ಹಾಗೂ ಹಿರಿಯ ಪತ್ರಕರ್ತರು, ಪರಿಸರವಾದಿಗಳಾದ ಶೈಲೇಂದ್ರ ಕಾವಡಿ ಅವರು ಶಾಲು ಹೊದಿಸಿ, ಸಸಿ ನೀಡಿ ಜನ್ಮ ದಿನದ ಶುಭಾಶಯಗಳು ಕೋರಿದರು. ಈ ಸಂದರ್ಭದಲ್ಲಿ ಪತ್ರಕರ್ತ ರಾಜಕುಮಾರ ಆರ್. ಹಡಪದ, ಚಂದ್ರಶೇಖರ ಪಾಟೀಲ್ ಬನ್ನಳ್ಳಿ, ಜಗದೀಶ ಜಲಸಂಗಿ ಉಪಸ್ಥಿತರಿದ್ದರು.

## ಎನ್‌ವ್ಹಿಎಸ್ ಕ್ಲಸ್ಟರ್ ಮಟ್ಟದ ಬಾಲ್ ಗೇಮ್ಸ್ ಕ್ರೀಡಾಕೂಟ






**ಮುದಗಲ್:** ಸಮೀಪದ ಕನ್ನಾಪುರಟ್ಟಿ ವ್ಯಾಪ್ತಿಗೆ ಒಳಪಡುವ ಜವಾಹರ ನವೋದಯ ವಿದ್ಯಾಲಯದ ಆವರಣದಲ್ಲಿ 37ನೇ ಎನ್ ವ್ಹಿ ಎಸ್ ಕ್ಲಸ್ಟರ್ ಮಟ್ಟದ ಬಾಲ್ ಗೇಮ್ಸ್ ಮೀಟ್ 2026 ಕ್ರೀಡಾಕೂಟ ಆಯೋಜಿಸಲಾಗಿದೆ ಎಂದು ಪಿಎಂಶ್ರೀ ಜವಾಹರ ನವೋದಯ ಸಲಹಾ ಸಮಿತಿ ಹಾಗೂ ಪ್ರಾಂಶುಪಾಲ ಮುನೀಂದ್ರ ಕುಮಾರ ತಿಳಿಸಿದರು. ಕ್ರೀಡಾಕೂಟದ ಕಾರ್ಯಕ್ರಮ ಲಿಂಗಸುಗೂರು ಸಹಾಯಕ ಆಯುಕ್ತ ಬಸವಣ್ಣಪ್ಪ ಕಲಶೆಟ್ಟಿ ಉದ್ಘಾಟಿಸಲಿದ್ದಾರೆ. ಬಿಜಾಪುರ ಕ್ಲಸ್ಟರ್ ವ್ಯಾಪ್ತಿಗೆ ಒಳಪಡುವ ರಾಯಚೂರು, ಕೊಪ್ಪಳ, ಗದಗ, ಬಾಗಲಕೋಟೆ, ಯಾದಗಿರಿ, ಕಲ್ಬುರ್ಗಿ ಒಂದು– ಎರಡು ಹಾಗೂ ಬೀದರ್, ಬಿಜಾಪುರ, ಬಳ್ಳಾರಿ ಜಿಲ್ಲಾಗಳ ನೂರಾರು ಪ್ರತಿಭಾನ್ವಿತ ನೂರಾರು ಕ್ರೀಡಾಪಟುಗಳು, ದೈಹಿಕ ಶಿಕ್ಷಕರು ಹಾಗೂ ಸಿಬ್ಬಂದಿಗಳು ವಾಲಿಬಾಲ್, ಹ್ಯಾಂಡ್ ಬಾಲ್, ಬಾಸ್ಕೆಟ್ ಬಾಲ್ ಕ್ರೀಡಾಕೂಟ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕ್ರೀಡಾಪಟುಗಳನ್ನು ಹುರಿದುಂಬಿಸಲು ಸರ್ವರೂ ಭಾಗಿಯಾಗಿ ಕ್ರೀಡಾ–ಕೂಟ ಕಾರ್ಯಕ್ರಮ ಯಶಸ್ವಿಗೊಳಿಸಲು ತಿಳಿಸಿದ್ದಾರೆ.



ಬಸವಕಲ್ಯಾಣ: ಇಲ್ಲಿನ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನೂತನ ತಾಲೂಕಾ ಅಧ್ಯಕ್ಷರಾದ ಮಾರ್ಥಂಡ್ ಜೋಶಿ ಅವರಿಗೆ ತಾಲೂಕಿನ ಗದಲೇಗಾಂವ ಗ್ರಾಮದ ಶಿಕ್ಷಣ ಮತ್ತು ಸಾಮಾಜಿಕ ಚಿಂತಕರಾದ ಡಾ. ಕೆ. ಜಿ. ಶರಣಪ್ಪ ಗದಲೇಗಾಂವ ಅವರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಶಿವರಾಜ ಬಾಲಕಿಲೆ. ಸಂಚಾರಿ ಪೊಲೀಸ್ ಠಾಣೆಯ ಅಶೋಕ ಸಜ್ಜನ್ ಪತ್ರಕರ್ತರಾದ ಡಿ. ಕೆ. ಪ್ರಹ್ಲಾಜಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

## ಹಸುಗೂಸಿಗೆ ಜೀವರಕ್ಷಕ ಶಸ್ತ್ರಚಿಕಿತ್ಸೆ



**ಬೆಂಗಳೂರು:** ನವಜಾತ ಶಿಶುಗಳಲ್ಲಿ ಕಾಣಿಸಿಕೊಳ್ಳುವ ಅತ್ಯಂತ ಅಪರೂಪದ ಹಾಗೂ ಅಪಾಯಕಾರಿ 'ಇನ್‌ಫೆಂಟೈಲ್ ಫೈಬ್ರೊಸಾರ್ಕೋಮಾ' ಕ್ಯಾನ್ಸರ್‌ನಿಂದ ಬಳಲುತ್ತಿದ್ದ 28 ದಿನದ ಹಸುಗೂಸೊಂದಕ್ಕೆ ಬೆಂಗಳೂರಿನ ಎಚ್‌ಸಿಜಿ ಕ್ಯಾನ್ಸರ್ ಸೆಂಟರ್ ಯಶಸ್ವಿ ಶಸ್ತ್ರಚಿಕಿತ್ಸೆ ನೆರವೇರಿಸಿ ಮರುಜೀವ ನೀಡಿದೆ. ಕೈ ಕತ್ತರಿಸುವುದೇ ಅಂತಿಮ ಮಾರ್ಗ ಎಂದು ಇತರ ಆಸ್ಪತ್ರೆಗಳು ಕೈಚೆಲ್ಲಿದ್ದ ಪ್ರಕರಣದಲ್ಲಿ, ಎಚ್‌ಸಿಜಿ ಆಸ್ಪತ್ರೆಯ 14–16 ಸೂಪರ್–ಸ್ಪೆಷಲಿಸ್ಟ್ ವೈದ್ಯರ ತಂಡವು ಸುಧಾರಿತ ತಂತ್ರಜ್ಞಾನದ ನೆರವಿನೊಂದಿಗೆ ಮಗುವಿನ ಜೀವ ಹಾಗೂ ಕೈ ಎರಡನ್ನೂ ಉಳಿಸುವಲ್ಲಿ ಯಶಸ್ವಿಯಾಗಿದೆ. ಸುಮಾರು 30 ರಿಂದ 35 ಲಕ್ಷ ರೂಪಾಯಿ ವೆಚ್ಚದ ಈ ಅತ್ಯಾಧುನಿಕ ಚಿಕಿತ್ಸಾ ವೆಚ್ಚವನ್ನು ಭರಿಸಲಾಗದೆ ಪರದಾಡುತ್ತಿದ್ದ ಆರ್ಥಿಕವಾಗಿ ಹಿಂದುಳಿದ ಕುಟುಂಬಕ್ಕೆ, ಆಸ್ಪತ್ರೆ, ದಾನಿಗಳು, ಸ್ನೇಹಿತರು ಹಾಗೂ ಹಿತೈಷಿಗಳು ಒಗ್ಗೂಡಿ ಆರ್ಥಿಕ ನೆರವು ಒದಗಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ಬೇರೊಂದು ಆಸ್ಪತ್ರೆಯಲ್ಲಿ ಜನಿಸಿದ ಈ ಹೆಣ್ಣು ಮಗುವಿನ ಬಲ ಮುಂಗೈನಲ್ಲಿ ಆರಂಭದಲ್ಲಿ ಸಣ್ಣ ಊತವೊಂದಿತ್ತು. ಆದರೆ, ಕೆಲವೇ ದಿನಗಳಲ್ಲಿ ಅದು ಬರೋಬ್ಬರಿ 11.3 9.8 ಸೆಂ.ಮೀ ಗಾತ್ರದ ಬೃಹತ್ ಟ್ಯೂಮರ್ ಆಗಿ ಬೆಳೆದುಬಿಟ್ಟಿತ್ತು. ಎಚ್‌ಸಿಜಿಗೆ ದಾಖಲಾದಾಗ ಮಗು ತೀವ್ರ ರಕ್ತಹೀನತೆಯಿಂದ ಬಳಲುತ್ತಿತ್ತು ಹಾಗೂ ವೇಗವಾಗಿ ಬೆಳೆಯುತ್ತಿದ್ದ ಟ್ಯೂಮರ್‌ನಿಂದಾಗಿ ಸ್ಥಿತಿ ಅತ್ಯಂತ ಗಂಭೀರವಾಗಿತ್ತು. ಎಚ್‌ಸಿಜಿ ಆಸ್ಪತ್ರೆಯ ಆರ್ಥೋಪೆಡಿಕ್ ಆಂಕೊಲಾಜಿ ವಿಭಾಗದ ಮುಖ್ಯಸ್ಥರಾದ ಡಾ. ಪ್ರಮೋದ್ ಎಸ್. ಚಿಂದರ್, ಅರಿವಳಿಕೆ ವಿಭಾಗದ ಮುಖ್ಯಸ್ಥ ಡಾ. ಸುನಿಲ್ ಕುಮಾರ್ ಹೆಚ್.ಆರ್ ಮತ್ತು ಪ್ಲಾಸ್ಟಿಕ್ ಸರ್ಜರಿ ತಂಡವು ಮಗುವಿನ ತಪಾಸಣೆ ನಡೆಸಿತು.

# ಮಂಜಗುಣಿ–ಗಂಗಾವಳಿ ಸೇತುವೆಯಲ್ಲಿ ಭಾರಿ ವಾಹನಗಳ ಸಂಚಾರ: ಹೆಚ್ಚುತ್ತಿರುವ ಅಪಘಾತ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಮಂಜಗುಣಿ–ಗಂಗಾವಳಿ ಸೇತುವೆ ಆರಂಭಗೊಂಡಾಗಿನಿಂದ ಸಾಕಷ್ಟು ಅಪಘಾತಗಳು ನಡೆಯುತ್ತ ಬಂದರೂ ಇದುವರೆಗೂ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಯಾವುದೇ ಕ್ರಮ ಕೈಗೊಳ್ಳದೇ ಇರುವುದು ಈಗ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಅಂಕೋಲಾದಿಂದ ಮಂಜಗುಣಿಯವರೆಗೆ ತೆರಳುವಾಗ ರಸ್ತೆಯು ಕಿರಿದಾಗಿದ್ದು, ಅನೇಕ ಅಪಾಯಕಾರಿ ತಿರುವುಗಳಿವೆ. ಹಾಗೇ ರಸ್ತೆಯ ಪಕ್ಕದಲ್ಲಿಯೇ ಸಾಕಷ್ಟು ಬಂಡೆಕಲ್ಲುಗಳು ಇರುವುದರಿಂದ ಸ್ವಲ್ಪ ಯಾಮಾರಿದರೂ ಸಾವು ಕಟ್ಟಿಟ್ಟ ಬುತ್ತಿ. ಕಾರವಾರದಿಂದ ಬೆಂಗಳೂರಿಗೆ ತೆರಳುವ ಎಲ್ಲ ಬಸ್‌ಗಳು ಈ ಮಾರ್ಗವಾಗಿಯೇ ಗೋಕರ್ಣಕ್ಕೆ ತೆರಳಿ ಅಲ್ಲಿಂದ ಹೊರಡುತ್ತವೆ.

ಸಾರಿಗೆ ಸಂಸ್ಥೆಯ ಬಸ್ ಹಾಗೂ ಖಾಸಗಿ ಬಸ್‌ಗಳು ಕೂಡ ಇದೇ ರಸ್ತೆಯಲ್ಲಿ ಬರುವುದರಿಂದ ರಾತ್ರಿಯ ಸಮಯದಲ್ಲಿ ದೊಡ್ಡ ವಾಹನದ ಬೆಳಕು ಬೈಕ್ ಹಾಗೂ ಇತರೆ ವಾಹನಗಳಿಗೆ ಸರಿಯಾಗಿ ಕಾಣದಿದ್ದಾಗ ರಸ್ತೆ ಪಕ್ಕಕ್ಕೆ ಇಳಿಸುತ್ತಾರೆ. ಹಾಗೇ ಎದುರಿಗೆ ಬರುವ ದೊಡ್ಡ ದೊಡ್ಡ ಬಸ್ ಹಾಗು ಇತರೆ ವಾಹನಗಳು ವಿಶೇಷವಾಗಿ ಬೆಳಕನ್ನು ಜೋಡಿಸಿರುತ್ತಾರೆ.





ಸ್ಥಳೀಯರು ಇಲ್ಲಿನ ಅಪಾಯದ ಬಗ್ಗೆ ಶಾಸಕ ಮತ್ತು ಅಧಿಕಾರಿಗಳ ಗಮಕ್ಕೆ ತಂದರೂ ಇದುವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ. ವಾರಕ್ಕೆ ಒಂದೆರಡು ಅಪಘಾತಗಳು ನಡೆಯುತ್ತಲೇ ಬರುತ್ತವೆ. ಹಲವರು ಕೈಕಾಲುಗಳ ಮೂಳೆಗಳನ್ನು ಮುರಿದುಕೊಂಡಿದ್ದಾರೆ. ರಾತ್ರಿ ಸಮಯದಲ್ಲಿ ಅತಿಹೆಚ್ಚು ದೊಡ್ಡ ವಾಹನಗಳು ಸಂಚರಿಸುವುದರಿಂದ ದ್ವಿಚಕ್ರ ವಾಹನದವರು ಈ ಮಾರ್ಗದಲ್ಲಿ ಸಂಚರಿಸಲು ಭಯಗೊಳ್ಳುವಂತಾಗಿದೆ.

ರಸ್ತೆಯ ಅಕ್ಕಪಕ್ಕದಲ್ಲಿನ ಕಲ್ಲುಗಳನ್ನಾದರೂ ಕೂಡ ಅಧಿಕಾರಿ ವರ್ಗದವರು ತೆರವುಗೊಳಿಸಬಹುದು. ಆದರೆ ಯಾರೂ ಕೂಡ ಇದರ ಬಗ್ಗೆ ಕಾಳಜಿ ವಹಿಸುತ್ತಿಲ್ಲ ಎನ್ನುವುದು ನಿಜಕ್ಕೂ ವಿಪರ್ಯಾಸದ ಸಂಗತಿ. ಈ ಸೇತುವೆ ನಿರ್ಮಾಣದಿಂದ ಹೊರಗಿನವರಿಗೆ ಹೆಚ್ಚು ಅನುಕೂಲವಾಯಿತೆ ಹೊರತು ಸ್ಥಳೀಯರು ವಾಹನ ಸಂಚಾರ ಮಾಡುವುದನ್ನು ನೋಡಿ ಭಯಗೊಳ್ಳುವಂತಾಗಿದೆ. ಹೀಗಾಗಿ ಶಾಸಕ ಸತೀಶ ಸೈಲ್ ಅವರು ಸಂಬಂಧಪಟ್ಟ ಇಲಾಖೆಯವರ ಜತೆ ಮಾತನಾಡಿ ರಸ್ತೆ ಅಗಲೀಕರಣಕ್ಕೆ ಮುಂದಾಗಬೇಕಾಗಿದೆ.

ತಾತ್ಕಾಲಿಕವಾಗಿ ರಸ್ತೆಯ ಅಕ್ಕಪಕ್ಕದಲ್ಲಿ ಇರುವ ಕಲ್ಲುಗಳನ್ನು ತೆರವುಗೊಳಿಸಿ ಮಣ್ಣನ್ನು ಹಾಕಿದರೆ ತಕ್ಕ ಮಟ್ಟಿಗಾದರೂ ಸ್ಥಳೀಯರಿಗೆ ಸಮಾಧಾನವಾಗುತ್ತಿತ್ತು. ಆದರೆ ಇದನ್ನು ಕೂಡ ಮಾಡದೇ ಇರುವುದು ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದೆ. ಇನ್ನು ತೀರಾ ಅಪಾಯಕಾರಿ ಎನಿಸುವ ತಿರುವುಗಳನ್ನಾದರೂ ತಾತ್ಕಾಲಿಕವಾಗಿ ಸರಿಪಡಿಸಿದರೆ ಸ್ಥಳೀಯರು ನಿಟ್ಟುಸಿರು ಬಿಡುತ್ತಿದ್ದರು.

> ಮಂಜಗುಣಿ–ಗಂಗಾವಳಿ ಸೇತುವೆ ಉದ್ಘಾಟನೆಗೊಂಡ ನಂತರ ಎಲ್ಲ ಖಾಸಗಿ ಬಸ್‌ಗಳು ರಾತ್ರಿ ವೇಳೆ ಈ ಮಾರ್ಗವಾಗಿಯೇ ಸಂಚರಿಸುತ್ತವೆ. ರಸ್ತೆಯು ಕಿರಿದಾಗಿದ್ದು, ಹಾಗೇ ಸಾಕಷ್ಟು ಅಪಾಯಕಾರಿ ತಿರುವುಗಳಿರುವುದರಿಂದ ಯಾವ ಸಮಯದಲ್ಲಿ ಅಪಘಾತ ಉಂಟಾಗುತ್ತದೆಯೋ ಎಂದು ಭಯಗೊಂಡು ಸಣ್ಣ ವಾಹನದವರು ಚಲಾಯಿಸುವಂತಾಗಿದೆ. ಈ ಬಗ್ಗೆ ಅಧಿಕಾರಿಗಳು, ಜನಪ್ರತಿನಿಧಿಗಳು ಕ್ರಮ ಕೈಗೊಳ್ಳಬೇಕಾಗಿದೆ.
>
> –ಶ್ರೀಪಾದ ಟಿ. ನಾಯ್ಕ
> ಗಾಯಾಳು, ಮಂಜಗುಣಿ

## ಶಿಕ್ಷಣಕ್ಕಾಗಿ 18 ಕೋಟಿ ಮೀಸಲು: ಡಿ. ವಜ್ಜಲ್

• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಕೆಕೆಆರ್‌ಡಿಬಿ ಯೋಜನೆಯಲ್ಲಿ ಸರ್ಕಾರ ಪ್ರತಿ ವರ್ಷ ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ 18 ಕೋಟಿ ಮೀಸಲಿಡುತ್ತದೆ ಎಂದು ಲಿಂಗಸುಗೂರು ಕ್ಷೇತ್ರದ ಶಾಸಕ ಡಾ. ಮಾನಪ್ಪ ಡಿ. ವಜ್ಜಲ್ ಬುಧವಾರ ಹೇಳಿದರು.

ಪಟ್ಟಣದ ಕೆಇಬಿ ಹಿಂಬದಿಯಲ್ಲಿ ನೂತನವಾಗಿ ನಿರ್ಮಿಸಲಾದ ಡಿ. ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ರೂ. 2.50ಕೋಟಿ ವೆಚ್ಚದಲ್ಲಿ ನಿರ್ಮಿಸಿದ ಕಟ್ಟಡ ಉದ್ಘಾಟನೆ ಮಾಡಿ ಮಾತನಾಡಿದ ಅವರು 2019–20ನೇ ಸಾಲಿನ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಅನುದಾನದ ಅಡಿ ನಿರ್ಮಿಸಲಾದ ವಿದ್ಯಾರ್ಥಿನಿಯರ ವಸತಿ ನಿಲಯದಲ್ಲಿ 50 ವಿದ್ಯಾರ್ಥಿಗಳಿಗೆ ಅವಕಾಶವಿದೆ. ಇನ್ನೂ 50 ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಸರ್ಕಾರಕ್ಕೆ ಮೊರೆ ಹೋಗುತ್ತೇವೆ. ಕಾಂಗ್ರೆಸ್ ಸರ್ಕಾರ ಭಾಗ್ಯದ ಹೆಸರಲ್ಲಿ ಅನುದಾನವಿಲ್ಲದೆ ರಾಜ್ಯದ ಪ್ರಗತಿ ಕುಂಟಿತವಾಗುತ್ತಿದೆ. ವಸತಿ ನಿಲಯದಲ್ಲಿ ಮಕ್ಕಳಿಗೆ ಗುಣಮಟ್ಟದ ಆಹಾರ, ಸ್ವಚ್ಛ ಪರಿಸರ ಹಾಗೂ ರಾತ್ರಿ ವೇಳೆಯಲ್ಲೂ ಅಧ್ಯಯನಕ್ಕೆ ಅಗತ್ಯ ವ್ಯವಸ್ಥೆ ಹಾಗೂ ಗ್ರಾಮೀಣ ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ವಿದ್ಯಾರ್ಥಿನಿಯರಿಗೆ ಸುರಕ್ಷಿತ ಹಾಗೂ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸುವ ಉದ್ದೇಶದಿಂದ ಈ ವಸತಿ ನಿಲಯ ನಿರ್ಮಾಣಗೊಂಡಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳೆರಡೂ ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ಪ್ರತಿ ವರ್ಷ ಕೆಕೆಆರ್‌ಡಿಬಿ ಯೋಜನೆಯಲ್ಲಿ 18 ಕೋಟಿ ಮೀಸಲಿಡುತ್ತವೆ. ಹೆಚ್ಚಿನ ಅನುದಾನ, ವಿದ್ಯಾರ್ಥಿ ವೇತನ ಹಾಗೂ ಮೂಲಸೌಕರ್ಯಗಳನ್ನು ಕಲ್ಪಿಸುವ ಮೂಲಕ ಮಹತ್ವ ನೀಡುತ್ತಿವೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಸರ್ಕಾರದಲ್ಲಿ ಶೇ. 33 ರಷ್ಟು ಮಹಿಳಾ ಮೀಸಲಾತಿ ಇದೆ. ಬೇಟಿ ಬಚಾವೋ ಬೇಟಿ ಪಡಾವೋ ಇದ–ರಿಂದ ಪ್ರತಿ ಹಂತಗಳಲ್ಲಿಯೂ ಮಹಿಳೆಯರ ಸಾಧನೆ ಮೇಲ್ಮೈಯಲ್ಲಿದೆ. ಪ್ರಸ್ತುತ ದಿನಮಾನದಲ್ಲಿ ಶಿಕ್ಷಣದಲ್ಲಿ ಬದಲಾವಣೆ ಆಗ್ತಾ ಇದೆ. ಹೀಗಾಗಿ ಪ್ರತಿಯೊಬ್ಬರ ದೇಶದ ಅಭಿಮಾನ ಬೆಳೆಸಿಕೊಳ್ಳಬೇಕೆಂದು ತಿಳಿಸಿದರು.

## ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ತಾಲ್ಲೂಕಿನಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಎಲ್ಲೆಡೆ ಜಾಗೃತಿ ಜಾಥಾ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ತಾಲ್ಲೂಕಿನ ತಹಶೀಲ್ದಾರ್ ಮಂಜುನಾಥ್ ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಯವರಾದ ಹೊಂಗಯ್ಯ ಕೆ ರವರು ಡೋಲು ಬಾರಿಸುವ ಮೂಲಕ ಇಂದು ಚಾಲನೆ ನೀಡಿದರು.

ತಾಲ್ಲೂಕಿನ ಗೋವಿಂದನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಹುಣಸೂರಿನಲ್ಲಿರುವ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಇಂದು ಆಯೋಜಿಸಲಾಗಿದ್ದ ಜಾಗೃತಿ ಜಾಥಾ ಮತ್ತು ಚಿತ್ರಕಲಾ ಸ್ಪರ್ಧಾ ಕಾರ್ಯಕ್ರಮದಲ್ಲಿ ಚಾಲನೆ ನೀಡಿದ ಇ.ಓ ಹೊಂಗಯ್ಯನವರು ಒಂದು ವಾರಗಳ ಕಾಲ ತಾಲ್ಲೂಕಿನಲ್ಲಿರುವ ಪ್ರೌಢಶಾಲೆಗಳಲ್ಲಿ ಮಕ್ಕಳಿಂದ ಮತದಾರರ ಪರಿಷ್ಕರಣೆಯ ಜಾಗೃತಿ ಮೂಡಿಸು ಚಿತ್ರಕಲೆಗಳನ್ನು ಬೀಡಿಸಿ ಪೋಷಕರಲ್ಲಿ ಅರಿವು ಮೂಡಿಸಲಾಗುತ್ತಿದೆಂದರು.



ಇದೇ ಸಂದರ್ಭದಲ್ಲಿ ತಾಲ್ಲೂಕಿನ ಹಳೇಬೀಡು ಗ್ರಾಮ ಪಂಚಾಯಿತಿಯಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಅರಿವು ಮೂಡಿಸಲು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ವೇಳೆ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರಾದ ರಾಮಣ್ಣ, ಮಾತನಾಡಿ ಗ್ರಾಮೀಣ ಭಾಗದಲ್ಲಿ ಮತದಾರರ ಪರಿಷ್ಕರಣೆಯಲ್ಲಿ ಯಾವ ಒಬ್ಬ ಪ್ರಜೇಯು ತಪ್ಪದೆ ಭಾಗವಹಿಸಿ ತಮ್ಮ ಮತವನ್ನು ಖಾತರಿ ಪಡಿಸಿಕೊಳ್ಳಿ ಎಂದರು.

ಇದರ ಅಂಗವಾಗಿ ನಮ್ಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಜೀವಿನ ಒಕ್ಕೂಟ ಸದಸ್ಯರು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತರು ರಂಗೋಲಿ ಬೀಡಿಸುವ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಿರುತ್ತಾರೆಂದರು.

## ಜನಸಂಖ್ಯೆ ನಿರ್ವಹಣೆಗೆ ಕಲ್ಯಾಣ ಕಾರ್ಯಕ್ರಮಗಳ ಸದ್ಬಳಕೆ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ತಾಯಿ ಮರಣ ಪ್ರಮಾಣ ಮತ್ತು ತೊಂದರೆ ತಡೆಗಟ್ಟುವುದು ವಿಶ್ವ ಜನಸಂಖ್ಯೆ ದಿನಾಚರಣೆಯ ಉದ್ದೇಶವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಸಂಪತ್ತ ಗುಣಾರಿ ಹೇಳಿದರು.

ವಿಜಯಪುರ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿರುವ ನಸಿರ್‌ಂಗ್ ಕಾಲೇಜಿನ ಆವರಣದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು. ಆರೋಗ್ಯಕರ ಸಮಯದಲ್ಲಿ ಗರ್ಭಧಾರಣೆ ಹಾಗೂ ಮಕ್ಕಳ ನಡುವೆ ಆರೋಗ್ಯಕರ ಅಂತರ ಕಾಪಾಡುವವರಿಂದ ತಾಯಿ ಮತ್ತು ಮಕ್ಕಳ ಆರೋಗ್ಯ ವೃದ್ಧಿಸುವದರೊಂದಿಗೆ ಅನಗತ್ಯ ಗರ್ಭಧಾರಣೆಯನ್ನು ತಡೆಗಟ್ಟಬಹುದಾಗಿದೆ ಎಂದ ಅವರು, ಮಹಿಳೆಯರ ಸಂತಾನೋತ್ಪತ್ತಿ ಆರೋಗ್ಯದ ಗುಣಮಟ್ಟ ಸುಧಾರಣೆ ಗರ್ಭಧಾರಣೆಗೆ ಆರೋಗ್ಯಕರ ಸಮಯ ಮತ್ತು ಗರ್ಭಧಾರಣೆಗಳ ನಡುವಿನ ಅಂತರವನ್ನು ಉತ್ತೇಜಿಸಬೇಕಿದೆ ಎಂದರು.



ಭಾರತ ಸ್ವಾತಂತ್ರ್ಯ ಪಡೆದುಕೊಂಡಾಗ ದೇಶದ ಜನಸಂಖ್ಯೆ ಕೇವಲ 33 ಕೋಟಿ ಇತ್ತು. ಕಳೆದ 79 ವರ್ಷಗಳಲ್ಲಿ ಜನಸಂಖ್ಯೆಯ ವಿಷಯದಲ್ಲಿ ಹಲವು ಮಹತ್ವದ ಬದಲಾವಣೆ ಮಾಡಲಾಗಿದೆ. ಪ್ರಸ್ತುತ ಭಾರತ ಜನಸಂಖ್ಯೆ 144 ಕೋಟಿಗೂ ಅಧಿಕ ಜನಸಂಖ್ಯೆ ಹೊಂದಿದೆ. ಆದ್ದರಿಂದ ವಿಶ್ವದಲ್ಲಿ ಅತ್ಯಧಿಕ ಜನಸಂಖ್ಯೆ ಹೊಂದಿದ ರಾಷ್ಟವಾಗಿ ಹೊರಹೊಮ್ಮಿದೆ. ಆದರೆ ಇತ್ತಿಚಿನ ವರ್ಷಗಳಲ್ಲಿ ಭಾರತ ದೇಶದ ಜನನ ದರ 1.94 ಕೈ ಕುಸಿದಿದೆ. ಇದು ಭವಿಷ್ಯದಲ್ಲಿ ಜನಸಂಖ್ಯೆಯ ಆಸಮತೋಲನಕ್ಕೆ ಕಾರಣವಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು. ಜಿಲ್ಲಾಸ್ಪತ್ರೆಯ ಶಸ್ತ್ರಚಿಕಿತ್ಸಕ ಡಾ. ಶಿವಾನಂದ ಮಾಸ್ತಿಹೊಳಿ ಮಾತನಾಡಿ, ವೃದ್ಧರ ಸಂಖ್ಯೆ ಹೆಚ್ಚಳಗೊಂಡು ದುಡಿಯುವ ಕೈಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಇದು ಮುಖ್ಯವಾಗಿ ದೇಶಕ್ಕೆ ಆರ್ಥಿಕ ದೃಷ್ಟಿಯಿಂದ ಅಪಾಯವಾಗುತ್ತದೆ ಎಂದರು.

ಕುಟುಂಬ ಕಲ್ಯಾಣಾಧಿಕಾರಿ ಡಾ.ರಾಜೇಶ್ವರಿ ಗೋಲಗೇರಿ ಮಾತನಾಡಿ, ಜನಸಂಖ್ಯೆಗೆ ಅನುಗುಣವಾಗಿ ಕುಟುಂಬ ಕಲ್ಯಾಣ ಕಾರ್ಯಕ್ರಮಗಳಾದ ಶಾಶ್ವತ ಹಾಗೂ ತಾತ್ಕಾಲಿಕ ವಿಧಾನಗಳನ್ನು ಮಹಿಳೆಯರಿಗೆ ಹಾಗೂ ಪುರುಷರಿಗೆ ಜಿಲ್ಲೆಯ ಎಲ್ಲ ತಾಲೂಕಾ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪಿಪಿಆಯುಸಿಡಿ ಚುಚ್ಚುಮದ್ದು, ಇಂಪ್ಲಾಂಟ ರಾಡ್ ಅಳವಡಿಕೆ. ಪುರುಷರಿಗೆ ನಿರೋಧ, ಶಾಶ್ವತ ವಿಧಾನಗಳಾದ ಮಹಿಳೆಯರಿಗೆ ಟ್ಯುಬೆಕ್ಟಮಿ, ಉದರದರ್ಶಕ ಶಸ್ತ್ರಚಿಕಿತ್ಸೆ ಪುರುಷರಿಗೆ ಪುರುಷ ಸಂತಾನ ನಿಯಂತ್ರಣ ಶಸ್ತ್ರಚಿಕಿತ್ಸೆ ಎಲ್ಲ ಆಸ್ಪತ್ರೆಗಳಲ್ಲಿ ಉಚಿತವಾಗಿ ನೀಡಲಾಗುತ್ತದೆ ಎಂದರು. ಅರವಳಿಕೆ ತಜ್ಞರಾದ ಡಾ. ಸಜ್ಜನ ಮಾತನಾಡಿ, ದೇಶದ ಜನಸಂಖ್ಯೆಯು 144 ಕೋಟಿಗೂ ಹೆಚ್ಚಾಗಿ ಅದರಲ್ಲಿ ನಮ್ಮ ದೇಶದಲ್ಲಿ ಯುವಕರೇ ಹೆಚ್ಚಿನ ಪ್ರಮಾಣದಲ್ಲಿದೆ. ಆದರಿಂದ ನಗರೀಕರಣ ನಿರುದ್ಯೋಗ ಮತ್ತು ಪರಿಸರ ಮಾಲಿನ್ಯದಂಥಹ ದೊಡ್ಡ ಸವಾಲುಗಳು ಈಗ ಎದುರಾಗಿವೆ. ಜನಸಂಖ್ಯೆಯು ಈಗ ಕೇವಲ ನಿಯಂತ್ರಣದ ವಿಷಯವಾಗಿರದೇ ನಿರ್ವಹಣೆಯ ವಿಷಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳಾದ ಎಂ.ಬಿ.ಬಿರಾದಾರ, ತಾಲೂಕು ಆರೋಗ್ಯಾಧಿಕಾರಿ ಡಾ. ಕೆ.ಡಿ ಗುಂಡಬಾವಡಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸುರೇಶ ಹೊಸಮನಿ, ಸುರೇಂದ್ರ ಮಾನಕರ, ಶಂಕರ ಚಲವಾದಿ, ರೇಖಾ ದಶವಂತ, ಮೋತಿಲಾಲ ಲಮಾಣಿ, ಎನ್.ಆರ್. ಬಾಗವಾನ, ನಸಿರ್‌ಂಗ್ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಸಹಾಯಕ ಮಲೇರಿಯಾ ಅಧಿಕಾರಿ ವಿರುಪಾಕ್ಷ ಬಂದಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.


## ಸತ್ತ ನಿನ್ನೆಯಲ್ಲ, ಜೀವಂತ ನಾಳೆಯಲ್ಲಿದೆ ಸಾಧನೆಯ ಭರವಸೆ



ಸಾಧನೆಯ ಭರವಸೆ
● ಪರಶುರಾಮ ಕರಣಂ
ಭಾಲ್ಕಿ

ಜೀವನದಲ್ಲಿ ಸೋಲು ಯಾರಿಗೂ ಹೊಸದಲ್ಲ. ಆದರೆ ಸೋತ ನಂತರ ನಾವು ತೆಗೆದುಕೊಳ್ಳುವ ನಿರ್ಧಾರವೇ ನಮ್ಮ ಭವಿಷ್ಯವನ್ನು ರೂಪಿಸುತ್ತದೆ. ಆದ್ದರಿಂದಲೇ "ಸಾಧನೆಗೆ ಸತ್ತ ನಿನ್ನೆಗಿಂತ ಜೀವಂತ ನಾಳೆ ಮುಖ್ಯ" ಎಂಬ ಮಾತು ಜೀವನದ ಶ್ರೇಷ್ಠ ಸತ್ಯವಾಗಿದೆ.

ಇತಿಹಾಸದ ಪುಟಗಳನ್ನು ತೆರೆದರೆ, ಮೊಘಲ್ ಚಕ್ರವರ್ತಿ ಹುಮಾಯೂನ್ ಅವರ ಬದುಕು ಈ ಸತ್ಯಕ್ಕೆ ಜೀವಂತ ಸಾಕ್ಷಿಯಾಗಿದೆ. ಶೇರ್ ಷಾ ಸೂರಿಯ ವಿರುದ್ಧದ ಯುದ್ಧದಲ್ಲಿ ಸೋತು, ತನ್ನ ವಿಶಾಲ ಸಾಮ್ರಾಜ್ಯವನ್ನು ಕಳೆದುಕೊಂಡ ಹುಮಾಯೂನ್ ಹಲವು ವರ್ಷಗಳ ಕಾಲ ದೇಶಾಂತರಗಳಲ್ಲಿ ಅಲೆದಾಡಬೇಕಾಯಿತು. ಅಧಿಕಾರ ಕಳೆದುಕೊಂಡರೂ ಆತ ಆತ್ಮವಿಶ್ವಾಸವನ್ನು ಕಳೆದುಕೊಳ್ಳಲಿಲ್ಲ. ನಿರಾಶೆಯ ಮುಂದೆ ತಲೆಬಾಗಲಿಲ್ಲ. ಛಲ, ಶ್ರದ್ಧೆ, ಪರಿಶ್ರಮ ಮತ್ತು ಅಚಲ ನಂಬಿಕೆಯೊಂದಿಗೆ ಸುಮಾರು ಹದಿನಾಲ್ಕು ವರ್ಷಗಳ ಬಳಿಕ ಮತ್ತೆ ತನ್ನ ಸಾಮ್ರಾಜ್ಯವನ್ನು ಮರಳಿ ಪಡೆದನು.



ಅವನ ಜೀವನ ನಮಗೆ ಒಂದು ಮಹತ್ವದ ಸಂದೇಶ ನೀಡುತ್ತದೆ. ಸೋಲು ಶಾಶ್ವತವಲ್ಲ; ಸೋಲಿನ ಮುಂದೆ ಶರಣಾಗುವುದೇ ಶಾಶ್ವತ ಸೋಲು.

ಹುಮಾಯೂನನ ಪುನರಾಗಮನವು ಕೇವಲ ಒಬ್ಬ ರಾಜನ ವಿಜಯವಲ್ಲ; ಅದು ಮಾನವನ ಆತ್ಮವಿಶ್ವಾಸದ ವಿಜಯವಾಗಿತ್ತು. ಮುಂದೆ ಅವನ ಮಗ ಅಕ್ಬರ್ ಇತಿಹಾಸದಲ್ಲೇ ಶ್ರೇಷ್ಠ ಚಕ್ರವರ್ತಿಗಳಲ್ಲಿ ಒಬ್ಬನಾಗಿ "ಅಕ್ಬರ್ ದಿ ಗ್ರೇಟ್" ಎಂಬ ಬಿರುದನ್ನು ಪಡೆದನು. ಒಂದು ತಲೆಮಾರಿನ ಛಲ ಮತ್ತೊಂದು ತಲೆಮಾರಿನ ವೈಭವಕ್ಕೆ ಅಡಿಪಾಯವಾಯಿತು.

ಇಂತಹ ಉದಾಹರಣೆಗಳು ಇತಿಹಾಸದಲ್ಲಿ ಮಾತ್ರವಲ್ಲ, ನಮ್ಮ ಸುತ್ತಮುತ್ತಲಿನ ಜೀವನದಲ್ಲಿಯೂ ಕಾಣುತ್ತವೆ. ಪರೀಕ್ಷೆಯಲ್ಲಿ ವಿಫಲರಾದ ವಿದ್ಯಾರ್ಥಿಗಳು ಮುಂದೆ ಸಾಧಕರಾಗಿದ್ದಾರೆ. ಉದ್ಯೋಗ ಕಳೆದುಕೊಂಡವರು ಉದ್ಯಮಿಗಳಾಗಿದ್ದಾರೆ. ಬಡತನವನ್ನು ಗೆದ್ದವರು ಸಮಾಜಕ್ಕೆ ಮಾದರಿಯಾಗಿದ್ದಾರೆ. ಎಲ್ಲರ ಯಶಸ್ಸಿನ ಹಿಂದೆ ಒಂದೇ ಶಕ್ತಿ ಇತ್ತು. "ನಾಳೆ ನನ್ನದು" ಎಂಬ ಅಚಲ ವಿಶ್ವಾಸ. ಗ್ರೀಕ್ ತತ್ವಜ್ಞಾನಿ ಸಾಕ್ರಟೀಸ್ ಹೇಳಿದ ಅಮೂಲ್ಯ ಮಾತು ಇಂದಿಗೂ ಪ್ರತಿಯೊಬ್ಬರಿಗೂ ದಾರಿದೀಪವಾಗಿದೆ:

"Don't ask for a lighter load, but pray for a stronger back."

ಅಂದರೆ, "ಜೀವನದ ಹೊರೆ ಕಡಿಮೆಯಾಗಲಿ ಎಂದು ಬೇಡಿಕೊಳ್ಳಬೇಡಿ; ಅದನ್ನು ಹೊರುವಷ್ಟು ಶಕ್ತಿ ನನಗೆ ದೊರೆಯಲಿ ಎಂದು ಪ್ರಾರ್ಥಿಸಿ."

ಜೀವನವು ಸವಾಲುಗಳಿಂದಲೇ ಸುಂದರವಾಗುತ್ತದೆ. ಪ್ರತಿಯೊಂದು ಸಂಕಷ್ಟವೂ ನಮ್ಮ ಸಾಮರ್ಥ್ಯವನ್ನು ಹೊರತರುವ ಅವಕಾಶವಾಗಿದೆ. ಸೋಲು ನಮ್ಮನ್ನು ಪರೀಕ್ಷಿಸುತ್ತದೆ; ಪರಿಶ್ರಮ ನಮ್ಮನ್ನು ರೂಪಿಸುತ್ತದೆ; ಆತ್ಮವಿಶ್ವಾಸ ನಮ್ಮನ್ನು ಯಶಸ್ಸಿನ ಶಿಖರಕ್ಕೆ ಕೊಂಡೊಯ್ಯುತ್ತದೆ.

ಹೀಗಾಗಿ, ಸತ್ತ ನಿನ್ನೆಯ ನೋವಿನಲ್ಲಿ ಬದುಕಬೇಡಿ. ಕಳೆದ ವೈಫಲ್ಯಗಳನ್ನು ನೆನೆದು ಕಣ್ಣೀರು ಸುರಿಸುವುದಕ್ಕಿಂತ, ನಾಳೆಯ ಯಶಸ್ಸಿನ ಕನಸು ಕಟ್ಟಿರಿ. ನಿಮ್ಮೊಳಗಿನ ಶಕ್ತಿಯನ್ನು ನಂಬಿ. ನಿಮ್ಮ ಗುರಿಯತ್ತ ದೃಢ ಹೆಜ್ಜೆ ಇಡಿ.

ಏಕೆಂದರೆ ಯಶಸ್ಸು ಎಂದಿಗೂ ಸೋಲದವರಿಗೆ ಸಿಗುವುದಿಲ್ಲ; ಸೋತರೂ ಮತ್ತೆ ಎದ್ದು ನಿಲ್ಲುವವರಿಗೆ ಮಾತ್ರ ಸಿಗುತ್ತದೆ.

ನಿನ್ನೆ ಒಂದು ಅನುಭವ... ಇಂದು ಒಂದು ಅವಕಾಶ... ನಾಳೆ ಒಂದು ಸಾಧನೆ.

ಆದ್ದರಿಂದ, ಸತ್ತ ನಿನ್ನೆಗಿಂತ ಜೀವಂತ ನಾಳೆಯನ್ನು ನಂಬಿ ಬದುಕೋಣ; ಸಾಧನೆಯ ಶಿಖರವನ್ನು ಮುಟ್ಟೋಣ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)